ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ
ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 206 RNI Number : KNKAN/25/A2770 06-08-2026 Thursday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :206 ರಾಯಚೂರು 06-08-2026 ಗುರುವಾರ ಪುಟ 04 ಬೆಲೆ ರೂ.2/- ಮೊ:8660146563

ನಾನು ಪಕ್ಷದ ವಿರುದ್ಧ ಮಾತಾಡಿಲ್ಲ': ಆರ್.ಬಿ. ತಿಮ್ಮಾಪುರ ಸ್ಪಷ್ಟನೆ

ದಾವಣಗೆರೆ: ನಾನು ಪಕ್ಷದ ಶಿಸ್ತಿನ ಸಿಪಾಯಿ. ಪಕ್ಷದ ವಿರುದ್ಧ ಮಾತನಾಡಿಲ್ಲ. ನಂಜಯ್ಯನಮಠ ಅವರು ಮಾತನಾಡಿದ್ದಾರೆ. ನೀವು ಕೇಳಿರಬಹುದು. ಹೈಕಮಾಂಡ್ ಬಗ್ಗೆ ನಾನು ಕೆಟ್ಟದಾಗಿ ಮಾತನಾಡಿಲ್ಲ. ಯಾರು ಹೇಳಿದ್ದಾರೋ, ಅವರನ್ನು ಕೇಳಿ ಎಂದು ವೈರಲ್ ಆಡಿಯೋ ಆರೋಪದ ಸಂಬಂಧ ಮಾಜಿ ಸಚಿವ ಆರ್.ಬಿ. ತಿಮ್ಮಾಪುರ ಪ್ರತಿಕ್ರಿಯಿಸಿದರು.



ನಗರದಲ್ಲಿ ಬುಧವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಹೊಸ ಮುಖ್ಯಮಂತ್ರಿ ಬಂದಾಗ ಅವರದ್ದೇ ಆದ ಮಂತ್ರಿಮಂಡಲ ಬರುವುದು ಸಹಜ. ಅದರಲ್ಲಿ ಬೇಸರ ಪಡುವಂತಹದ್ದು ಏನೂ ಇಲ್ಲ. ನನ್ನ ಬಗ್ಗೆ ಯಾರಾದರೂ ಹೈಕಮಾಂಡ್‌ಗೆ ಇಲ್ಲಸಲ್ಲದ್ದನ್ನು ಹೇಳಿದ್ದಕ್ಕೆ ಏನಾದರೂ ಸಚಿವ ಸ್ಥಾನ ಕೈತಪ್ಪಿರಬೇಕು. ಆದರೆ ನಮಗೂ ಮೊದಲೇ ಹೇಳಿದ್ದರೆ ಖುಷಿ ಇರುತ್ತಿತ್ತು. ಆದರೆ ಹೇಳದೆ ಹೀಗೆ ಮಾಡಿದ್ದಾರೆ. ಸಚಿವ ಸ್ಥಾನ ಕೈತಪ್ಪಿದ್ದಕ್ಕೆ ನೋವಿದೆ. ಆದರೆ ಅದು ಏಕೆ ತಪ್ಪಿದೆ ಎಂದು ಸ್ಪಷ್ಟನೆ ಬೇಕಿದೆ. ಸಿಎಂ ಕರೆದು ಯಾಕೆ ಸಚಿವ ಸ್ಥಾನ ತಪ್ಪಿದೆ ಎಂದು ಕಾರಣ ಹೇಳಬೇಕಿತ್ತು. ಅಬಕಾರಿ ಮಂತ್ರಿಯಾಗಿದ್ದಾಗ ಅಭಿವೃದ್ಧಿ ಮಾಡಿರುವೆ. ಇಲಾಖೆಯಲ್ಲಿ 20 ಹೊಸ ಆಯಾಮಗಳನ್ನು ತಂದಿದ್ದೆ ಎಂದರು.

ರಾಜಕಾರಣದಲ್ಲಿ ಷಡ್ಯಂತ್ರ ನಡೆಯುವುದು ಸಹಜ: ನನ್ನ ಮೇಲೆ ಆರೋಪಗಳಿವೆ ಅಂತಿದ್ದಾರೆ, ಆದರೆ ಯಾರು ಸಾಬೀತು ಮಾಡಿದ್ದಾರೆ. ಆರೋಪಗಳು ಯಾರ ಮೇಲೆ ಬಂದಿಲ್ಲ ಹೇಳಿ? ಗಾಂಧೀಜಿಯವರ ಮೇಲೆ, ಕೆಂಪೇಗೌಡರ ಮೇಲೆಯೂ ಸಾಕಷ್ಟು ಆರೋಪಗಳಿವೆ. ಅವೇನಾದರೂ ನಿಜವಾದವಾ? ಈಗ ನನ್ನ ವಿರುದ್ಧ ಸುಮ್ಮನೆ ಸುಳ್ಳು ಆರೋಪ ಮಾಡುತ್ತಿದ್ದಾರೆ. ಅಬಕಾರಿಯಲ್ಲಿ ಇದ್ದಾಗಲೂ ಅವ್ಯವಹಾರ ಆಗಿದೆ ಎಂದು ಆರೋಪ ಮಾಡಿದ್ದರು. ಆದರೆ ಅದು ಸಾಬೀತಾಗಿಲ್ಲ. ಈ ರೀತಿ ಸುಳ್ಳು ಆರೋಪಗಳಿಗೆ ಹೈಕಮಾಂಡ್‌ಗೆ ಮಿಸ್ ಗೈಡ್ ಆಗಿರಬಹುದು. ಪಕ್ಷಕ್ಕೆ ಯಾವುದೇ ಧಕ್ಕೆ ತರುವುದಿಲ್ಲ. ಮೊದಲು ಪಕ್ಷ, ಆಮೇಲೆ ಮಂತ್ರಿಗಿರಿ. ರಾಜಕಾರಣದಲ್ಲಿ ಷಡ್ಯಂತ್ರ ನಡೆಯುವುದು ಸಹಜ ಎಂದು ತಿಮ್ಮಾಪುರ ಹೇಳಿದರು.

ಶಾಸಕರು ರಾಜೀನಾಮೆ ನೀಡುವ ವಿಚಾರವಾಗಿ ಮಾತನಾಡಿ, ಶಾಸಕರು ರಾಜೀನಾಮೆ ಕೊಡದೆ ಪಕ್ಷದಲ್ಲೇ ಇದ್ದುಕೊಂಡು ಕೇಳಬೇಕು. ಹಾಗಂತ ಕಾಂಗ್ರೆಸ್ ಪಕ್ಷಕ್ಕೆ ರಾಜೀನಾಮೆ ಕೊಡುತ್ತೇವೆ ಎನ್ನುವುದು ಸರಿಯಲ್ಲ. ನಮ್ಮ

ಮೂರನೇಯ ಪುಟಕ್ಕೆ

ಅತೃಪ್ತ ಶಾಸಕರಿಂದ ಪ್ರತ್ಯೇಕ ಸಭೆ, ನಿಲ್ಲದ ಬಂಡಾಯ

ಬೆಂಗಳೂರು, ಆ.5- ಸಚಿವ ಸಂಪುಟ ವಿಸ್ತರಣೆ ಯಲ್ಲಿ ಅವಕಾಶ ವಂಚಿತರಾಗಿರುವ ಕಾಂಗ್ರೆಸ್‌ನ 30ಕ್ಕೂ ಹೆಚ್ಚು ಶಾಸಕರು ಗುರುವಾರ ಬೆಂಗಳೂರಿನಲ್ಲಿ ಮಹತ್ವದ ಸಭೆ ನಡೆಸಲಿದ್ದು, ಮುಂದಿನ ರಾಜಕೀಯ ನಡೆ ಕುರಿತು ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ.



ಈ ಸಭೆ ಕಾಂಗ್ರೆಸ್ ವಲಯದಲ್ಲಿ ತೀವ್ರ ಕುತೂಹಲಕ್ಕೆ ಕಾರಣವಾಗಿದೆ.ಸಚಿವ ಸಂಪುಟದಲ್ಲಿ ಸ್ಥಾನ ಸಿಗದ ಹಿನ್ನೆಲೆಯಲ್ಲಿ ಹಲವು ಹಿರಿಯ ಶಾಸಕರು ತೀವ್ರ ಅಸಮಾಧಾನ ಗೊಂಡಿದ್ದು, ಕೆಲವರು ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುವ ಆಯ್ಕೆಯನ್ನೂ ಪರಿಗಣಿಸಿದ್ದರು ಎನ್ನಲಾಗಿದೆ. ಆದರೆ ರಾಜೀನಾಮೆಯಿಂದ ನಿರೀಕ್ಷಿತ ರಾಜಕೀಯ ಪರಿಣಾಮ ಉಂಟಾಗುವುದಿಲ್ಲ ಎಂಬ ಅಭಿಪ್ರಾಯಕ್ಕೆ ಬಂದ ಹಿನ್ನೆಲೆಯಲ್ಲಿ ಹೊಸ ಕಾರ್ಯತಂತ್ರ ರೂಪಿಸಲು ಮುಂದಾಗಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಸಭೆಯಲ್ಲಿ ಕಾಂಗ್ರೆಸ್‌ನ ಹಿರಿಯ ಶಾಸಕರಾದ ಟಿ.ಬಿ. ಜಯಚಂದ್ರ, ಎನ್.ವೈ.ಗೋಪಾಲಕೃಷ್ಣ, ಆರ್.ವಿ. ದೇಶಪಾಂಡೆ, ಅಪ್ಪಾಜಿ ನಾಡಗೌಡ, ದಿನೇಶ್ ಗುಂಡೂರಾವ್, ಎಚ್.ಸಿ. ಮಹದೇವಪ್ಪ, ಶಿವಾನಂದ ಪಾಟೀಲ, ತನ್ವೀರ್ ಸೇಠ್, ಹಂಪನಗೌಡ ಬಾದರ್ಲಿ, ಎಸ್.ಆರ್. ಶ್ರೀನಿವಾಸ್, ಬಸವರಾಜ ನೀಲಪ್ಪ ಶಿವಣ್ಣನವರ್, ಎನ್.ಎ.ಹ್ಯಾರಿಸ್, ರಹೀಂ ಖಾನ್, ಎಸ್.ಎನ್. ನಾರಾಯಣಸ್ವಾಮಿ, ಪ್ರಸಾದ್ ಅಬ್ಬಯ್ಯ, ಪಿ.ಎಂ. ಅಶೋಕ್, ಎ.ಆರ್. ಕೃಷ್ಣಮೂರ್ತಿ, ಕೆ.ಎನ್. ರಾಜಣ್ಣ, ರಾಘವೇಂದ್ರ ಹಿಟ್ನಾಳ್, ಕೆ. ಷಡಕ್ಷರಿ, ಡಾ. ಎಂ.ಸಿ. ಸುಧಾಕರ್ ಸೇರಿದಂತೆ ಹಲವು ಶಾಸಕರು ಭಾಗವಹಿಸುವ ಸಾಧ್ಯತೆ ಇದೆ.

ಒಂದೆಡೆ ಮುಖ್ಯಮಂತ್ರಿ ಹಾಗೂ ಪಕ್ಷದ ಹಿರಿಯ ನಾಯಕರು ಅಸಮಾಧಾನಿತ ಶಾಸಕರನ್ನು ಮನವೊಲಿಸಲು ಸಂಧಾನದ ಪ್ರಯತ್ನ ಮುಂದುವರಿಸಿರುವ ನಡುವೆಯೇ, ಅವಕಾಶ ವಂಚಿತ ಹಿರಿಯ ಶಾಸಕರ ಈ ಪ್ರತ್ಯೇಕ ಸಭೆ ರಾಜಕೀಯವಾಗಿ ಮಹತ್ವ ಪಡೆದುಕೊಂಡಿದೆ.

ಸಚಿವ ಸ್ಥಾನ ಕೈತಪ್ಪಿರುವುದಕ್ಕೆ

ಮೂರನೇಯ ಪುಟಕ್ಕೆ

ಎ.ವಸಂತ್‌ಕುಮಾರ್‌ಗೆ ಸಚಿವ ಸ್ಥಾನ ನೀಡದಿರುವುದು ಮಾದಿಗ ಸಮುದಾಯಕ್ಕೆ ಅನ್ಯಾಯ: ವಿಜಯರಾಣಿ

ರಾಯಚೂರು,ಆ.5-

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ನೂತನ ಸಚಿವ ಸಂಪುಟದಲ್ಲಿ ಮಾದಿಗ ಸಮುದಾಯವನ್ನು ಸಂಪೂರ್ಣವಾಗಿ ಕಡೆಗಣಿಸಲಾಗಿದ್ದು, ಕಾಂಗ್ರೆಸ್ ಸರ್ಕಾರ ನೀಡಿದ್ದ ಭರವಸೆಗಳನ್ನು ಉಲ್ಲಂಘಿಸಿದೆ ಎಂದು ಆರೋಪಿಸಿ ಮಹಿಳಾ ಶಕ್ತಿ ಸಂಘಟನೆ ಹಾಗೂ ಮಾದಿಗ ಸಮುದಾಯದ ಮುಖಂಡರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ರಾಯಚೂರು ಜಿಲ್ಲೆಯ ಹಿರಿಯ ಕಾಂಗ್ರೆಸ್ ಮುಖಂಡ ಎ. ವಸಂತ್ ಕುಮಾರ್ ಅವರಿಗೆ ಸಚಿವ ಸ್ಥಾನ ನೀಡಿ ಜಿಲ್ಲೆಯ ಉಸ್ತುವಾರಿ ಹೊಣೆಗಾರಿಕೆಯನ್ನೂ ನೀಡಬೇಕು



ಎಂದು ಆಗ್ರಹಿಸಿದರು.

ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮಹಿಳಾ ಶಕ್ತಿ ಸಂಘಟನೆ ಅಧ್ಯಕ್ಷೆ ವಿಜಯರಾಣಿ, ಸಚಿವ ಸಂಪುಟದಲ್ಲಿ ಎಸ್‌ಟಿ ಸಮುದಾಯಕ್ಕೆ ಮೂರು, ಮುಸ್ಲಿಂ ಸಮುದಾಯಕ್ಕೆ ಮೂರು ಹಾಗೂ ಪರಿಶಿಷ್ಟ ಜಾತಿಯ ಬಲಗೈ ಸಮುದಾಯಕ್ಕೆ ಮೂರು ಸಚಿವ ಸ್ಥಾನಗಳನ್ನು ನೀಡಲಾಗಿದೆ. ಆದರೆ ಮಾದಿಗ ಸಮುದಾಯಕ್ಕೆ ಯಾವುದೇ ಸೂಕ್ತ ಪ್ರಾತಿನಿಧ್ಯ ನೀಡದೇ ಅನ್ಯಾಯ ಮಾಡಲಾಗಿದೆ ಎಂದು ಆರೋಪಿಸಿದರು.

ಒಳಮೀಸಲಾತಿ ಜಾರಿಗೊಳಿಸುವ ಸಂದರ್ಭದಲ್ಲಿ ಎಡ ಹಾಗೂ ಬಲ ಸಮುದಾಯಗಳಿಗೆ ಸಮಾನ ಅವಕಾಶ ಕಲ್ಪಿಸಲಾಗುವುದು ಎಂದು ಕಾಂಗ್ರೆಸ್ ನಾಯಕರು ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಾರ್ವಜನಿಕವಾಗಿ ಭರವಸೆ ನೀಡಿದ್ದರು. ಆದರೆ ಅಧಿಕಾರಕ್ಕೆ ಬಂದ ಬಳಿಕ ಆ ಮಾತನ್ನು ಉಳಿಸಿಕೊಳ್ಳದೇ ಮಾದಿಗ ಸಮುದಾಯವನ್ನು ಕಡೆಗಣಿಸಲಾಗಿದೆ ಎಂದು ಅವರು ಟೀಕಿಸಿದರು.

ಮೂರನೇಯ ಪುಟಕ್ಕೆ

ಡಿಸಿಸಿ ಬ್ಯಾಂಕ್ ಸಾರ್ವಜನಿಕ ಪ್ರಾಧಿಕಾರ: ಮಾಹಿತಿ ಆಯೋಗದ ಐತಿಹಾಸಿಕ ತೀರ್ಪು

ಕಲಬುರಗಿ-ಯಾದಗಿರಿ ಡಿಸಿಸಿ ಬ್ಯಾಂಕ್‌ಗೂ ಆರ್‌ಟಿಐ ಅನ್ವಯ; ಪಿಐಒ, ಮೇಲ್ಮನವಿ ಪ್ರಾಧಿಕಾರಿ ನೇಮಕಕ್ಕೆ ನಿರ್ದೇಶನ

ಕಲಬುರಗಿ, ಆ. 5:

ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠವು ಮಹತ್ವದ ತೀರ್ಪೊಂದರಲ್ಲಿ ಕಲಬುರಗಿ-ಯಾದಗಿರಿ ಜಿಲ್ಲಾ ಸಹಕಾರ ಕೇಂದ್ರ (ಡಿಸಿಸಿ) ಬ್ಯಾಂಕ್‌ನ್ನು ಸಾರ್ವಜನಿಕ ಪ್ರಾಧಿಕಾರ ಎಂದು ಘೋಷಿಸಿದೆ. ಈ ಮೂಲಕ ಮಾಹಿತಿ ಹಕ್ಕು ಅಧಿನಿಯಮ, 2005ರ ವ್ಯಾಪ್ತಿಗೆ ಬ್ಯಾಂಕ್ ಒಳಪಡುವುದಾಗಿ ಸ್ಪಷ್ಟಪಡಿಸಿ, ಸಾರ್ವಜನಿಕ ಮಾಹಿತಿ ಅಧಿಕಾರಿ () ಹಾಗೂ ಪ್ರಥಮ ಮೇಲ್ಮನವಿ ಪ್ರಾಧಿಕಾರಿಯನ್ನು ನೇಮಿಸಿ, ಕಾಯ್ದೆಯಡಿ ಕಡ್ಡಾಯ ಮಾಹಿತಿಯನ್ನು ಪ್ರಕಟಿಸುವಂತೆ ನಿರ್ದೇಶನ ನೀಡಿದೆ.

ರಾಜಕುಮಾರ ಆಳಂದ ಅವರು ಮಾಹಿತಿ ಹಕ್ಕು ಅಧಿನಿಯಮದಡಿ ಸಲ್ಲಿಸಿದ್ದ ಅರ್ಜಿಗೆ ಬ್ಯಾಂಕ್ ಮಾಹಿತಿ ನೀಡಲು ನಿರಾಕರಿಸಿತ್ತು.



ಬ್ಯಾಂಕ್ ಸರ್ಕಾರದಿಂದ ಗಣನೀಯ ಆರ್ಥಿಕ ನೆರವು ಪಡೆಯುವುದಿಲ್ಲ ಹಾಗೂ ಆದ್ದರಿಂದ ಮಾಹಿತಿ ಹಕ್ಕು ಕಾಯ್ದೆಯ ವ್ಯಾಪ್ತಿಗೆ ಬರುವುದಿಲ್ಲ ಎಂದು ಸಮರ್ಥಿಸಿಕೊಂಡಿತ್ತು. ಇದನ್ನು ಪ್ರಶ್ನಿಸಿ ಸಲ್ಲಿಸಲಾದ ದ್ವಿತೀಯ ಮೇಲ್ಮನವಿಯ ವಿಚಾರಣೆ ನಡೆಸಿದ ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ಆಯುಕ್ತ ಬಿ. ವೆಂಕಟಸಿಂಗ್ ಅವರು ಜುಲೈ 30ರಂದು ಮಹತ್ವದ ಆದೇಶ ಹೊರಡಿಸಿದ್ದಾರೆ.

ಆದೇಶದಲ್ಲಿ, ಬ್ಯಾಂಕ್ ನೇರ ಆರ್ಥಿಕ ನೆರವು ಪಡೆಯದಿದ್ದರೂ ಸರ್ಕಾರದ ನಿಯಂತ್ರಣ, ನಿರ್ದೇಶನ ಹಾಗೂ ಮೇಲ್ವಿಚಾರಣೆಯಡಿ ಕಾರ್ಯನಿರ್ವಹಿಸುತ್ತಿದೆ ಎಂದು ಆಯೋಗ ಅಭಿಪ್ರಾಯಪಟ್ಟಿದೆ. ಸರ್ಕಾರದಿಂದ ಷೇರು ಬಂಡವಾಳ, ಮುಖ್ಯ ಕಾರ್ಯನಿರ್ವಾಹಣಾಧಿಕಾರಿಯ ನೇಮಕ,

ಮೂರನೇಯ ಪುಟಕ್ಕೆ

ವಾಲ್ಮೀಕಿ ನಿಗಮ ಅಧ್ಯಕ್ಷ ಸ್ಥಾನಕ್ಕೆ ಬಸನಗೌಡ ದದ್ದಲ್ ರಾಜೀನಾಮೆ

ಸಚಿವಸ್ಥಾನಕೈತಪ್ಪಿದಬೆನ್ನಲ್ಲೇ ಮಹತ್ವದನಿರ್ಧಾರ; ರಾಜ್ಯ ರಾಜಕೀಯದಲ್ಲಿತೀವ್ರ ಚರ್ಚೆ





ರಾಯಚೂರು,ಆ.5-

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ (ಸಂಪುಟ ದರ್ಜೆ) ಸ್ಥಾನಕ್ಕೆ ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್ ರಾಜೀನಾಮೆ ಸಲ್ಲಿಸಿದ್ದು, ರಾಜ್ಯ ರಾಜಕೀಯದಲ್ಲಿ ಹೊಸ ಚರ್ಚೆಗೆ ಕಾರಣವಾಗಿದೆ. ಸಚಿವ ಸಂಪುಟ ರಚನೆಯಲ್ಲಿ ಪ್ರಬಲ ಸಚಿವಾಕಾಂಕ್ಷಿಯಾಗಿದ್ದ ದದ್ದಲ್ ಅವರ ಈ ನಡೆ ರಾಜಕೀಯ ವಲಯದಲ್ಲಿ ಕುತೂಹಲ ಮೂಡಿಸಿದೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಸಲ್ಲಿಸಿರುವ ರಾಜೀನಾಮೆ ಪತ್ರದಲ್ಲಿ, ನನ್ನ ಸ್ವ-ಇಚ್ಛೆಯಿಂದ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸುತ್ತಿದ್ದೇನೆ. ದಯವಿಟ್ಟು ಈ ಕೂಡಲೇ ಅಂಗೀಕರಿಸಬೇಕು ಎಂದು ಕೋರಿದ್ದಾರೆ.

ರಾಜ್ಯ ಸಚಿವ ಸಂಪುಟದಲ್ಲಿ ಸ್ಥಾನಕ್ಕಾಗಿ ಬಸನಗೌಡ ದದ್ದಲ್ ಅವರು ಬಲವಾದ ಪ್ರಯತ್ನ ನಡೆಸಿದ್ದರು. ತಮ್ಮ ಕ್ಷೇತ್ರದ ಅಭಿವೃದ್ಧಿ ಕಾರ್ಯಗಳ ವರದಿಯನ್ನು ವರಿಷ್ಠರ ಮುಂದೆ ಮಂಡಿಸಿ ಸಚಿವ ಸ್ಥಾನಕ್ಕೆ ಹಕ್ಕು ಪ್ರತಿಪಾದಿಸಿದ್ದರು. ಆದರೆ ಸಚಿವ ಸ್ಥಾನ ಸಿಗದ ಹಿನ್ನೆಲೆಯಲ್ಲಿ ಅವರು ನಿಗಮದ ಅಧ್ಯಕ್ಷ ಸ್ಥಾನಕ್ಕೂ ರಾಜೀನಾಮೆ ನೀಡಿರುವುದು ರಾಜಕೀಯ ಮಹತ್ವ ಪಡೆದಿದೆ.

ಹೊಸ ಸಚಿವ ಸಂಪುಟದಲ್ಲಿ ರಾಯಚೂರು ಜಿಲ್ಲೆಗೆ ಒಂದೇ


ಮೂರನೇಯ ಪುಟಕ್ಕೆ

ಬಹುಮುಖ ಪ್ರತಿಭೆ ಶ್ರೀ ಗೌರಿ ಪಲ್ಲಕ್ಕಿ ರಾಷ್ಟ್ರೀಯ ಪ್ರಶಸ್ತಿಗೆ ಆಯ್ಕೆ

ರಾಯಚೂರು,ಆ.5-

ಭರತನಾಟ್ಯ ಗಾಯನ. ಚಿತ್ರಕಲೆ. ಯೋಗ ಎಲ್ಲಾ ಕಲೆಗಳನ್ನು ಒಗ್ಗೂಡಿಸಿಕೊಂಡಿರುವ ಅಪರೂಪ'ದ ಕಲಾವಿದೆ ಬಹುಮುಖ ಪ್ರತಿಭೆ ರಾಯಚೂರು ನಗರದ ಎಎಂಇಎಸ್ ಕಾಲೇಜಿನ ಬಿಸಿಎ ವಿದ್ಯಾರ್ಥಿನಿ ಕುಮಾರಿ ಶ್ರೀ ಗೌರಿ ಪಲ್ಲಕ್ಕಿ ತಂದೆ ಗುರುಪಾದಪ್ಪ ಪಲ್ಲಕ್ಕಿ ಇವರಿಗೆ ರಾಷ್ಟ್ರಮಟ್ಟದ ರಾಷ್ಟ್ರೀಯ ಕಲಾ ರತ್ನ ಪ್ರಶಸ್ತಿಗೆ ಆಯ್ಕೆ ಯಾಗಿದ್ದಾರೆಂದು ಗೋವಾ ರಾಜ್ಯದ ಕದಂಬ ಫೌಂಡೇಶನ್ (ರಿ) ಅಧ್ಯಕ್ಷರಾದ ಬಾಳೇಶ್ ಅವರು ಪತ್ರಿಕೆಗೆ ತಿಳಿಸಿದ್ದಾರೆ.

ಇದೆ 23ರಂದು ರವಿವಾರ ಗೋವಾ ರಾಜಧಾನಿ ಪಣಜಿಯ ಬ್ರಿಜೇಂಗ್ ಸಭಾಂಗಣದಲ್ಲಿ ನಡೆಯಲಿರುವ ಶ್ರಾವಣ ಬಂತು



ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ 10 ಜನ ಸಾಧಕರಿಗೆ ರಾಷ್ಟ್ರ ಮಟ್ಟದಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಾಯಚೂರಿನ ಶ್ರೀ ಗೌರಿ ಪಲ್ಲಕ್ಕಿ ಅವರಿಗೆ ಪ್ರಶಸ್ತಿ ಪ್ರದಾನವನ್ನು

ಗೋವಾ ರಾಜ್ಯದ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಡಾ. ಸಿದ್ದಣ್ಣ ಮೇಟಿ. ಕಲಂಗುಟಿ ಕನ್ನಡ

ಮೂರನೇಯ ಪುಟಕ್ಕೆ

ವೈಟಿಪಿಎಸ್ ಗುತ್ತಿಗೆ ಕಾರ್ಮಿಕರ ಸಂಘದ ಗೌರವ ಅಧ್ಯಕ್ಷರಿಗೆ ಕೊಲೆ ಬೆದರಿಕೆ ಆರೋಪ; ಪೊಲೀಸ್ ಠಾಣೆಗೆ ದೂರು



ರಾಯಚೂರು,ಆ.5-

ವೈಟಿಪಿಎಸ್ () ಗುತ್ತಿಗೆ ಕಾರ್ಮಿ ಕರ ಸಮಸ್ಯೆಗಳ ಪರಿಹಾರಕ್ಕಾಗಿ ಆಡಳಿತ ಮಂಡಳಿಯೊಂದಿಗೆ ಯಶಸ್ವಿಯಾಗಿ ಮಾತುಕತೆ ನಡೆಸಿದ ಬೆನ್ನಲ್ಲೇ ಮತ್ತೊಂದು ಕಾರ್ಮಿಕ ಸಂಘದ ಮುಖಂಡರಿಂದ ಜೀವ ಬೆದರಿಕೆ ಬಂದಿದೆ ಎಂದು ಆರೋಪಿಸಿ ಆರ್‌ಪಿಸಿಎಲ್/ವೈಟಿಪಿಎಸ್ ಗುತ್ತಿಗೆ ಕಾರ್ಮಿಕರ ಸಂಘದ (ರಿ) ಗೌರವ ಅಧ್ಯಕ್ಷ ಜಿ.ವಿ. ಲಕ್ಷ್ಮಿಕಾಂತ ರೆಡ್ಡಿ ಅವರು ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಗೆ ದೂರು ಸಲ್ಲಿಸಿದ್ದಾರೆ.

ದೂರಿನ ಪ್ರಕಾರ, ಆಗಸ್ಟ್ 4ರಂದು ವೈಟಿಪಿಎಸ್ ಆಡಳಿತ ಮಂಡಳಿಯೊಂದಿಗೆ ನಡೆದ ಸಭೆಯಲ್ಲಿ ಜೂನ್ ಜುಲೈ ತಿಂಗಳ ₹2,500 ಬಾಕಿ ವೇತನ ಪಾವತಿ ಹಾಗೂ ಬೇರೆ ವಿಭಾಗಕ್ಕೆ ವರ್ಗಾವಣೆಗೊಂಡಿದ್ದ 14 ಗುತ್ತಿಗೆ ಕಾರ್ಮಿಕರನ್ನು ಮರು ಅದೇ ವಿಭಾಗಕ್ಕೆ ನಿಯೋಜಿಸುವಂತೆ

ಮೂರನೇಯ ಪುಟಕ್ಕೆ

ಕರ್ನಾಟಕದ ಭತ್ತದ ಕಣಜಗಳಲ್ಲಿ ಏರುಪೇರು; ಬಿತ್ತನೆಯೂ ಕಡಿಮೆ,ಅಕ್ಕಿ ದರ ಮತ್ತೆ ಏರಿಕೆ

ಬೆಂಗಳೂರು: ಕರ್ನಾಟಕದಲ್ಲಿ ಈ ಬಾರಿ ಭತ್ತದ ಬಿತ್ತನೆಯಲ್ಲಿ ಭಾರಿ ಪ್ರಮಾಣದಲ್ಲಿಯೇ ಏರುಪೇರಾಗುವ ಲಕ್ಷಣಗಳು ಕಾಣಿಸುತ್ತಿವೆ. ಇದರಿಂದ ಅಕ್ಕಿ ದರವೂ ದುಬಾರಿಯಾಗುತ್ತಿದೆ,

ಕರ್ನಾಟಕದ ಭತ್ತದ ಕಣಜ ಎನ್ನಿಸಿರುವ ರಾಯಚೂರುಕೊಪ್ಪಳಬಳ್ಳಾರಿ ಭಾಗದಲ್ಲಿ ಸತತ ಎರಡನೇ ವರ್ಷವೂ ಭತ್ತದ ಬೆಳೆಗೆ ನೀರಿಲ್ಲದೇ ಅಕ್ಕಿ ಪ್ರಮಾಣದಲ್ಲಿ ವ್ಯತ್ಯಾಸವಾಗಿದೆ. ವಾರದ ಹಿಂದೆಯಷ್ಟೇ ಅಕ್ಕಿ ಏರಿಕೆಯಾಗಿದ್ದು. ಇನ್ನಷ್ಟು ಏರಿಕೆಯಾಗುವ ಲಕ್ಷಗಳು ಕಾಣುತ್ತಿವೆ. ಮೈಸೂರು, ಮಂಡ್ಯ, ದಾವಣಗೆರೆ ನಭಾಗದ ರೈತರು ಭತ್ತದ ಬಿತ್ತನೆ ಮಾಡುವ ಸಾಹಸಕ್ಕೆ ಹೋಗಿಲ್ಲ.

ಎಲ್ಲಿ ಎಷ್ಟು ಬಿತ್ತನೆ

ಕರ್ನಾಟಕದಲ್ಲಿ 202627ನೇ ಸಾಲಿನಲ್ಲಿ 10 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಭತ್ತದ ಬಿತ್ತನೆ ಆಗಬೇಕಾಗಿತ್ತು. ಆದರೆ ಮಳೆ ಕೊರತೆ, ಜಲಾಶಯಗಳಲ್ಲಿ ನೀರಿನ ಕೊರತೆಯಿಂದಾಗಿ ಬರೀ 2.02 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬಿತ್ತನೆಯಾಗಿದೆ. ಅಂದರೆ ಶೇ 20ರಷ್ಟು ಬಿತ್ತನೆಯಾಗಿಲ್ಲ.

ಅತಿ ಹೆಚ್ಚು ಭತ್ತ ಬೆಳೆಯುವ ರಾಯಚೂರು ಜಿಲ್ಲೆಯಲ್ಲಿ ಬರೀ ಶೇ 2ರಷ್ಟು ಮಾತ್ರ ಈವರೆಗೂ ಬಿತ್ತನೆಯಾಗಿದೆ. ರಾಯಚೂರು ಜಿಲ್ಲೆಯ 1,90,638 ಹೆಕ್ಟೇರ್ ಪ್ರದೇಶದಲ್ಲಿ ಭತ್ತ ಬೆಳೆದರೆ, ಬಿತ್ತನೆಯಾಗಿರುವುದು ಬರೀ 4020 ಹೆಕ್ಟೇರ್ ಮಾತ್ರ, ಬಳ್ಳಾರಿ ಜಿಲ್ಲೆಯ 87741 ಹೆಕ್ಟೇರ್ ಪ್ರದೇಶದಲ್ಲಿ ಬರೀ 6397 ಹೆಕ್ಟೇರ್ ಮಾತ್ರ ಬಿತ್ತನೆಯಾಗಿದ್ದು ಶೇ 10ರಷ್ಟು ಗುರಿ ಮುಟ್ಟಲಾಗಿದೆ.

ದಾವಣಗೆರೆ ಜಿಲ್ಲೆಯಲ್ಲಿ ಶೇ 1, ಶಿವಮೊಗ್ಗ ಜಿಲ್ಲೆಯಲ್ಲಿ ಶೇ 10, ಯಾದಗಿರಿ ಜಿಲ್ಲೆಯಲ್ಲಿ ಶೇ 20, ಕೊಪ್ಪಳ ಜಿಲ್ಲೆಯಲ್ಲಿ ಶೇ 22ರಷ್ಟು ಬಿತ್ತನೆಯಾಗಿದ್ದರೆ, ಮೈಸೂರು, ಮಂಡ್ಯ ಜಿಲ್ಲೆಯಲ್ಲಿ ಬಿತ್ತನೆಯನ್ನೇ ಮಾಡಿಲ್ಲ. ಕೊಡಗು ಹಾಗೂ ಹಾಸನ ಜಿಲ್ಲೆಯಲ್ಲಿ ತಲಾ ಶೇ 7ರಷ್ಟು, ಚಿಕ್ಕಮಗಳೂರು ಜಿಲ್ಲೆಯಲ್ಲಿ ಶೇ 12 ಮಾತ್ರ ಬಿತ್ತನೆ ಪೂರ್ಣಗೊಂಡಿದೆ.

ಮಳೆಯಾಶ್ರಿತ ಜಿಲ್ಲೆಯಲ್ಲಿ ಅಧಿಕ

ಆದರೆ, ಮಳೆಯಾಶ್ರಿತ ಬೆಳಗಾವಿ, ದಕ್ಷಿಣ ಕನ್ನಡ, ಧಾರವಾಡ, ಬೀದರ್, ಉಡುಪಿ, ಹಾವೇರಿ, ಗದಗ, ಉತ್ತರ ಕನ್ನಡ, ವಿಜಯನಗರ ಮಾತ್ರ ಗುರಿ ತಲುಪಲಾಗಿದೆ. ಬೆಳಗಾವಿಯಲ್ಲಿ ಶೇ 89, ಧಾರವಾಡದಲ್ಲಿ ಶೇ 85, ದಕ್ಷಿಣ ಕನ್ನಡದಲ್ಲಿ ಶೇ 82, ಬೀದರ್ ಜಿಲ್ಲೆಯಲ್ಲಿ ಶೇ 79, ಗದಗ ಜಿಲ್ಲೆಯಲ್ಲಿ ಶೇ 67, ಉಡುಪಿ ಜಿಲ್ಲೆಯಲ್ಲಿ ಶೇ 64, ಹಾವೇರಿ ಜಿಲ್ಲೆಯಲ್ಲಿ ಶೇ 56, ಉತ್ತರ ಕನ್ನಡ ಜಿಲ್ಲೆಯಲ್ಲಿ ಶೇ 46, ವಿಜಯನಗರ ಜಿಲ್ಲೆಯಲ್ಲಿ ಶೇ 43ರಷ್ಟು ಬಿತ್ತನೆ ಮಾಡಲಾಗಿದೆ.

ಕರ್ನಾಟಕದಲ್ಲಿ ಮಳೆಯಾಶ್ರಿತ ಹಾಗೂ ನೀರಾವರಿ ಆಶ್ರಿತವಾಗಿ ಭತ್ತ ಬೆಳೆಯುವ 15ಕ್ಕೂ ಹೆಚ್ಚು ಜಿಲ್ಲೆಗಳಿವೆ. ಇದರಲ್ಲಿ ಮಳೆಯಾಶ್ರಿತ ಬೆಳಗಾವಿ, ದಕ್ಷಿಣ ಕನ್ನಡ, ಧಾರವಾಡ ಭಾಗಗಳಲ್ಲಿ ಬಿತ್ತನೆ ಪ್ರಮಾಣ ಅಧಿಕವಾಗಿದೆ. ಇಲ್ಲಿ ಉತ್ತಮ ಮಳೆಯಾಗಿರುವುದು ಇದಕ್ಕೆ ಕಾರಣ. ಆದರೆ, ನಾಲೆ ನೀರನ್ನೇ ನಂಬಿರುವ ರಾಯಚೂರು, ಮಂಡ್ಯ, ಮೈಸೂರು, ಬಳ್ಳಾರಿ ಜಿಲ್ಲೆಗಳಲ್ಲಿ ಭತ್ತದ ನಾಟಿ ಪ್ರಮಾಣ ಕಡಿಮೆ ಇದೆ. ತುಂಗಭದ್ರಾ, ಕೆಆರ್‌ಎಸ್, ಕಬಿನಿ ಜಲಾಶಯದ ನಾಲೆಗಳಿಗೆ ಇನ್ನೂ ನೀರು ಹರಿಸಿಲ್ಲ. ಸದ್ಯಕ್ಕಂತೂ ನೀರಾವರಿಗೆ ನೀರಿಲ್ಲ ಎನ್ನುವ ಘೋಷಣೆ ಮಾಡಲಾಗಿದೆ. ಮುಂದೆ ಜಲಾಶಯಗಳು ಭರ್ತಿಯಾದರೆ ಸರ್ಕಾರದ ತೀರ್ಮಾನ ಆಧರಿಸಿ ನಿರ್ಧಾರ ಪ್ರಕಟಿಸಲಾಗುತ್ತದೆ ಎಂದು ಕೃಷಿ ಇಲಾಖೆ ಆಯುಕ್ತ ಡಾ.ಬಿ.ಸಿ.ಸತೀಶ ಹೇಳುತ್ತಾರೆ.

ಅಕ್ಕಿ ದರದಲ್ಲಿ ಏರಿಕೆ

ಈ ನಡುವೆ ಭತ್ತದ ಉತ್ಪಾದನೆ ಕಡಿಮೆಯಾಗಿರುವುದರಿಂದ ಅಕ್ಕಿಯ ದರದಲ್ಲಿ ಏರಿಕೆಯಾಗಿದೆ. ಒಂದು ವಾರದ ಅವಧಿಯಲ್ಲಿ ರಾಯಚೂರು, ಕೊಪ್ಪಳ, ಬಳ್ಳಾರಿ ಜಿಲ್ಲೆಗಳ ಸೋನಾ ಮಸೂರಿ ಸಹಿತ ವಿವಿಧ ಅಕ್ಕಿ ಮಾರಾಟ ದರವು ಕೆಜಿಗೆ ₹8 ರಿಂದ ₹10 ಏರಿಕೆಯಾಗಿದೆ. ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚುವ ಆತಂಕವಿದೆ.

ಹಿಂದಿನಿಂದಲೂ ಕರ್ನಾಟಕದಲ್ಲಿ ಬೆಳೆಯ ಭತ್ತವನ್ನು ಅಕ್ಕಿ ಮಾಡಿಸಿ ಮಾರಾಟ ಮಾಡುವ ವ್ಯವಸ್ಥೆಯಿದೆ. ನೆರೆಯ ಆಂಧ್ರಪ್ರದೇಶ, ತೆಲಂಗಾಣದಿಂದಲೂ ಅಕ್ಕಿ ಮಾರುಕಟ್ಟೆಗೆ ಬರಲಿದೆ. ಇದರಲ್ಲಿ ಹೊಸ ಅಕ್ಕಿ ಹಾಗೂ ಹಳೆಯ ಅಕ್ಕಿಗೆ ದರ ವ್ಯತ್ಯಾಸ ಇರುತ್ತದೆ. ಈ ಬಾರಿ ಆಂಧ್ರ, ತೆಲಂಗಾಣದಲ್ಲೂ ಮಳೆ ಕೊರತೆ ಆಗಿ ಅಲ್ಲಿಯೂ ಅಕ್ಕಿ ಉತ್ಪಾದನೆ ಕಡಿಮೆಯಾಗಿದೆ. ಇದರಿಂದ ಕರ್ನಾಟಕಕ್ಕೆ ಅಲ್ಲಿಂದ ಅಕ್ಕಿ ಬರುತ್ತಿಲ್ಲ. ಈ ಕಾರಣದಿಂದಲೂ ಅಕ್ಕಿ ದರದಲ್ಲಿ ಏರಿಕೆ ಕಂಡು ಬಂದಿದೆ.

ಮೂರನೇಯ ಪುಟಕ್ಕೆ

95 ವಿದ್ಯುತ್ ಕಳ್ಳತನ ಪ್ರಕರಣ: ಜೆಸ್ಕಾಂನಿದ 10,40,549ರೂ.ಗಳ ದಂಡ

ರಾಯಚೂರು ಆಗಸ್ಟ್ 05

ವಿದ್ಯುತ್ ಕಳ್ಳತನ, ಸೋರಿಕೆ ಹಾಗೂ ದುರಪಯೋಗ ಪ್ರಕರಣಗಳನ್ನು ಪತ್ತೆ ಹಚ್ಚಿ ಒಟ್ಟು ಮೊತ್ತ 10,40,549 ರೂ.ಗಳ ದಂಡ ವಿಧಿಸಲಾಗಿದ್ದು, ಅನಧಿಕೃತ ವಿದ್ಯುತ್ ಸಂಪರ್ಕಗಳನ್ನು ಅಧಿಕೃತಗೊಳಿಸಿಕೊಳ್ಳಲು ಹಾಗೂ ವಿದ್ಯುತ್ ನಿಲುಗಡೆಯಿಂದ ತಪ್ಪಿಸಲು ಬಾಕಿ ಇರುವ ವಿದ್ಯುತ್ ಬಿಲ್ ಮೊತ್ತವನ್ನು ಕೂಡಲೇ ಗ್ರಾಹಕರು ಪಾವತಿಸುವಂತೆ ಕೋರಲಾಗಿದೆ.

ರಾಯಚೂರು ಜಿಲ್ಲೆಯ ನಗರ ವ್ಯಾಪ್ತಿಯಲ್ಲಿ ಬರುವ ರಾಯಚೂರು ನಗರ ಉಪ-ವಿಭಾಗ, ಗಧಾರ್ ಸಿಂಗನೋಡಿ, ತಲಮಾರಿ, ಮಾನವಿ ನಗರ, ಕೋರವಿ, ಚಿಕ್ಕಬೂದೂರು, ಜೇರಬಂಡಿ, ಕೊಪ್ಪರ, ಎನ್. ಗಣೇಕಲ್, ಸಿರವಾರ ಕ್ರಾಸ್, ಯತ್‌ಗಲ್, ಅರಳಹಳ್ಳಿ, ಕುರುಕುಂದ, ಗೌಡೂರು, ಗೌಡೂರು ತಾಂಡ, ಯರಡೋಣಿ ಕ್ರಾಸ್, ಹೆಡಗಿಬಾಳ್ ಕ್ಯಾಂಪ್‌ನ ಗ್ರಾಹಕರಿಗೆ ಜೂನ್-2026ರ ಮಾಹೆಯಲ್ಲಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ವಿ), ಜಾಗೃತದಳ ಜೆಸ್ಕಾಂ ರಾಯಚೂರು ಅವರು ದಾಳಿ ಮಾಡಿ, 95 ವಿದ್ಯುತ್ ಕಳ್ಳತನ, ಸೋರಿಕೆ ಹಾಗೂ ದುರಪಯೋಗ ಪ್ರಕರಣಗಳನ್ನು ಪತ್ತೆ ಹಚ್ಚಿ ಒಟ್ಟು ಮೊತ್ತ 10,40,549 ರೂ. ಗಳನ್ನು ದಂಡ ವಿಧಿಸಿರುತ್ತಾರೆ. ಆದ್ದರಿಂದ ಅನಧಿಕೃತ ವಿದ್ಯುತ್ ಸಂಪರ್ಕಗಳನ್ನು ಅಧಿಕೃತಗೊಳಿಸಿಕೊಳ್ಳಲು ಹಾಗೂ ವಿದ್ಯುತ್ ನಿಲುಗಡೆಯಿಂದ ತಪ್ಪಿಸಲು ಬಾಕಿ ಇರುವ ವಿದ್ಯುತ್ ಬಿಲ್ ಮೊತ್ತವನ್ನು ಕೂಡಲೇ ಪಾವತಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವೃತ್ತದ ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯದಲ್ಲಿ ರಾಜಕೀಯ ಪಕ್ಷಗಳ ಸಕ್ರಿಯ ಪಾಲ್ಗೊಳ್ಳುವಿಕೆ ಮುಖ್ಯ: ಡಾ.ಸುರೇಶ ಬಿ.ಇಟ್ನಾಳ



ಕೊಪ್ಪಳ ಆ.05-

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ರಾಜ್ಯಾದ್ಯಂತ ಹಮ್ಮಿಕೊಳ್ಳಲಾಗಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ-2026 ಕಾರ್ಯಕ್ರಮವನ್ನು ಪಾರದರ್ಶಕ, ನಿಖರ ಹಾಗೂ ಚುನಾವಣಾ ಆಯೋಗದ ಮಾರ್ಗಸೂಚಿಗಳಿಗೆ ಅನುಗುಣವಾಗಿ ಅನುಷ್ಠಾನಗೊಳಿಸಬೇಕಿದ್ದು, ಈ ಕಾರ್ಯದಲ್ಲಿ ಎಲ್ಲಾ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಸಕ್ರಿಯವಾಗಿ ಸಹಕರಿಸುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ಡಾ. ಸುರೇಶ್ ಬಿ. ಇಟ್ನಾಳ ಅವರು ತಿಳಿಸಿದರು.

ಮಂಗಳವಾರದದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ-2026ಕ್ಕೆ ಸಂಬಂಧಿಸಿದಂತೆ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮತದಾರರ ಪಟ್ಟಿಯ ನಿಖರತೆ ಹಾಗೂ ವಿಶ್ವಾಸಾರ್ಹತೆಯನ್ನು ಕಾಪಾಡುವ ಉದ್ದೇಶದಿಂದ ಚುನಾವಣಾ ಆಯೋಗವು ನಿಗದಿಪಡಿಸಿರುವ ವೇಳಾಪಟ್ಟಿಯಂತೆ ಜಿಲ್ಲೆಯಾದ್ಯಂತ ವಿವಿಧ ಹಂತಗಳ ಕಾರ್ಯಚಟುವಟಿಕೆಗಳನ್ನು ಕೈಗೊಳ್ಳಲಾಗುತ್ತಿದ್ದು, ಈ ಪ್ರಕ್ರಿಯೆಯಲ್ಲಿ ರಾಜಕೀಯ ಪಕ್ಷಗಳ ಸಲಹೆ, ಸಹಕಾರ ಮತ್ತು ಭಾಗವಹಿಸುವಿಕೆ ಅತ್ಯಂತ ಮಹತ್ವದ್ದಾಗಿದೆ ಎಂದು ಅವರು ಹೇಳಿದರು.

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಮನೆ-ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುವ ಕಾರ್ಯ, ಮತಗಟ್ಟೆಗಳ ಮರುಹೊಂದಾಣಿಕೆ, ಕರಡು ಮತದಾರರ ಪಟ್ಟಿಯ ಪ್ರಕಟಣೆ, ಹಕ್ಕು ಮತ್ತು ಆಕ್ಷೇಪಣೆಗಳ ಸ್ವೀಕಾರ, ಅವುಗಳ ಪರಿಶೀಲನೆ ಹಾಗೂ ಅಂತಿಮ ಮತದಾರರ ಪಟ್ಟಿಯ ಪ್ರಕಟಣೆ ಸೇರಿದಂತೆ ಎಲ್ಲ ಕಾರ್ಯಗಳು ನಿಗದಿತ ವೇಳಾಪಟ್ಟಿಯಂತೆ ನಡೆಯಲಿವೆ. ಮತದಾರರ ಪಟ್ಟಿಯಲ್ಲಿ ಅರ್ಹ ಮತದಾರರು ಸೇರ್ಪಡೆಯಾಗುವಂತೆಯೂ, ಅನರ್ಹ ಹೆಸರುಗಳು ತೆಗೆದುಹಾಕುವಂತೆಯೂ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಅವರು ಮಾಹಿತಿ ನೀಡಿದರು.

ಜಿಲ್ಲೆಯ ಐದು ವಿಧಾನಸಭಾ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಹಾಗೂ ವಿಭಾಗಗಳಲ್ಲಿ ಗುರುತಿಸಲಾದ ಒಟ್ಟು 1,49,663 ಮತದಾರರ ವಿವರಗಳನ್ನು ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಒದಗಿಸಲಾಗಿದೆ. ಈ ವಿವರಗಳನ್ನು ಪರಿಶೀಲಿಸಿ ಯಾವುದೇ ಆಕ್ಷೇಪಣೆಗಳು ಅಥವಾ ತಿದ್ದುಪಡಿಗಳಿದ್ದಲ್ಲಿ ಚುನಾವಣಾ ಆಯೋಗ ನಿಗದಿಪಡಿಸಿರುವ ಅವಧಿಯೊಳಗೆ ಸಂಬಧಿಸಿದ ಮತದಾರರ ನೋಂದಣಾಧಿಕಾರಿಗಳಿಗೆ ಸಲ್ಲಿಸಬೇಕು. ಇದರಿಂದ ಮತದಾರರ ಪಟ್ಟಿಯ ನಿಖರತೆ ಮತ್ತು ಪಾರದರ್ಶಕತೆ ಮತ್ತಷ್ಟು ಹೆಚ್ಚಲಿದೆ ಎಂದು ಅವರು ತಿಳಿಸಿದರು.

ಮತಗಟ್ಟೆಗಳ ಮರುಹೊಂದಾಣಿಕೆ ಕುರಿತು ಸಭೆಯಲ್ಲಿ ವಿವರವಾದ ಚರ್ಚೆ ನಡೆಯಿತು. 1,200 ಕ್ಕಿಂತ ಹೆಚ್ಚು ಮತದಾರರನ್ನು ಹೊಂದಿರುವ ಮತಗಟ್ಟೆಗಳನ್ನು ವಿಭಜಿಸಿ ಮತದಾರರಿಗೆ ಸುಗಮ ಮತದಾನ ವ್ಯವಸ್ಥೆ ಕಲ್ಪಿಸುವ ಉದ್ದೇಶದಿಂದ ಜಿಲ್ಲೆಯಲ್ಲಿನ ಮತಗಟ್ಟೆಗಳ ಸಂಖ್ಯೆಯನ್ನು 1,315 ರಿಂದ 1,352 ಕ್ಕೆ ಹೆಚ್ಚಿಸಲು ಪ್ರಸ್ತಾವನೆ ರೂಪಿಸಲಾಗಿದೆ. ಇದರಿಂದ ಮತದಾನ ಪ್ರಕ್ರಿಯೆ ಮತ್ತಷ್ಟು ಸುಗಮ ಹಾಗೂ ಪರಿಣಾಮಕಾರಿಯಾಗಲಿದೆ ಎಂದು ಅವರು ತಿಳಿಸಿದರು.


ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯದಲ್ಲಿ ಬೂತ್ ಮಟ್ಟದ ಅಧಿಕಾರಿಗಳ ಶ್ರಮ ಹೆಚ್ಚಿದೆ. ತಮಗೆ ಸಂಬಂಧಿಸಿದ ಮತಗಟ್ಟೆ ವ್ಯಾಪ್ತಿಯಲ್ಲಿ ಪ್ರತಿ ಮನೆಗೆ ತೆರಳಿ ಗಣತಿ ನಮೂನೆ ನೀಡಿ, ಮರಳಿ ಸಂಗ್ರಹಿಸುವುದು ಸುಲಭ ಕೆಲಸವಲ್ಲ. ಅದನ್ನು ಜಿಲ್ಲೆಯ ಎಲ್ಲ ಬಿಎಲ್‌ಒ ಗಳು ಬಹಳ ಅಚ್ಚುಕಟ್ಟಾಗಿ ನಿಭಾಯಿಸಿರುವುದು ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕಾರ್ಯ ಯಶಸ್ವಿಯಾಗಲು ಪ್ರಮುಖ ಕಾರಣವಾಗಿದೆ ಎಂದು ಇದೇ ಸಂದರ್ಭ ಜಿಲ್ಲಾಧಿಕಾರಿಗಳು ಬಿಎಲ್‌ಒ ಗಳ ಕಾರ್ಯನ್ನು ಶ್ಲಾಘಿಸಿದರು.

ಸಭೆಯಲ್ಲಿ ಭಾಗವಹಿಸಿದ್ದ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಮತದಾರರ ವಿವರಗಳನ್ನು ಹಸ್ತಾಂತರಿಸಿ ಮಾತನಾಡಿದ ಜಿಲ್ಲಾಧಿಕಾರಿಗಳು ತಮಗೆ ನೀಡಿರುವ ಪಟ್ಟಿಯಲ್ಲಿ ವಲಸೆ ಹೋದ, ಕಣ್ತಪ್ಪಿನಿಂದ ಬಿಟ್ಟು ಹೋದ ಮತದಾರರ ಮಾಹಿತಿ ಇದ್ದಲ್ಲಿ ಈ ಕುರಿತು ಬಿಎಲ್‌ಎ ಗಳು ಆಕ್ಷೇಪಣೆ ಸಲ್ಲಿಸಬಹುದು. ಹಾಗೆಯೇ ವಲಸೆ ಹೋದ ಅಥವಾ ಈ ಬಗ್ಗೆ ಮಾಹಿತಿ ಇಲ್ಲದ ಮತದಾರರಿದ್ದಲ್ಲಿ ಅವರಿಗೆ ಗಣತಿ ನಮೂನೆಯನ್ನು ಭರ್ತಿ ಮಾಡಲು ತಿಳಿಸಿ, ಆನ್‌ಲೈನ್ ನಲ್ಲಿಯೂ ನಮೂನೆ ಭರ್ತಿಗೆ ಅವಕಾಶವಿದ್ದು, ಆನ್‌ಲೈನ್ ನಲ್ಲಿಯೂ ಭರ್ತಿ ಮಾಡಲು ತಿಳಿಸಿ. ಪರಿಷ್ಕರಣೆ ಕಾರ್ಯದ ವೇಳಾಪಟ್ಟಿಯ ನಂತರವೂ ಮತದಾರರ ನೋಂದಣಿಗೆ ಅವಕಾಶವಿದ್ದು, ನಮೂನೆ-6 ಅನ್ನು ಭರ್ತಿ ಮಾಡುವ ಮೂಲಕ ನೋಂದಣಿ ಮಾಡಿಕೊಳ್ಳಬಹುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಭಾಗವಹಿಸಿದ್ದ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ತಮ್ಮ ಸಲಹೆ ಹಾಗೂ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು. ಈ ಬಗ್ಗೆ ಜಿಲ್ಲಾಧಿಕಾರಿಗಳು ಚುನಾವಣಾ ಆಯೋಗದ ಮಾರ್ಗಸೂಚಿಗಳನ್ವಯ ಎಲ್ಲ ಸಲಹೆಗಳನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಚುನಾವಣಾ ತಹಶೀಲ್ದಾರ ರವಿ ವಸ್ತದ, ಚುನಾವಣಾ ಶಾಖೆಯ ನಾಗರಾಜ, ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೃಷ್ಣ ಎನ್. ಇಟ್ಟಂಗಿ, ಬಿಜೆಪಿ ಪ್ರತಿನಿಧಿ ರಾಜು ಬಾಕಳೆ, ಬಿಎಸ್‌ಪಿ ಜಿಲ್ಲಾಧ್ಯಕ್ಷ ಕೆ.ಎಸ್. ಮೈಲಾರಪ್ಪ, ಸೇರಿದಂತೆ ಇತರರು ಉಪಸ್ಥಿತರಿದ್ದರು.

ಖದೀರ್ ಪಾಷಾ ಆತ್ಮಹತ್ಯೆ ಪ್ರಕರಣ: ಆರೋಪಿಗಳ ಬಂಧನಕ್ಕೆ ಆಗ್ರಹ



ಕಲಬುರಗಿ ,ಆ.05-

ಕಾಳಗಿ ತಾಲೂಕಿನ ರಟಕಲ್ ಗ್ರಾಮದ ಸೆಂಟ್ರಿಂಗ್ ಕಾರ್ಮಿಕ ಖದೀರ್ ಪಾಶಾ ಅವರ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಗಳನ್ನು ತಕ್ಷಣ ಬಂಧಿಸಿ, ಮೃತರ ಕುಟುಂಬಕ್ಕೆ ಸರ್ಕಾರದಿಂದ ಸೂಕ್ತ ಪರಿಹಾರ ನೀಡಬೇಕು ಎಂದು ಕಲ್ಯಾಣ ಕರ್ನಾಟಕ ರಕ್ಷಣಾ ವೇದಿಕೆ ಒತ್ತಾಯಿಸಿದೆ.

ವೇದಿಕೆಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಶಿವಲಿಂಗ ಹಳಮನಿ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಪ್ರತಿಭಟನೆ ನಡೆಸಿದ ಕಾರ್ಯಕರ್ತರು, ಖದೀರ್ ಪಾಶಾ ಅವರು ಚಿತ್ತಾಪುರ ತಾಲೂಕಿನ ಶ್ರೀಸಿಮೆಂಟ್ ಕಂಪನಿ ಹಿಂಭಾಗದ ಸೇತುವೆ ನಿರ್ಮಾಣ ಕಾಮಗಾರಿ ನಡೆಸಲು ಗುತ್ತಿಗೆದಾರರಾದ ವಿಜಯಕುಮಾರ ಚವ್ಹಾಣ ಹಾಗೂ ಅರವಿಂದ ಚವ್ಹಾಣ ಅವರೊಂದಿಗೆ ಒಪ್ಪಂದ ಮಾಡಿಕೊಂಡು ಕೆಲಸ ಪೂರ್ಣಗೊಳಿಸಿದ್ದರು. ಆದರೆ, ಕರಾರಿನಂತೆ ನೀಡಬೇಕಿದ್ದ ಸುಮಾರು 15 ರಿಂದ 16 ರೂ. ಲಕ್ಷ ಹಣವನ್ನು ಕೇಳಿದಾಗ ಗುತ್ತಿಗೆದಾರರು ಜೀವ ಬೆದರಿಕೆ ಹಾಕಿದ್ದು, ರೌಡಿಗಳನ್ನು ಮನೆಗೆ ಕಳುಹಿಸಿ ಕೊಲೆ ಮಾಡುವುದಾಗಿ ಬೆದರಿಕೆ ಒಡ್ಡಿದ್ದರಿಂದ ಮನನೊಂದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿದರು.

ಈ ಸಂಬಂಧ ಮೃತರ ಪತ್ನಿ ರಟಕಲ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದು, ಪ್ರಕರಣ ದಾಖಲಾಗಿದ್ದರೂ ಇದುವರೆಗೆ ಯಾವುದೇ ಆರೋಪಿಯನ್ನು ಬಂಧಿಸಿಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ಗೃಹ ಸಚಿವರ ಕ್ಷೇತ್ರದಲ್ಲೇ ಇಂತಹ ಘಟನೆ ನಡೆದಿರುವುದು ಖಂಡನೀಯವಾಗಿದ್ದು, ಕೂಡಲೇ ಆರೋಪಿಗಳನ್ನು ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕು. ಜೊತೆಗೆ, ಮೃತರ ಕುಟುಂಬಕ್ಕೆ ಸರ್ಕಾರದಿಂದ ಸೂಕ್ತ ಪರಿಹಾರ ಹಾಗೂ ಅಗತ್ಯ ನೆರವು ನೀಡಬೇಕು ಎಂದು ಆಗ್ರಹಿಸಿದರು.

ಮುಂದಿನ ಏಳು ದಿನಗಳೊಳಗೆ ಆರೋಪಿಗಳನ್ನು ಬಂಧಿಸದಿದ್ದರೆ ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸುವುದಾಗಿ ವೇದಿಕೆ ಎಚ್ಚರಿಕೆ ನೀಡಿತು.

ಈ ಸಂದರ್ಭದಲ್ಲಿ ಸಂದೀಪ್ ಭರಣಿ, ವಿಶ್ವನಾಥ್, ಸತೀಶ್, ನಾಗರಾಜ್ ಪಾಟೀಲ್ ಸೇರಿದಂತೆ ಹಲವು ಕಾರ್ಯಕರ್ತರು ಉಪಸ್ಥಿತರಿದ್ದರು.

ಮಹಿಳೆಯರ ಮೂಲಸೌಕರ್ಯಕ್ಕಾಗಿ ಅ.6ರಿಂದ ಏಕವ್ಯಕ್ತಿ ಪಾದಯಾತ್ರೆ



ಆಳಂದ,ಆ.05-

ಮಹಿಳೆಯರಿಗೆ ಶೌಚಾಲಯ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವಂತೆ ಆಗ್ರಹಿಸಿ ಜೆಡಿಎಸ್ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ಮಹೇಶ್ವರಿ ಎಸ್. ವಾಲಿ ಅವರು ಅಕ್ಟೋಬರ್ 6ರಿಂದ ಆಳಂದದಿಂದ ಕಲಬುರಗಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕಚೇರಿವರೆಗೆ ಸುಮಾರು 50 ಕಿಲೋಮೀಟರ್ ಏಕವ್ಯಕ್ತಿ ಕಾಲ್ನಡಿಗೆ ಪಾದಯಾತ್ರೆ ಹಮ್ಮಿಕೊಂಡಿದ್ದಾರೆ ಎಂದು ಜೆಡಿಎಸ್ ತಾಲೂಕು ಅಧ್ಯಕ್ಷ ರಫೀಕ್ ಇನಾಮದಾರ ತಿಳಿಸಿದರು.

ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಹಿಳೆಯರು ಎದುರಿಸುತ್ತಿರುವ ಮೂಲಭೂತ ಸಮಸ್ಯೆಗಳನ್ನು ಸರ್ಕಾರ ಹಾಗೂ ಅಧಿಕಾರಿಗಳ ಗಮನಕ್ಕೆ ತಂದು ಶಾಶ್ವತ ಪರಿಹಾರ ಕಲ್ಪಿಸುವ ಉದ್ದೇಶದಿಂದ ಯಾವುದೇ ಪಕ್ಷ, ಜಾತಿ ಅಥವಾ ರಾಜಕೀಯ ಭೇದವಿಲ್ಲದೆ ಈ ಪಾದಯಾತ್ರೆ ಆಯೋಜಿಸಲಾಗಿದೆ ಎಂದು ಹೇಳಿದರು.

ಕ್ಷೇತ್ರದ ಅನೇಕ ಗ್ರಾಮಗಳಲ್ಲಿ ಮಹಿಳೆಯರಿಗೆ ಸಮರ್ಪಕ ಶೌಚಾಲಯಗಳಿಲ್ಲದೆ ಇಂದಿಗೂ ಬಯಲು ಪ್ರದೇಶದಲ್ಲೇ ಬಹಿರ್ದೆಸೆಗೆ ತೆರಳಬೇಕಾದ ಪರಿಸ್ಥಿತಿ ಇದೆ. ರಸ್ತೆ ಬದಿಗಳು, ಮುಳ್ಳು-ಕಂಟೆಗಳು ಹಾಗೂ ಕೆಸರಿನ ನಡುವೆ ಶೌಚಕ್ರಿಯೆ ನಡೆಸಬೇಕಾಗುತ್ತಿರುವುದು ಮಹಿಳೆಯರ ಘನತೆಗೆ ಧಕ್ಕೆ ತರುತ್ತಿದೆ. ವಾಹನ ಸಂಚಾರದ ವೇಳೆ ಅವಮಾನಕರ ಪರಿಸ್ಥಿತಿಯನ್ನು ಎದುರಿಸಬೇಕಾಗುತ್ತಿದೆ ಎಂದು ಅವರು ಹೇಳಿದರು.

ಸರ್ಕಾರದಿಂದ ಶೌಚಾಲಯ ನಿರ್ಮಾಣಕ್ಕೆ ಬಿಡುಗಡೆಯಾದ ಅನುದಾನ ಸಮರ್ಪಕವಾಗಿ ಬಳಕೆಯಾಗಿಲ್ಲ. ಹಲವೆಡೆ ಶೌಚಾಲಯಗಳೇ ಇಲ್ಲದಿದ್ದರೆ, ನಿರ್ಮಾಣಗೊಂಡಿರುವ ಶೌಚಾಲಯಗಳಲ್ಲಿ ನೀರು ಹಾಗೂ ಅಗತ್ಯ ಮೂಲಸೌಕರ್ಯಗಳ ಕೊರತೆಯಿಂದ ಅವು ಬಳಕೆಗೆ ಯೋಗ್ಯವಾಗಿಲ್ಲ. ಇದರಿಂದ ಮಹಿಳೆಯರು ಇಂದಿಗೂ ರಾತ್ರಿ ವೇಳೆಯಲ್ಲೇ ಶೌಚಕ್ರಿಯೆ ನಡೆಸುವ ಅನಿವಾರ್ಯ ಸ್ಥಿತಿ ಎದುರಿಸುತ್ತಿದ್ದಾರೆ ಎಂದು ಆರೋಪಿಸಿದರು.

ಅಕ್ಟೋಬರ್ 6ರಂದು ಬೆಳಿಗ್ಗೆ 10 ಗಂಟೆಗೆ ಆಳಂದ ಬಸ್ ನಿಲ್ದಾಣದಿಂದ ಪಾದಯಾತ್ರೆ ಆರಂಭವಾಗಿ ಕೊಡಲಹಂಗರಾ, ಲಾಡಚಿಂಚೋಳಿ ಹಾಗೂ ಕಡಗಂಚಿ ಮಾರ್ಗವಾಗಿ ಮೊದಲ ದಿನ ಸಾಗಲಿದೆ. ಬಳಿಕ ಅಕ್ಟೋಬರ್ 7ರಂದು ಕಲಬುರಗಿಗೆ ತಲುಪಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಈ ಹೋರಾಟ ಪಕ್ಷಾತೀತ ಹಾಗೂ ಜನಪರವಾಗಿದ್ದು, ಮಹಿಳೆಯರು, ಯುವಕರು, ವಿದ್ಯಾರ್ಥಿಗಳು, ಸಾಮಾಜಿಕ ಕಾರ್ಯಕರ್ತರು, ಧಾರ್ಮಿಕ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಬೆಂಬಲ ನೀಡುವಂತೆ ರಫೀಕ್ ಇನಾಮದಾರ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಜೆಡಿಎಸ್ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ಮಹೇಶ್ವರಿ ಎಸ್. ವಾಲಿ ಸೇರಿದಂತೆ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಪಿ.ಟಿ.ಪರಮೇಶ್ವರ ನಾಯ್ಕ್ ಮಾಹಿತಿ

ಬಳ್ಳಾರಿ ಜಿಲ್ಲೆಗೆ ಗ್ಯಾರಂಟಿ ಯೋಜನೆಗಳಿಂದ ರೂ.2,793.89 ಕೋಟಿ ಅನುದಾನ



ಬಳ್ಳಾರಿ,ಆ.05-

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಐದು ಗ್ಯಾರಂಟಿ ಯೋಜನೆಗಳ ಮೂಲಕ ಬಳ್ಳಾರಿ ಜಿಲ್ಲೆಯ ಫಲಾನುಭವಿಗಳಿಗೆ ಕಳೆದ ಮೂರು ವರ್ಷಗಳಲ್ಲಿ ಒಟ್ಟು ರೂ.2,793.89 ಕೋಟಿ ಅನುದಾನವನ್ನು ನೇರವಾಗಿ ತಲುಪಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರು ಹಾಗೂ ಮಾಜಿ ಸಚಿವರಾದ ಪಿ.ಟಿ ಪರಮೇಶ್ವರ ನಾಯ್ಕ್ ಅವರು ಹೇಳಿದರು.

ಬಳ್ಳಾರಿ ಜಿಲ್ಲೆಯ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕುರಿತು ನಗರದ ಜಿಲ್ಲಾ ಪಂಚಾಯತ್ ನ ವಿಡಿಯೋ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

2023ರ ವಿಧಾನಸಭಾ ಚುನಾವಣೆಗೆ ಮುನ್ನ ಈಗಿನ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಸಿದ್ದರಾಮಯ್ಯ ಸೇರಿದಂತೆ ಪಕ್ಷದ ರಾಷ್ಟ್ರಿಯ ಹಾಗೂ ರಾಜ್ಯದ ಹಲವು ಮುಖಂಡರುಗಳ ನೇತೃತ್ವದಲ್ಲಿ ರಾಜ್ಯದ ಜನತೆಗೆ 5 ಗ್ಯಾರಂಟಿಗಳ ಅಭಯ ನೀಡಲಾಗಿತ್ತು. ಆ ಮನವಿಗೆ ಸ್ಪಂದಿಸಿದ ಜನತೆ ಕಾಂಗ್ರೆಸ್ ಪಕ್ಷಕ್ಕೆ 136 ಸ್ಥಾನಗಳನ್ನು ನೀಡಿ ಅಧಿಕಾರಕ್ಕೆ ತಂದಿದ್ದರು. ಆಡಳಿತಕ್ಕೆ ಬಂದ ನಂತರ ಸರ್ಕಾರವು ರಾಜ್ಯದ ಖಜಾನೆಯಿಂದ ನೇರವಾಗಿ ಫಲಾನುಭವಿಗಳ ಖಾತೆಗೆ ಹಣ ತಲುಪಿಸುವ ಮೂಲಕ ದೇಶದಲ್ಲೇ ಪ್ರಥಮ ಬಾರಿಗೆ ಇಂತಹ ಐತಿಹಾಸಿಕ ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತಂದಿದೆ ಎಂದು ತಿಳಿಸಿದರು.

ಗೃಹಲಕ್ಷ್ಮಿ ಯೋಜನೆಯಡಿ ಜಿಲ್ಲೆಯಲ್ಲಿ ಒಟ್ಟು 3,06,721 ಫಲಾನುಭವಿಗಳು ನೋಂದಾಯಿಸಿ ಕೊಡಿದ್ದಾರೆ. ಇ-ಕೆವೈಸಿ ಸಮಸ್ಯೆ, ಮರಣ ಹೊಂದಿದವರು ಹಾಗೂ ಐಟಿ/ಜಿಎಸ್‌ಟಿ ವ್ಯಾಪ್ತಿಗೆ ಬರುವವರನ್ನು ಹೊರತುಪಡಿಸಿ, ಪ್ರಸ್ತುತ 2,85,403 ಅರ್ಹ ಫಲಾನುಭವಿಗಳಿಗೆ ಮೇ 26ರ ವರೆಗೆ ಒಟ್ಟು ರೂ.1,713.07 ಕೋಟಿ ಅನುದಾನವನ್ನು ಪಾವತಿಸಲಾಗಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಅನ್ನಭಾಗ್ಯ ಯೋಜನೆ ಯಡಿ ಬಿಪಿಎಲ್ ಹಾಗೂ ಅಂತ್ಯೋದಯ ಕುಟುಂಬಗಳ 2,98,182 ನೋಂದಾಯಿತ ಫಲಾನುಭವಿಗಳಿಗೆ ಉಚಿತ ಧಾನ್ಯ (6 ಕೆಜಿ ಜೋಳ, 4 ಕೆಜಿ ಅಕ್ಕಿ) ನೀಡಲಾಗುತ್ತಿದೆ ಹಾಗೂ ಇದಕ್ಕೂ ಮುನ್ನ 5 ಕೆ.ಜಿ ಅಕ್ಕಿ ಬದಲಾಗಿ ಹಣದ ರೂಪದಲ್ಲಿ ಒಟ್ಟು 215.20 ಕೋಟಿ ರೂ. ನೆರವು ನೀಡಲಾಗಿದೆ ಎಂದು ಅವರು ಮಾಹಿತಿ ನೀಡಿದರು.

ಗೃಹಜ್ಯೋತಿ ಯೋಜನೆಯಡಿ ಬಾಡಿಗೆದಾರರು ಸೇರಿದಂತೆ 200 ಯೂನಿಟ್‌ವರೆಗೆ ಉಚಿತ ವಿದ್ಯುತ್ ನೀಡುವ ಈ ಯೋಜನೆಗೆ ಜಿಲ್ಲೆಯ 2,99,249 ಫಲಾನುಭವಿಗಳು ನೋಂದಾಯಿಸಿಕೊಡಿದ್ದಾರೆ. ಇವರ ವಿದ್ಯುತ್ ವೆಚ್ಚಕ್ಕಾಗಿ ಸರ್ಕಾರ 509.28 ಕೋಟಿ ರೂ. ಭರಿಸಿದೆ ಎಂದರು.

ಮಹಿಳೆಯರು, ತಾಯಂದಿರು ಹಾಗೂ ಮಕ್ಕಳಿಗೆ ಉಚಿತ ಬಸ್ ಪ್ರಯಾಣ ಕಲ್ಪಿಸುವ ಶಕ್ತಿ ಯೋಜನೆಗೆ ಜಾಗತಿಕ ಮಟ್ಟದಲ್ಲೂ ಮೆಚ್ಚುಗೆ ವ್ಯಕ್ತವಾಗಿದೆ. ಬಳ್ಳಾರಿ ಜಿಲ್ಲೆಯಲ್ಲಿ 8 ಕೋಟಿ 2 ಲಕ್ಷ ಮಹಿಳಾ ಪ್ರಯಾಣಿಕರು ಉಚಿತ ಪ್ರಯಾಣದ ಸೌಲಭ್ಯ ಪಡೆದಿದ್ದು, ಇದಕ್ಕಾಗಿ ಸರ್ಕಾರ 323.30 ಕೋಟಿ ರೂ. ವೆಚ್ಚ ಭರಿಸಿದೆ ಎಂದು ಉಪಾಧ್ಯಕ್ಷರು ತಿಳಿಸಿದರು.

ಅದೇರೀತಿಯಾಗಿ ಪದವೀಧರರಿಗೆ ರೂ.3,000 ಹಾಗೂ ಡಿಪ್ಲೋಮಾ ದವರಿಗೆ ರೂ.1,500 ನೀಡುವ ಯುವನಿಧಿ ಯೋಜನೆಗೆ ಜಿಲ್ಲೆಯ 12,818 ನಿರುದ್ಯೋಗಿ ಯುವಕ-ಯುವತಿಯರು ನೋಂದಾಯಿಸಿಕೊಡಿದ್ದಾರೆ. ಇವರ ಖಾತೆಗೆ ಇಲ್ಲಿಯವರೆಗೆ ಒಟ್ಟು 33.4 ಕೋಟಿ ರೂ. ಜಮಾ ಮಾಡಲಾಗಿದೆ ಎಂದು ಅವರು ಹೇಳಿದರು.

ದುರುಪಯೋಗ ತಡೆಗೆ ಬಿಗಿಕ್ರಮ: ರಾಜ್ಯದಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ದುರುಪಯೋಗ ತಡೆಯಲು ಸರ್ಕಾರ ಕಠಿಣ ಕ್ರಮ ಕೈಗೊಂಡಿದೆ. ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳು ನಿಧನರಾದ ನಂತರವೂ ಎಟಿಎಂ ಕಾರ್ಡ್ ಮೂಲಕ ಹಣ ದುರುಪಯೋಗವಾಗುತ್ತಿರುವುದು ಗಮನಕ್ಕೆ ಬಂದಿದೆ. ಇದನ್ನು ತಡೆಯಲು ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು ಹಾಗೂ ಜನನ-ಮರಣ ನೋಂದಣಿ ಅಧಿಕಾರಿಗಳ ಮೂಲಕ ಮಾಹಿತಿ ಪಡೆದು, ತಕ್ಷಣವೇ ಅಂತಹ ಖಾತೆಗಳನ್ನು ಬ್ಲಾಕ್ ಮಾಡಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.


ಮರಣ ಹೊಂದಿದವರ ಖಾತೆಯಲ್ಲಿದ್ದ ಹಣವನ್ನು ಸರ್ಕಾರಕ್ಕೆ ಮರುಜಮಾ ಮಾಡುವ ಪ್ರಕ್ರಿಯೆ ನಡೆಯುತ್ತಿದ್ದು, ಬಳ್ಳಾರಿ ಜಿಲ್ಲೆಯೊಂದರಲ್ಲೇ ರೂ.69 ಲಕ್ಷ ಹಣವನ್ನು ಸರ್ಕಾರಕ್ಕೆ ವಾಪಸ್ ತರಿಸಲಾಗಿದೆ. ರಾಜ್ಯಮಟ್ಟದಲ್ಲಿ ಲೀಡ್ ಬ್ಯಾಂಕ್‌ಗಳ ಜೊತೆ ಚರ್ಚಿಸಿ ಸುಮಾರು ರೂ.117 ಕೋಟಿಯಲ್ಲಿ ಈಗಾಗಲೇ ರೂ.28 ಕೋಟಿ ಮರುಜಮಾ ಮಾಡಿಸಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

ಯಾವುದೇ ಅರ್ಹ ಫಲಾನುಭವಿಯೂ ಪಂಚ ಗ್ಯಾರಂಟಿ ಯೋಜನೆಗಳಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಸಭೆ ನಡೆಸಿ ಇನ್ನೂ ಹೆಚ್ಚಿನ ಪ್ರಚಾರ ಹಾಗೂ ಪರಿಣಾಮಕಾರಿ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳಲಾಗುವುದು ಎಂದು ಅಭಿಮತ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ ಚಿದಾನಂದಪ್ಪ, ಉಪಾಧ್ಯಕ್ಷೆ ಆಶಾಲತಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಸೇರಿದಂತೆ ಸಂಡೂರು ಹಾಗೂ ಕುರುಗೋಡು ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷರು, ಸದಸ್ಯರು ಮತ್ತು ವಿವಿಧ ಇಲಾಖಾಧಿಕಾರಿಗಳು ಉಪಸ್ಥಿತರಿದ್ದರು.

ಹಾವು ಮತ್ತು ನಾಯಿ ಕಡಿತ ಪ್ರಕರಣಗಳ ತಡೆಗೆ ಜಾಗೃತಿ: ಬಳ್ಳಾರಿಯಲ್ಲಿ ಪರಿಶೋಧನ ಸಭೆ

ಹಾವು ಕಡಿತಕ್ಕೆ 45 ನಿಮಿಷದೊಳಗೆ ಸೂಕ್ತ ಚಿಕಿತ್ಸೆ ಅಗತ್ಯ: ಡಿಹೆಚ್‌ಓ ಡಾ.ಅಲಕಾನಂದ ಡಿ. ಮಳಗಿ



ಬಳ್ಳಾರಿ,ಆ.05-

ಹಾವು ಕಚ್ಚಿದ ತಕ್ಷಣ ಗಾಬರಿಯಾಗದೆ, ಸಂತ್ರಸ್ಥ ವ್ಯಕ್ತಿಯನ್ನು 45 ನಿಮಿಷದೊಳಗೆ 108 ಅಂಬುಲೇನ್ಸ್ ಅಥವಾ ಲಭ್ಯವಿರುವ ವಾಹನದ ಮೂಲಕ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ತಲುಪಿಸುವುದು ಅತ್ಯಂತ ಮುಖ್ಯ. ಗಾಯಗೊಂಡ ಭಾಗ ಹೃದಯದ ಮಟ್ಟಕ್ಕಿಂತ ಕೆಳಗಿರುವಂತೆ ನಿಗಾವಹಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ.ಅಲಕಾನಂದ ಡಿ. ಮಳಗಿ ಅವರು ತಿಳಿಸಿದರು.

ಜಿಲ್ಲೆಯಲ್ಲಿ ಹಾವು ಕಡಿತ ಹಾಗೂ ನಾಯಿ ಕಡಿತ ಪ್ರಕರಣಗಳನ್ನು ನಿಯಂತ್ರಿಸುವ ಮತ್ತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶುಕ್ರವಾರ ನಡೆದ ಪರಿಶೋಧನ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಕ್ತಪರಿಚಲನೆಗೆ ತಡೆಯೊಡ್ಡುವ ಗಡಿಯಾರ, ಬಳೆ, ಉಂಗುರಗಳನ್ನು ತಕ್ಷಣ ತೆಗೆಯಬೇಕು. ಗಾಯದ ಜಾಗಕ್ಕೆ ಬಟ್ಟೆ ಕಟ್ಟುವುದು, ಬ್ಲೇಡ್ ನಿಂದ ಗಾಯ ಮಾಡುವುದು, ಸುಡುವುದು ಅಥವಾ ನಾಟಿ ಔಷಧಿ ನೀಡುವುದನ್ನು ಸಂಪೂರ್ಣವಾಗಿ ತಪ್ಪಿಸಬೇಕು. ಹೊಲ-ಗದ್ದೆಗಳಲ್ಲಿ ಕೆಲಸ ಮಾಡುವಾಗ ರಕ್ಷಾ ಕವಚ ಧರಿಸುವುದು, ರಾತ್ರಿ ವೇಳೆ ಟಾರ್ಚ್ ಬಳಸುವುದು ಹಾಗೂ ನೆಲದ ಮೇಲೆ ಮಲಗದಂತೆ ಎತ್ತರದ ಸ್ಥಳಗಳನ್ನು ಬಳಸುವುದು ಸೇರಿದಂತೆ ಸ್ವಚ್ಛತೆ ಕಾಪಾಡುವ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವಂತೆ ವೈದ್ಯಾಧಿಕಾರಿಗಳಿಗೆ ಸೂಚಿಸಿದರು.

ರೇಬೀಸ್ ತಡೆಗೆ ತಕ್ಷಣದ ಸೋಪು-ನೀರಿನ ಶುಚಿತ್ವ:

ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ ಅವರು ಮಾತನಾಡಿ, ಸಾಕಿದ ಅಥವಾ ಬೀದಿ ನಾಯಿ ಕಚ್ಚಿದರೆ, ಉಗುರಿನಿಂದ ಗೀರಿದರೆ ಅಥವಾ ಹಳೆಯ ಗಾಯವನ್ನು ನೆಕ್ಕಿದರೆ ನಿರ್ಲಕ್ಷಿಸಬಾರದು. ತಕ್ಷಣ ಗಾಯವನ್ನು ಸೋಪು ಮತ್ತು ನೀರಿನಿಂದ ತೊಳೆದು, ಸರ್ಕಾರಿ ಆಸ್ಪತ್ರೆಗೆ ತೆರಳಿ ವೈದ್ಯರ ಸಲಹೆಯಂತೆ ಎ.ಆರ್.ವಿ. ಇಂಜಕ್ಷನ್ ಪಡೆಯಬೇಕು ಎಂದು ತಿಳಿಸಿದರು.

ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಹಾವಿನ ವಿಷನಿರೋಧಕ ಮತ್ತು ರೇಬೀಸ್ ನಿರೋಧಕ ಚುಚ್ಚುಮದ್ದುಗಳನ್ನು ಅಗತ್ಯ ಪ್ರಮಾಣದಲ್ಲಿ ದಾಸ್ತಾನು ಇಟ್ಟುಕೊಳ್ಳಬೇಕು. ಸಾಕು ನಾಯಿಗಳಿಗೆ ಕಡ್ಡಾಯವಾಗಿ ರೇಬೀಸ್ ನಿರೋಧಕ ಲಸಿಕೆ ಹಾಕಿಸಲು ಪಶುಸಂಗೋಪನೆ ಇಲಾಖೆಗೆ ಹಾಗೂ ಬೀದಿ ನಾಯಿಗಳಿಗೆ ಲಸಿಕೆ ಹಾಕಿಸಲು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದ ಅವರು, ಆರೋಗ್ಯ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು ಮತ್ತು ಗ್ರಾಮ ಪಂಚಾಯತಿ ಮಟ್ಟದ ಸಮಿತಿಗಳ ಮೂಲಕ ನಿರಂತರ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಪಶುಪಾಲನಾ ಮತ್ತು ಪಶು ವೈದ್ಯಕೀಯ ಇಲಾಖೆಯ ಉಪ ನಿರ್ದೇಶಕ ಡಾ. ಸದಾಶಿವ ಎಂ. ಉಪ್ಪಾರ್ ಜಿಲ್ಲಾ ಡಿ.ವಿ.ಬಿ.ಡಿ.ಸಿ.ಓ ಅಧಿಕಾರಿ ಡಾ. ಅಬ್ದುಲ್ಲಾ ಆರ್., ಸಹಾಯಕ ಕೃಷಿ ನಿರ್ದೇಶಕ ವಿ. ಸಿ. ಉಮೇಶ್, ಬಿಎಂಸಿಆರ್‌ಸಿ ಮೆಡಿಸಿನ್ ವಿಭಾಗದ ಪ್ರಾಧ್ಯಾಪಕರು ಹಾಗೂ ಮುಖ್ಯಸ್ಥ ಡಾ. ಕೊಟ್ರೇಶ್ ಎನ್., ಪ್ರಾಧ್ಯಾಪಕರಾದ ಡಾ. ಶ್ಯಾಮಲ, ರೋಗ 'ಲಕ್ಷಣ ಶಾಸ್ತ ವಿಭಾಗದ ಪ್ರಾಧ್ಯಾಪಕರು ಹಾಗೂ ಮುಖ್ಯಸ್ಥರಾದ ಡಾ. ಎಂ. ಶಾಂತಿ, ವಿಧಿ ವಿಜ್ಞಾನ ವಿಭಾಗದ ಸಹ ಪ್ರಾಧ್ಯಾಪಕ ಡಾ. ಯೋಗೀಶ್, ಸಮುದಾಯ ವೈದ್ಯ ಶಾಸ್ತ ವಿಭಾಗದ ಸಹಾಯಕ ಪ್ರಾಧ್ಯಾಪಕ ಹಾಗೂ ನೋಡಲ್ ಅಧಿಕಾರಿ ಡಾ. ಅನೀಲ್ ಕುಮಾರ್ ಎಲ್. ಮತ್ತು ಸಹಾಯಕ ಪ್ರಾಧ್ಯಾಪಕ ಡಾ. ವೀರೇಶ್, ಜಿಲ್ಲಾ ಆಸ್ಪತ್ರೆಯ ಫಿಜಿಷಿಯನ್ ಹಾಗೂ ನೋಡಲ್ ಅಧಿಕಾರಿ ಡಾ. ಶ್ರೀಧರ್ ಎಂ. ಮತ್ತು ಶಸ್ತಚಿಕಿತ್ಸ ಕ ಹಾಗೂ ಎನ್‌ಆರ್‌ಸಿಪಿ ನೋಡಲ್ ಅಧಿಕಾರಿ ಡಾ. ಮಲ್ಲಿಕಾರ್ಜುನ, ತೋರಣಗಲ್ಲಿನ ಜಿಂದಾಲ್ ಸಂಜೀವಿನಿ ಆಸ್ಪತ್ರೆಯ ವೈದ್ಯ ಡಾ. ವೆಂಕಟೇಶ್ವರ ರೆಡ್ಡಿ, ಅರಣ್ಯ ಇಲಾಖೆಯ ಉಪ ವಲಯ ಅರಣ್ಯಾಧಿಕಾರಿ ವಿನಯ್ ಕೆ. ಸಿ., ಜಿಲ್ಲಾ ಎಪಿಡಮಾಲಾಜಿಸ್ಟ್ ಡಾ. ವಿಶಾಲಾಕ್ಷಿ, ಜಿಲ್ಲಾ ಮೈಕ್ರೋಬಯಾಲಾಜಿಸ್ಟ್ ಶರತ್‌ಬಾಬು ಕೆ., ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ಹಾಗೂ ಜಿಲ್ಲೆಯ ಎಲ್ಲಾ ತಾಲೂಕು ಆರೋಗ್ಯ ಅಧಿಕಾರಿಗಳು, ಆಡಳಿತ ವೈದ್ಯಾಧಿಕಾರಿಗಳು, ತಜ್ಞ ವೈದ್ಯರು ಮತ್ತು ಇತರ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಕನ್ನಡ ಪುಸ್ತಕ ಪ್ರಾಧಿಕಾರದ ಪ್ರಕಟಣೆಗಳು ಶೇ.50 ರಿಯಾಯಿತಿ ದರದಲ್ಲಿ ಮಾರಾಟ

ಬಳ್ಳಾರಿ,ಆ.05-

ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ 2026ರ ಆಗಸ್ಟ್ ತಿಂಗಳು ಪೂರ್ತಿ ಕನ್ನಡ ಪುಸ್ತಕ ಪ್ರಾಧಿಕಾರದ ಎಲ್ಲಾ ಪುಸ್ತಕಗಳನ್ನು ಶೇ.50 ರ ರಿಯಾಯಿತಿ ದರಗಳಲ್ಲಿ ಮಾರಾಟ ಮಾಡಲಾಗುವುದು. ಪುಸ್ತಕ ಪ್ರಿಯರು ಈ ಅವಕಾಶ ಸದುಪಯೋಗಪಡಿಸಿಕೊಳ್ಳಬೇಕು ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಆಡಳಿತಾಧಿಕಾರಿ ಕೆ.ಬಿ.ಕಿರಣ್ ಸಿಂಗ್ ಅವರು ತಿಳಿಸಿದ್ದಾರೆ.

ಕನ್ನಡ ಪುಸ್ತಕ ಪ್ರಾಧಿಕಾರವು ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಸಂಬಅಧಿಸಿದಅತೆ, ಎಲ್ಲಾ ಪ್ರಕಾರದ ಸಾಹಿತ್ಯ ಕೃತಿಗಳನ್ನು ಈವರೆಗೆ ಪ್ರಕಟಿಸುತ್ತಾ ಬಂದಿದೆ. ಇವುಗಳಲ್ಲಿ ವ್ಯಕ್ತಿ ಚಿತ್ರಗಳು, ನಾಟಕಗಳು, ಅಲೆಮಾರಿ ಸಮುದಾಯ, ವೈದ್ಯಕೀಯ, ಪ್ರಾಚೀನ ಕನ್ನಡ ಸಾಹಿತ್ಯ, ಜಾನಪದ, ಪರಿಸರ, ಕೃಷಿ ಹೀಗೆ ಹಲವು ಹತ್ತು ಪ್ರಕಾರಗಳಲ್ಲಿ ಸಾಹಿತ್ಯ ಕೃತಿಗಳನ್ನು ಇದುವರೆಗೆ ಸುಮಾರು 769ಕ್ಕೂ ಹೆಚ್ಚಿನ ಶೀರ್ಷಿಕೆಗಳನ್ನು ಮುದ್ರಿಸಿ ಪ್ರಕಟಿಸಿದೆ.

ಅತ್ಯಂತ ಮೌಲಿಕವಾದ, ಪ್ರಾಜ್ಞರಿಂದ ರಚಿತವಾದ ಈ ಕೃತಿಗಳನ್ನು ಜನಸಾಮಾನ್ಯರಿಗೆ ಸುಲಭ ಬೆಲೆಯಲ್ಲಿ ತಲುಪಿಸಬೇಕೆಂಬ ಉದ್ದೇಶ ಕನ್ನಡ ಪುಸ್ತಕ ಪ್ರಾಧಿಕಾರ ಹೊಂದಿದೆ.

ಕನ್ನಡ ಪುಸ್ತಕ ಪ್ರಾಧಿಕಾರದ ಆನ್ ಲೈನ್ ವೆಬ್ ಸೈಟ್ https:// kpp.karnataka.gov.in ಗೆ ಭೇಟಿ ನೀಡಿ ಶೇ.50 ರ ರಿಯಾಯಿತಿ ದರದಲ್ಲಿ ಪುಸ್ತಕ ಖರೀದಿಸಬಹುದಾಗಿದೆ.

ಬೆಂಗಳೂರಿನ ಕನ್ನಡ ಭವನದ ಸಿರಿಗನ್ನಡ ಪುಸ್ತಕ ಮಳಿಗೆಯಲ್ಲಿ ಹಾಗೂ ಎಲ್ಲಾ ಜಿಲ್ಲೆಗಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದಿಂದ ತೆರೆಯಲಾದ ಎಲ್ಲಾ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಗಳಲ್ಲಿ ಈ ರಿಯಾಯಿತಿ ಸೌಲಭ್ಯ ದೊರೆಯಲಿದೆ. ಹೆಚ್ಚಿನ ಮಾಹಿತಿಗಾಗಿ ಬೆಂಗಳೂರು ಕನ್ನಡ ಪುಸ್ತಕ ಪಾಧಿಕಾರ ಕಚೇರಿ ದೂ.08022107704 ಗೆ ಕರೆ ಮಾಡಿ ಮಾಹಿತಿ ಪಡೆಯಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಒಂದನೇಯ ಪುಟದಿಂದ

ನಾನು ಪಕ್ಷದ ವಿರುದ್ಧ ಮಾತಾಡಿಲ್ಲ: ಆರ್.ಬಿ. ತಿಮ್ಮಾಪುರ ಸ್ಪಷ್ಟನೆ

ಮುಖ್ಯಮಂತ್ರಿ ಸರಳವಾಗಿಲ್ಲ, ಎಲ್ಲಾ ಸರಿ ಮಾಡುತ್ತಾರೆ. ನಮ್ಮನ್ನು ಒಂದು ಮಾತು ಕೇಳಿದ್ದರೆ ಚೆನ್ನಾಗಿತ್ತು, ಈಗ ಜನರಲ್ಲಿ ಬೇರೆ ಭಾವನೆ ಬರುತ್ತೆ. ಕೇಳಿ ಮಾಡಿದ್ದರೆ ಒಳ್ಳೆಯದಿತ್ತು. ನನಗೆ ಮಂತ್ರಿ ಸ್ಥಾನ ನೀಡದೆ ಇರುವುದರಿಂದ ಸಹಜವಾಗಿ ಅಭಿಮಾನಿಗಳಿಗೆ ಅಸಮಾಧಾನ ಇರುತ್ತದೆ. ಈಗ ಯಂಗ್ ಇರುವವರು ಬಂದಿದ್ದಾರೆ. ಒಳ್ಳೆಯ ಕೆಲಸ ಮಾಡಲಿ ಎಂದರು.

ಅತೃಪ್ತ ಶಾಸಕರಿಂದ ಪ್ರತ್ಯೇಕ ಸಭೆ, ನಿಲ್ಲದ ಬಂಡಾಯ

ಅಸಮಾಧಾನಗೊಂಡಿರುವ ಹಲವು ಶಾಸಕರು ಕಾಂಗ್ರೆಸ್ ವರಿಷ್ಠರ ನಿರ್ಧಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದು, ಸಭೆಯಲ್ಲಿ ಮುಂದಿನ ರಾಜಕೀಯ ಕಾರ್ಯತಂತ್ರ, ಪಕ್ಷದ ನಾಯಕತ್ವದೊಂದಿಗೆ ನಡೆಸಬೇಕಾದ ಮಾತುಕತೆ ಹಾಗೂ ಒಗ್ಗಟ್ಟಿನ ನಿಲುವಿನ ಕುರಿತು ಚರ್ಚೆ ನಡೆಯುವ ಸಾಧ್ಯತೆ ಇದೆ. ನಾಳೆ ನಡೆಯಲಿರುವ ಈ ಸಭೆಯಲ್ಲಿ ಯಾವ ರೀತಿಯ ನಿರ್ಧಾರಗಳು ಹೊರಬೀಳಲಿವೆ ಎಂಬುದರತ್ತ ಕಾಂಗ್ರೆಸ್ ವಲಯ ಸೇರಿದಂತೆ ರಾಜ್ಯ ರಾಜಕೀಯದ ಗಮನ ಕೇಂದ್ರೀಕೃತವಾಗಿದೆ.

ಎ.ವಸಂತ್‌ಕುಮಾರ್‌ಗೆ ಸಚಿವ ಸ್ಥಾನ ನೀಡದಿರುವುದು ಮಾದಿಗ ಸಮುದಾಯಕ್ಕೆ ಅನ್ಯಾಯ: ವಿಜಯರಾಣಿ

1986ರಿಂದ ಕಾಂಗ್ರೆಸ್ ಪಕ್ಷದ ಸಂಘಟನೆಗಾಗಿ ಎ. ವಸಂತ್ ಕುಮಾರ್ ನಿರಂತರವಾಗಿ ದುಡಿಯುತ್ತಿದ್ದು, ಕರ್ನಾಟಕ ಮಾತ್ರವಲ್ಲದೆ ತಮಿಳುನಾಡು ಮತ್ತು ಕೇರಳ ರಾಜ್ಯಗಳ ಚುನಾವಣೆಯಲ್ಲಿಯೂ ಪಕ್ಷ ವಹಿಸಿದ ಜವಾಬ್ದಾರಿಗಳನ್ನು ಸಮರ್ಥವಾಗಿ ನಿರ್ವಹಿಸಿದ್ದಾರೆ. ಇಂತಹ ನಿಷ್ಠಾವಂತ ನಾಯಕನನ್ನು ಸಚಿವ ಸಂಪುಟದಿಂದ ಹೊರಗಿಡುವುದು ನ್ಯಾಯಸಮ್ಮತವಲ್ಲ. ಉಳಿದಿರುವ ಸಚಿವ ಸ್ಥಾನವನ್ನು ಅವರಿಗೆ ನೀಡುವ ಮೂಲಕ ರಾಯಚೂರು ಜಿಲ್ಲೆಗೆ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು.

ಚುನಾವಣೆ ಸಂದರ್ಭದಲ್ಲಿ ದಲಿತರು, ವಿಶೇಷವಾಗಿ ಮಾದಿಗ ಸಮುದಾಯದ ಮತಗಳು ಕಾಂಗ್ರೆಸ್‌ಗೆ ಬೇಕಾಗುತ್ತವೆ. ಆದರೆ ಅಧಿಕಾರಕ್ಕೆ ಬಂದ ಬಳಿಕ ಅದೇ ಸಮುದಾಯವನ್ನು ಸಂಪೂರ್ಣ ವಾಗಿ ಕಡೆಗಣಿಸಲಾಗುತ್ತಿದೆ. ಇದು ದಲಿತರಿಗೆ ಮಾಡಿದ ರಾಜಕೀಯ ಅನ್ಯಾಯವಾಗಿದೆ, ಎಂದು ವಿಜಯರಾಣಿ ಆರೋಪಿಸಿದರು.

ಮುಂದುವರಿದು ಮಾತನಾಡಿದ ಮೌನೇಶ ಜಾಲವಾದಿ, ಪಕ್ಷಕ್ಕಾಗಿ ದಶಕಗಳ ಕಾಲ ನಿಷ್ಠೆಯಿಂದ ದುಡಿದ ಎ. ವಸಂತ್ ಕುಮಾರ್ ಅವರಿಗೆ ಸಚಿವ ಸ್ಥಾನ ನೀಡುವುದರ ಜೊತೆಗೆ ರಾಯಚೂರು ಜಿಲ್ಲೆಯ ಉಸ್ತುವಾರಿ ಸಚಿವರ ಜವಾಬ್ದಾರಿಯನ್ನೂ ನೀಡಬೇಕಾಗಿತ್ತು. ಆದರೆ ಅವರನ್ನು ಸಂಪೂರ್ಣವಾಗಿ ನಿರ್ಲಕ್ಷಿಸಿರುವುದು ರಾಯಚೂರು ಜಿಲ್ಲೆಯ ಜನತೆ ಹಾಗೂ ಮಾದಿಗ ಸಮುದಾಯಕ್ಕೆ ಮಾಡಿದ ಅವಮಾನವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸರ್ಕಾರ ಕೂಡಲೇ ಈ ನಿರ್ಧಾರವನ್ನು ಮರುಪರಿಶೀಲಿಸಿ ಎ. ವಸಂತ್ ಕುಮಾರ್ ಅವರಿಗೆ ಸಚಿವ ಸ್ಥಾನ ನೀಡಬೇಕು. ಇಲ್ಲವಾದರೆ ರಾಜ್ಯಾದ್ಯಂತ ಹೋರಾಟ ರೂಪಿಸಿ ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ಪ್ರತಿಭಟನೆ ನಡೆಸಲಾಗುವುದು ಎಂದು ಮುಖಂಡರು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಕರೆಪ್ಪ, ಎಂ.ಆರ್. ಬೇರಿ, ಪದ್ಮ, ದುರಗೇಶ, ಚನ್ನಬಸವ ಯಾಪಲದಿನ್ನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಡಿಸಿಸಿ ಬ್ಯಾಂಕ್ ಸಾರ್ವಜನಿಕ ಪ್ರಾಧಿಕಾರ: ಮಾಹಿತಿ ಆಯೋಗದ ಐತಿಹಾಸಿಕ ತೀರ್ಪು

ಆಡಳಿತ ಮಂಡಳಿಗೆ ಸದಸ್ಯರ ನಾಮನಿರ್ದೇಶನ, ಸಿಬ್ಬಂದಿ ನೇಮಕಾತಿಗೆ ಸರ್ಕಾರದ ಅನುಮತಿ, ನಬಾರ್ಡ್ ಮತ್ತು ಅಪೆಕ್ಸ್ ಬ್ಯಾಂಕ್‌ಗಳ ವಾರ್ಷಿಕ ಪರಿಶೀಲನೆ, ರೈತರ ಸಾಲದ ಬಡ್ಡಿ ಮತ್ತು ಸಾಲಮನ್ನಾ ಮೊತ್ತವನ್ನು ಸರ್ಕಾರವೇ ಭರಿಸುವುದು ಸೇರಿದಂತೆ ಹಲವು ಅಂಶಗಳನ್ನು ಪರಿಗಣಿಸಿ ಡಿಸಿಸಿ ಬ್ಯಾಂಕ್ ಸಾರ್ವಜನಿಕ ಪ್ರಾಧಿಕಾರವೆಂದು ಘೋಷಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಮಾಹಿತಿ ಹಕ್ಕು ಅಧಿನಿಯಮದ ಕಲಂ 4(1)(ಎ) ಮತ್ತು 4(1)(ಬಿ) ಅಡಿಯಲ್ಲಿ ಕಡ್ಡಾಯ ಮಾಹಿತಿಯನ್ನು ಪ್ರಕಟಿಸಿ, ಸಾರ್ವಜನಿಕ ಮಾಹಿತಿ ಅಧಿಕಾರಿ ಹಾಗೂ ಪ್ರಥಮ ಮೇಲ್ಮನವಿ ಪ್ರಾಧಿಕಾರಿಯನ್ನು ನೇಮಿಸುವಂತೆ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ, ಸಹಕಾರ ಸಂಘಗಳ ನಿಬಂಧಕರು ಹಾಗೂ ಕಲಬುರಗಿ ಜಂಟಿ ನಿಬಂಧಕರಿಗೆ ಆಯೋಗ ಸೂಚನೆ ನೀಡಿದೆ.

ಬಾಕ್ಸ್: ಜುಲೈನಲ್ಲಿ 526 ಪ್ರಕರಣಗಳ ವಿಲೇವಾರಿ, ₹60 ಸಾವಿರ ದಂಡ

ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠವು ಜುಲೈ ತಿಂಗಳಲ್ಲಿ 767 ಪ್ರಕರಣಗಳ ವಿಚಾರಣೆ ನಡೆಸಿ, ಅವುಗಳಲ್ಲಿ 526 ಪ್ರಕರಣಗಳನ್ನು ವಿಲೇವಾರಿ ಮಾಡಿದೆ.

ಮಾಹಿತಿ ನೀಡಲು ನಿರ್ಲಕ್ಷ್ಯ ತೋರಿದ ಅಧಿಕಾರಿಗಳಿಗೆ ಒಟ್ಟು ₹60 ಸಾವಿರ ದಂಡ ವಿಧಿಸಲಾಗಿದ್ದು, ಆರು ಮೇಲ್ಮನವಿದಾರರಿಗೆ ₹27 ಸಾವಿರ ಪರಿಹಾರ ನೀಡಲು ಆದೇಶಿಸಲಾಗಿದೆ.

ಇದಲ್ಲದೆ, 2025ರ ನವೆಂಬರ್ 24ರಿಂದ 2026ರ ಜುಲೈ 31ರವರೆಗೆ ಒಟ್ಟು 5,123 ಪ್ರಕರಣಗಳ ವಿಚಾರಣೆ ನಡೆಸಿ, 2,448 ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ. ಇದೇ ಅವಧಿಯಲ್ಲಿ ₹5.93 ಲಕ್ಷ ದಂಡ ವಿಧಿಸಲಾಗಿದ್ದು, ಅದರಲ್ಲಿ ₹4.72 ಲಕ್ಷ ವಸೂಲಿ ಮಾಡಲಾಗಿದೆ. ಜೊತೆಗೆ ₹86 ಸಾವಿರ ಪರಿಹಾರ ನೀಡಲು ಆದೇಶಿಸಲಾಗಿದೆ.

ವಾಲ್ಮೀಕಿ ನಿಗಮ ಅಧ್ಯಕ್ಷ ಸ್ಥಾನಕ್ಕೆ ಬಸನಗೌಡ ದದ್ದಲ್ ರಾಜೀನಾಮೆ

ಒಂದು ಸಚಿವ ಸ್ಥಾನವೂ ದೊರೆಯದಿ ರುವುದು ಜಿಲ್ಲೆಯ ರಾಜಕೀಯ ನಾಯಕರಲ್ಲಿ ಅಸಮಾ ಧಾನಕ್ಕೆ ಕಾರಣವಾಗಿದೆ. ಈ ನಡುವೆ ದದ್ದಲ್ ಅವರ ರಾಜೀನಾಮೆ, ಸಚಿವ ಸ್ಥಾನ ಕೈತಪ್ಪಿದ ಅಸಮಾಧಾನದ ಪ್ರತಿಫಲನವೇ ಎಂಬ ಪ್ರಶ್ನೆಯನ್ನು ಹುಟ್ಟುಹಾಕಿದೆ. ಆದರೆ ರಾಜೀನಾಮೆ ಪತ್ರದಲ್ಲಿ ಅವರು ಯಾವುದೇ ಕಾರಣವನ್ನು ಉಲ್ಲೇಖಿಸಿಲ್ಲ.

ಸದ್ಯ ಮುಖ್ಯಮಂತ್ರಿ ಅವರಿಂದ ರಾಜೀನಾಮೆ ಅಂಗೀಕಾರವಾಗಿ ದೆಯೇ ಎಂಬ ಬಗ್ಗೆ ಅಧಿಕೃತ ಮಾಹಿತಿ ಲಭ್ಯವಾಗಿಲ್ಲ. ರಾಜೀನಾಮೆಯ ನಂತರ ಬಸನಗೌಡ ದದ್ದಲ್ ಅವರ ಮುಂದಿನ ರಾಜಕೀಯ ನಡೆ ಏನಾಗ ಲಿದೆ ಹಾಗೂ ರಾಜ್ಯ ಕಾಂಗ್ರೆಸ್‌ನಲ್ಲಿ ಇದರ ಪರಿಣಾಮ ಹೇಗಿರಲಿದೆ ಎಂಬುದರ ಬಗ್ಗೆ ತೀವ್ರ ಚರ್ಚೆ ನಡೆಯುತ್ತಿದೆ.

ವೈಟಿಪಿಎಸ್ ಗುತ್ತಿಗೆ ಕಾರ್ಮಿಕರ ಸಂಘದ ಗೌರವ ಅಧ್ಯಕ್ಷರಿಗೆ ಕೊಲೆ ಬೆದರಿಕೆ ಆರೋಪ; ಪೊಲೀಸ್ ಠಾಣೆಗೆ ದೂರು

ಸಂಘದ ವತಿಯಿಂದ ಒತ್ತಾಯಿಸ ಲಾಗಿತ್ತು. ಆಡಳಿತ ಮಂಡಳಿ ಬೇಡಿಕೆ ಗಳನ್ನು ಒಪ್ಪಿಕೊಂಡ ಬಳಿಕ ಸಭೆ ಮುಕ್ತಾಯಗೊಂಡಿತ್ತು.

ಆದರೆ, ಅದೇ ರಾತ್ರಿ ಮತ್ತೊಂ ದು ಗುತ್ತಿಗೆ ಕಾರ್ಮಿಕರ ಸಂಘದ ಅಧ್ಯಕ್ಷ ಎಂ.ಡಿ. ಶೋಭಾಜ್ ಅವರು ವಾಟ್ಸ್‌ಆಪ್ ಕರೆ ಮಾಡಿ, ತಮ್ಮ ಸಂಘದ ಸದಸ್ಯರನ್ನು ಬೇರೆ ಯೂನಿಯನ್‌ಗೆ ಸೇರಿಸಿಕೊಂಡಿರುವ ವಿಚಾರ ಪ್ರಸ್ತಾಪಿಸಿ ಅವಾಚ್ಯ ಶಬ್ದಗಳಿಂದ ನಿಂದಿಸುವುದರ ಜೊತೆಗೆ, ನಿನ್ನನ್ನೂ, ನಿನ್ನ ಕುಟುಂಬ ವನ್ನೂ ಸಾಯಿಸುತ್ತೇನೆ ಎಂದು ಜೀವ ಬೆದರಿಕೆ ಹಾಕಿದ್ದಾರೆ ಎಂದು ಲಕ್ಷ್ಮಿಕಾಂತರೆಡ್ಡಿ ದೂರಿನಲ್ಲಿ ಆರೋಪಿಸಿ ದ್ದಾರೆ.

ಈ ಘಟನೆ ಕಾರ್ಮಿಕ ಸಂಘಗಳ ನಡುವಿನ ಸಂಘರ್ಷಕ್ಕೆ ಹೊಸ ತಿರುವು ನೀಡಿದ್ದು, ಬೆದರಿಕೆ ಹಾಕಿದ ವ್ಯಕ್ತಿಯ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಲಕ್ಷ್ಮಿಕಾಂತರೆಡ್ಡಿ ಪೊಲೀಸರಿಗೆ ಮನವಿ ಮಾಡಿದ್ದಾರೆ.

ಗ್ರಾಮೀಣ ಪೊಲೀಸ್ ಠಾಣೆ ದೂರು ಸ್ವೀಕರಿಸಿದ್ದು, ಪ್ರಕರಣದ ಕುರಿತು ತನಿಖೆ ಆರಂಭಿಸಿದೆ.

ಕರ್ನಾಟಕದ ಭತ್ತದ ಕಣಜಗಳಲ್ಲಿ ಏರುಪೇರು; ಬಿತ್ತನೆಯೂ ಕಡಿಮೆ, ಅಕ್ಕಿ ದರ ಮತ್ತೆ ಏರಿಕೆ

ನಾನು 40 ವರ್ಷದಿಂದ ಅಕ್ಕಿ ವ್ಯಾಪಾರದಲ್ಲಿ ತೊಡಗಿದ್ದೇನೆ. ಆದರೆ ದರ ಈ ರೀತಿ ಏರಿಕೆಯಾಗಿರುವುದು ಇದೇ ಮೊದಲು. ಭತ್ತದ ಬಿತ್ತನೆ ಪ್ರಮಾಣವೂ ಕಡಿಮೆಯಾಗಿರುವುದು ಉತ್ಪಾದನೆ ಕಡಿಮೆಯಾಗಲು ದಾರಿಯಾಗಿದೆ. ಕೃಷಿ ಇಲಾಖೆ ಈ ವಿಚಾರದಲ್ಲಿ ರೈತರಲ್ಲಿ ಜಾಗೃತಿ ಇನ್ನಷ್ಟು ಹೆಚ್ಚಿಸಬೇಕು ಎಂದು ಅಕ್ಕಿ ಗಿರಣಿ ಮಾಲೀಕರ ಸಂಘದ ರಾಜ್ಯ ಉಪಾಧ್ಯಕ್ಷ ಹೇಮಯ್ಯ ಸ್ವಾಮಿ ಹೇಳುತ್ತಾರೆ.

ರಾಯಚೂರು, ಕೊಪ್ಪಳ, ಬಳ್ಳಾರಿ ಭಾಗದಲ್ಲಿ ಮಳೆಗಿಂತ ನಾಲೆ ನೀರು ಆಶ್ರಯಿಸಿಯೇ ಬಿತ್ತನೇ ಮಾಡಿಕೊಂಡು ಬರಲಾಗುತ್ತಿದೆ. ಮೇ ಗೆ ಸಸಿಮಡಿ ಮಾಡಿಕೊಂಡು ಎರಡು ತಿಂಗಳು ಕಾದರೂ ಮಳೆ ಹೆಚ್ಚಾಗಿ ಬರಲಿಲ್ಲ. ತುಂಗಭದ್ರಾ ಜಲಾಶಯದಲ್ಲೂ ನೀರಿಲ್ಲದೇ ನಾಲೆಗೆ ನೀರು ಹರಿದಿಲ್ಲ. ಇದರಿಂದ ಬಿತ್ತನೆ ಪ್ರಮಾಣ ತಗ್ಗಿದೆ. ಕಳೆದ ವರ್ಷವೂ ಕ್ರಸ್ಟ್ ಗೇಟ್ ಮುರಿದು ನೀರು ಹರಿಸಿರಲಿಲ್ಲ. ಈ ಬಾರಿ ಇಂತಹ ಸನ್ನಿವೇಶ. ಈಗ ಮಳೆಯಾಗಿ ಜಲಾಶಯಕ್ಕೆ ನೀರು ಬರುತ್ತಿರುವುದರಿಂದ ಮುಂದೆ ಏನಾಗುತ್ತದೋ ನೋಡಬೇಕು. ಆಶಾದಾಯಕವಾಗಿಯಂತೂ ಇದ್ದೇವೆ ಎನ್ನುವುದು ರೈತ ರಾಜಶೇಖರ ತೆಗ್ಗಿ ಅವರ ಅಭಿಪ್ರಾಯ.

ಬಹುಮುಖ ಪ್ರತಿಭೆ ಶ್ರೀ ಗೌರಿ ಪಲ್ಲಕ್ಕಿ ರಾಷ್ಟ್ರೀಯ ಪ್ರಶಸ್ತಿಗೆ ಆಯ್ಕೆ

ಸಂಘದ ಅಧ್ಯಕ್ಷರಾದ ಮುರಳಿ ಮೋಹನ ಶೆಟ್ಟಿ, ಮತ್ತು ಗೋವಾ ಶಾಸಕರು. ಸಚಿವರಿಂದ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ ಎಂದು ಕದಂಬ ಫೌಂಡೇಶನ್ ಅಧ್ಯಕ್ಷ ಬಾಳೇಶ್ ತಿಳಿಸಿದ್ದಾರೆ.

ಕೆಡಿಎ 50:50 ಯೋಜನೆಯಡಿ 769 ನಿವೇಶನಗಳ ಪಾರದರ್ಶಕ ಲಾಟರಿ ಹಂಚಿಕೆ : ಶಾಸಕ ಬಸವರಾಜ ಮತ್ತಿಮಡು



ಕಲಬುರಗಿ,ಆ.05-

ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರ (ಕೆಡಿಎ) ವತಿಯಿಂದ ಡಾ. ಖಮರ್-ಉಲ್-ಇಸ್ಲಾಂ ಹಾಗರಗಾ 50:50 ರೈತರ ಸಹಭಾಗಿತ್ವದ ವಸತಿ ಯೋಜನೆಯಡಿ 769 ನಿವೇಶನಗಳನ್ನು ಲಾಟರಿ ಮೂಲಕ ಪಾರದರ್ಶಕವಾಗಿ ಹಂಚಿಕೆ ಮಾಡಲಾಯಿತು.

ನಗರದ ಗುಲ್ಬರ್ಗಾ ವಿಶ್ವವಿದ್ಯಾಲಯದ ಡಾ. ಬಿ.ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ಮಂಗಳವಾರ ನಡೆದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕಲಬುರಗಿ ಗ್ರಾಮೀಣ ಕ್ಷೇತ್ರದ ಶಾಸಕ ಬಸವರಾಜ ಮತ್ತಿಮಡು, ಯಾವುದೇ ಮಧ್ಯವರ್ತಿಗಳಿಗೆ ಅವಕಾಶ ನೀಡದೆ ಅರ್ಹ ಫಲಾನುಭವಿಗಳಿಗೆ ಲಾಟರಿ ಮೂಲಕ ನಿವೇಶನ ಹಂಚಿಕೆ ಮಾಡುತ್ತಿರುವುದು ಶ್ಲಾಘನೀಯ ಎಂದು ಹೇಳಿದರು.

ಹಿಂದೆ ನಿವೇಶನ ಹಂಚಿಕೆ ಕುರಿತು ಸಾರ್ವಜನಿಕರಿಂದ ದೂರುಗಳು ಬರುತ್ತಿದ್ದವು. ಆದರೆ, ಕೆಡಿಎ ಅಧ್ಯಕ್ಷ ಮಜಹರ್ ಆಲಂ ಖಾನ್ ನೇತೃತ್ವದಲ್ಲಿ ಪಾರದರ್ಶಕ ವ್ಯವಸ್ಥೆ ಜಾರಿಗೊಂಡಿರುವುದು ಮಾದರಿಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮಾಜಿ ಸೈನಿಕರು, ಬಡವರು ಹಾಗೂ ನಿವೇಶನ ರಹಿತ ಕುಟುಂಬಗಳಿಗೆ ಸರ್ಕಾರದ ನಿಯಮಾನುಸಾರ ಆದ್ಯತೆ ಮತ್ತು ಸಬ್ಸಿಡಿ ಸೌಲಭ್ಯ ಕಲ್ಪಿಸಬೇಕು ಎಂದು ಸೂಚಿಸಿದ ಅವರು, ಹಾಗರಗಾ ಬಡಾವಣೆಯಲ್ಲಿ ರಸ್ತೆ, ಕುಡಿಯುವ ನೀರು ಸೇರಿದಂತೆ ಮೂಲಸೌಕರ್ಯ ಅಭಿವೃದ್ಧಿಗೆ ಟೆಂಡರ್ ಪ್ರಕ್ರಿಯೆ ಆರಂಭವಾಗಿದ್ದು, ಶೀಘ್ರದಲ್ಲೇ ಕಾಮಗಾರಿ ಪೂರ್ಣಗೊಳ್ಳಲಿದೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಸಸಿಗೆ ನೀರೆರೆಯುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕೆಡಿಎ ಅಧ್ಯಕ್ಷ ಮಜಹರ್ ಆಲಂ ಖಾನ್ ಮಾತನಾಡಿ, ಸಚಿವ ಪ್ರಿಯಾಂಕ್ ಖರ್ಗೆ, ಶಾಸಕಿ ಕನೀಜ್ ಫಾತಿಮಾ ಹಾಗೂ ಶಾಸಕ ಅಲ್ಲಮಪ್ರಭು ಪಾಟೀಲ ಅವರ ಪ್ರಯತ್ನದಿಂದ ಯೋಜನೆಗೆ 2023ರ ನವೆಂಬರ್‌ನಲ್ಲಿ ಸಚಿವ ಸಂಪುಟದ ಅನುಮೋದನೆ ದೊರೆತಿದೆ ಎಂದು ಹೇಳಿದರು.

ಯೋಜನೆಗೆ ಸಲ್ಲಿಕೆಯಾಗಿದ್ದ 6,253 ಅರ್ಜಿಗಳ ಪರಿಶೀಲನೆ ಬಳಿಕ 117 ಎಕರೆ 5 ಗುಂಟೆ ಪ್ರದೇಶದಲ್ಲಿ ಅಭಿವೃದ್ಧಿಪಡಿಸಿರುವ ಬಡಾವಣೆಯ 769 ನಿವೇಶನಗಳನ್ನು ಲಾಟರಿ ಮೂಲಕ ಹಂಚಿಕೆ ಮಾಡಲಾಗಿದೆ ಎಂದು ವಿವರಿಸಿದರು.

ಲಾಟರಿ ಪ್ರಕ್ರಿಯೆ ಶಾಸಕರು, ಜಿಲ್ಲಾಧಿಕಾರಿ, ಮಹಾನಗರ ಪಾಲಿಕೆ ಆಯುಕ್ತರು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಸಮ್ಮುಖದಲ್ಲಿ ನಡೆಯಿತು. ಎಸ್‌ಟಿ ವರ್ಗದಲ್ಲಿ ಸಂಗೀತಾ ಶರಣಪ್ಪ ಮೇತ್ರೆ, ಎಸ್‌ಸಿ ವರ್ಗದಲ್ಲಿ ಪ್ರೇಮಲತಾ ಹಾಗೂ ಸಾಮಾನ್ಯ ವರ್ಗದಲ್ಲಿ ಸಿದ್ದಿಕ್ ಮಾಶಾಹುದ ಅಹಮದ್ ಸೇರಿದಂತೆ ಅರ್ಹ ಫಲಾನುಭವಿಗಳಿಗೆ ನಿವೇಶನ ಹಂಚಿಕೆ ಮಾಡಲಾಯಿತು.

ಸಾರ್ವಜನಿಕರ ಸಮ್ಮುಖದಲ್ಲಿ ನಡೆದ ಲಾಟರಿ ಪ್ರಕ್ರಿಯೆಗೆ ವ್ಯಾಪಕ ಮೆಚ್ಚುಗೆ ವ್ಯಕ್ತವಾಯಿತು.

ಕಾರ್ಯಕ್ರಮದಲ್ಲಿ ಮಹಾನಗರ ಪಾಲಿಕೆಯ ಮಹಾಪೌರ ವರ್ಷ ರಾಜೀವ ಜಾನೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ್ ಸಿಂಧೆ, ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಶೈಲೇಂದ್ರ ಸಿಂಗ್, ಅರಣ್ಯ ಇಲಾಖೆ ಉಪ ಅರಣ್ಯ ಸಂರಕ್ಷಣಾಧಿಕಾರಿ (ಡಿಎಫ್‌ಒ) ಆಶಿಶ್ ರೆಡ್ಡಿ, ಪಾಲಿಕೆ ಸದಸ್ಯರಾದ ಅಯಾಜ್ ಖಾನ್, ರಿಯಾಜ್ ಅಹಮದ್, ಖುಸ್ರೋ ಜಾಗೀದಾರ್ ಲಿಯಾಕತ್ ಪಾಟೀಲ್, ಸಾಜಿದ್ ಕಲ್ಯಾಣಿ, ಸಚಿನ್ ಶಿರವಾಳ್ ಸೇರಿದಂತೆ ಜನಪ್ರತಿನಿಧಿಗಳು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

2026-27ನೇ ಸಾಲಿನ ವಿಕಸಿತ ಭಾರತ ಜೀರಾಮ್‌ಜೀ ಕ್ರಿಯಾ ಯೋಜನೆ ತಯಾರಿಕೆ

ಕೊಪ್ಪಳ ಆ.05-

2026-27ನೇ ಸಾಲಿನ ವಿಕಸಿತ ಭಾರತ ಜೀರಾಮ್‌ಜೀ (ಎಂಜಿಎನ್‌ಆರ್‌ಇಜಿಎ) ಕ್ರಿಯಾ ಯೋಜನೆ ಸಿದ್ಧಪಡಿಸುವ ಸಂಬಂಧ ಕೊಪ್ಪಳ ತಾಲೂಕಿನ ಬಹದ್ದೂರಬಂಡಿ ಗ್ರಾಮ ಪಂಚಾಯತಿಯಲ್ಲಿ ಮಂಗಳವಾರ (ಆ. 4ರಂದು) ವಿಶೇಷ ಗ್ರಾಮಸಭೆ ನಡೆಯಿತು.


ಬಹದ್ದೂರಬಂಡಿ ಗ್ರಾಮ ಪಂಚಾಯತಿ ಆವರಣದಲ್ಲಿ ನಡೆದ ಸಭೆಯಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಬಸವರಾಜ ಕಿರ್ದಿ ಅವರು ಮಾತನಾಡಿ, ರೈತರು ಹಾಗೂ ಕೂಲಿಕಾರರ ಆರ್ಥಿಕ ಸದೃಢತೆಗೆ ವಿಕಸಿತ ಭಾರತ ಜೀರಾಮ್‌ಜೀ ಯೋಜನೆ ಗ್ರಾಮೀಣ ಭಾಗಕ್ಕೆ ವರದಾನವಾಗಲಿದೆ. ಗ್ರಾಮ ಪಂಚಾಯತಿ, ಕೃಷಿ, ತೋಟಗಾರಿಕೆ, ಅರಣ್ಯ, ರೇಷ್ಮೆ ಸೇರಿದಂತೆ ವಿವಿಧ ಇಲಾಖೆಗಳ ಮೂಲಕ ವೈಯಕ್ತಿಕ ಹಾಗೂ ಸಾರ್ವಜನಿಕ ಕಾಮಗಾರಿಗಳನ್ನು ಕೈಗೊಳ್ಳಲು ಅವಕಾಶವಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ತಾಲೂಕು ಐಇಸಿ ಸಂಯೋಜಕ ದೇವರಾಜ ಪತ್ತಾರ ಅವರು ಮಾತನಾಡಿ, ಗ್ರಾಮೀಣ ಭಾಗದ ಕೂಲಿಕಾರರು ಗುಳೆ ಹೋಗುವುದನ್ನು ತಡೆದು ಸ್ಥಳೀಯವಾಗಿ ಒಂದು ಕುಟುಂಬಕ್ಕೆ 125 ದಿನಗಳ ಉದ್ಯೋಗ ಒದಗಿಸುವುದು ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದರು. ಪುರುಷ ಮತ್ತು ಮಹಿಳೆಯರಿಗೆ ಸಮಾನ ಕೂಲಿ ನಿಗದಿಪಡಿಸಲಾಗಿದ್ದು, ಜಲ ಸಂರಕ್ಷಣೆ, ನೀರಾವರಿ, ಅಂತರ್ಜಲ ಮರುಪೂರಣ, ಜಲಾನಯನ ಪ್ರದೇಶ ಅಭಿವೃದ್ಧಿ ಹಾಗೂ ಜಲಮೂಲಗಳ ಪುನಶ್ಚೇತನ ಕಾಮಗಾರಿಗಳಿಗೆ ಆದ್ಯತೆ ನೀಡಲಾಗಿದೆ ಎಂದು ತಿಳಿಸಿದರು. ಪ್ರಸ್ತುತ ಯೋಜನೆಯಡಿ ಪ್ರತಿ ಮಾನವ ದಿನಕ್ಕೆ 382 ಕೂಲಿ ನಿಗದಿಪಡಿಸಲಾಗಿದ್ದು, ಜಾನುವಾರು ಶೆಡ್, ಮೇಕೆ ಶೆಡ್, ಕೃಷಿಹೊಂಡ, ಬದು ನಿರ್ಮಾಣ, ಕೋಳಿ ಶೆಡ್ ಸೇರಿದಂತೆ 318 ವಿಧದ ವೈಯಕ್ತಿಕ ಕಾಮಗಾರಿಗಳನ್ನು ಕೈಗೊಳ್ಳಲು ಅವಕಾಶವಿದೆ.

ಸಂಜೀವಿನಿ ಯೋಜನೆಯ ತಾಲೂಕು ಕಾರ್ಯಕ್ರಮ ವ್ಯವಸ್ಥಾಪಕ ಸುನೀಲ್ ಅವರು ಮಾತನಾಡಿ, ಸಂಜೀವಿನಿ ಸಂಘದ ಮಹಿಳೆಯರು ವೈಯಕ್ತಿಕ ಕಾಮಗಾರಿಗಳಿಗೆ ಆದ್ಯತೆ ನೀಡಿ ಯೋಜನೆಯ ಸೌಲಭ್ಯಗಳನ್ನು ಪಡೆದು ಶಾಶ್ವತ ಆದಾಯ ಗಳಿಸಬೇಕು ಎಂದು ಸಲಹೆ ನೀಡಿದರು.

ಗ್ರಾಮ ಪಂಚಾಯತಿ ಆಡಳಿತಾಧಿಕಾರಿ ನಾಗರತ್ನ ಅಧ್ಯಕ್ಷತೆ ವಹಿಸಿದ್ದರು. ಪಶುವೈದ್ಯಾಧಿಕಾರಿ ವಿನಯ ಅಂಗಡಿ, ತಾಂತ್ರಿಕ ಸಹಾಯಕ ಗುರುರಾಜ, ಶ್ರೀ ಟಿಪ್ಪು ಸುಲ್ತಾನ ಗ್ರಾಮ ಪಂಚಾಯತಿ ಮಟ್ಟದ ಒಕ್ಕೂಟದ ಅಧ್ಯಕ್ಷೆ ರತ್ನಮ್ಮ ಹೊಸಳ್ಳಿ, ಎಂಬಿಕೆ ಶಕುಂತಲಾ, ಸಖಿ ಚಿನ್ನಮ್ಮ, ಗ್ರಾಮ ಪಂಚಾಯತಿ ಸಿಬ್ಬಂದಿಗಳಾದ ಮೆಹಬೂಬ, ಕನಕರಾಯ, ಗ್ರಾಮ ಕಾಯಕ ಮಿತ್ರ ಭಾಗ್ಯ ಹಾದಿಮನಿ, ರೈತರು, ಸಂಜೀವಿನಿ ಯೋಜನೆಯ ಒಕ್ಕೂಟದ ಮಹಿಳೆಯರು, ಕೃಷಿ ಗ್ರಾಮಸ್ಥರು, ಕಾಯಕ ಬಂಧುಗಳು ಹಾಗೂ ಗ್ರಾಮಸ್ಥರು ಸಭೆಯಲ್ಲಿ ಭಾಗವಹಿಸಿದ್ದರು.

ತಾಯಿ ಸ್ಮರಣೆಯೊಂದಿಗೆ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುವುದು ಶ್ಲಾಘನೀಯ: ಡಾ.ಗವಿಸಿದ್ಧಪ್ಪ ಪಾಟೀಲ



ಕಲಬುರಗಿ,ಆ.05-

ಇಂದಿನ ದಿನಗಳಲ್ಲಿ ಮಾನವೀಯತೆ, ಸಂಬಂಧಗಳು ಹಾಗೂ ತಾಯಿತನದ ಮೌಲ್ಯಗಳು ಕ್ಷೀಣಿಸುತ್ತಿರುವ ಸಂದರ್ಭದಲ್ಲಿ ತಾಯಿಯನ್ನು ಸ್ಮರಿಸಿ ವಿದ್ಯಾರ್ಥಿಗಳನ್ನು ಸನ್ಮಾನಿಸುವ ಕಾರ್ಯ ಅಪೂರ್ವವಾಗಿದೆ ಎಂದು ಹಿರಿಯ ಸಾಹಿತಿ ಡಾ. ಗವಿಸಿದ್ಧಪ್ಪ ಪಾಟೀಲ ಹೇಳಿದರು.

ಚಂದನಕೇರಾದ ಸರ್ಕಾರಿ ಪದವಿ ಪೂರ್ವ ಕಾಲೇಜು ಹಾಗೂ ಸಿದ್ಧಾರ್ಥ ಶಿಕ್ಷಣ ಕಲ್ಯಾಣ ಟ್ರಸ್ಟ್, ಕಲಬುರಗಿ ಸಂಯುಕ್ತ ಆಶ್ರಯದಲ್ಲಿ ದಿ. ನೀಲಮ್ಮ ಶಂಕರಪ್ಪ ಬಂಧು ಸಿದ್ದೇಶ್ವರ ಅವರ 17ನೇ ಪುಣ್ಯಸ್ಮರಣೆ ಅಂಗವಾಗಿ ಆಯೋಜಿಸಿದ್ದ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಗರಿಷ್ಠ ಅಂಕ ಪಡೆದ ವಿದ್ಯಾರ್ಥಿಗಳ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಡಾ. ಕೆ.ಎಸ್. ಬಂಧು ಹಾಗೂ ಮಹಾದೇವಿ ಬಂಧು ದಂಪತಿ ಐದು ಪಿಯುಸಿ ಮತ್ತು ಐದು ಎಸ್‌ಎಸ್‌ಎಲ್‌ಸಿ ಶಾಲೆಗಳ ಗರಿಷ್ಠ ಅಂಕ ಪಡೆದ ವಿದ್ಯಾರ್ಥಿಗಳಿಗೆ ತಲಾ 5,000 ರೂ. ನಗದು ಹಾಗೂ ಪ್ರಮಾಣಪತ್ರ ನೀಡಿ ಗೌರವಿಸುತ್ತಿರುವುದು ಇತರರಿಗೆ ಮಾದರಿಯಾಗಿದೆ ಎಂದು ಹೇಳಿದರು.

ತಮ್ಮ ಬಡತನದ ಬದುಕಿನ ಅನುಭವಗಳನ್ನು ಸ್ಮರಿಸಿದ ಅವರು, ಪೋಷಕರ ಪ್ರೋತ್ಸಾಹವೇ ಶಿಕ್ಷಣ ಮತ್ತು ಸಾಹಿತ್ಯ ಕ್ಷೇತ್ರದಲ್ಲಿ ಸಾಧನೆ ಮಾಡಲು ಪ್ರೇರಣೆಯಾಯಿತು ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಲೇಖಕ ಡಾ. ರಾಜಕುಮಾರ ಮಾಳಗೆ ಮಾತನಾಡಿ, ಸಮಾಜದಲ್ಲಿ ವೃದ್ಧಾಶ್ರಮಗಳ ಸಂಖ್ಯೆ ಹೆಚ್ಚುತ್ತಿರುವುದು ಕಳವಳಕಾರಿ ಬೆಳವಣಿಗೆಯಾಗಿದೆ. ತಾಯಿಯ ಸೇವೆ ಮತ್ತು ಗೌರವವನ್ನು ಎಂದಿಗೂ ಮರೆಯಬಾರದು ಎಂದು ಹೇಳಿದರು.

ಶಿಕ್ಷಣಪ್ರೇಮಿ ರಾಮರಾವ್ ಪಾಟೀಲ, ಹಿರಿಯ ಮುಖಂಡ ಕುಪೇಂದ್ರರಾವ್ ಫತ್ತೇಪೂರ, ವಕೀಲ ಪ್ರಕಾಶ ಬೋವಿ, ಮುಖ್ಯ ಗುರು ಬಸವಂತರೆಡ್ಡಿ ಹಾಗೂ ಶಿಕ್ಷಣ ತಜ್ಞ ಶಿವಶಂಕರ ತರನಳ್ಳಿ ಮಾತನಾಡಿ ತಾಯಿ-ತಂದೆಯರ ಸೇವೆಯ ಮಹತ್ವವನ್ನು ವಿವರಿಸಿದರು.

ಈ ಸಂದರ್ಭದಲ್ಲಿ ಪಿಯುಸಿಯಲ್ಲಿ ಗರಿಷ್ಠ ಅಂಕ ಪಡೆದ ಕುಮಾರಿ ಐಶ್ವರ್ಯ ಶಿವಶರಣಪ್ಪ ಅವರಿಗೆ ₹5,000 ನಗದು ಹಾಗೂ ಪ್ರಮಾಣಪತ್ರ ನೀಡಿ ಸನ್ಮಾನಿಸಲಾಯಿತು. ಇನ್ನೂ 11 ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ಮತ್ತು ಪುಸ್ತಕಗಳನ್ನು ವಿತರಿಸಲಾಯಿತು.

ನಿವೃತ್ತ ಉಪನ್ಯಾಸಕ ಹಾಗೂ ಸಾಹಿತಿ ಡಾ. ಕೆ.ಎಸ್. ಬಂಧು ಮಾತನಾಡಿ, ಕೇವಲ ಪೂಜೆ-ಪುನಸ್ಕಾರ ಮಾಡುವುದಕ್ಕಿಂತ ವಿದ್ಯಾರ್ಥಿಗಳ ಮಧ್ಯೆ ಇಂತಹ ಕಾರ್ಯಕ್ರಮಗಳನ್ನು ಆಯೋಜಿಸುವುದರಿಂದ ಶಿಕ್ಷಣಕ್ಕೆ ಹೆಚ್ಚಿನ ಪ್ರೋತ್ಸಾಹ ಸಿಗುತ್ತದೆ. ತಾಯಿಯ ಋಣವನ್ನು ತೀರಿಸಲು ಸಾಧ್ಯವಿಲ್ಲ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮುಖ್ಯ ಗುರು ಆದಾವ್ ಪಠಾಣ್, ಉಪನ್ಯಾಸಕರಾದ ಜಗದೀಶ ಕೊಡದೂರ, ಸುನೀತಾ ಶೆಟ್ಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಅಂಕಿತಾ ಸ್ವಾಗತಿಸಿದರು, ಸಂಘಮಿತ್ರೆ ಪಟ್ನಾಯಕ ಕಾರ್ಯಕ್ರಮ ನಿರೂಪಿಸಿದರು ಹಾಗೂ ಪ್ರಿಯಾ ವಂದಿಸಿದರು.

ಕಿನ್ನಾಳ ಪ್ರಾ.ಆ.ಕೇಂದ್ರದಲ್ಲಿ ವಿಶ್ವ ಸ್ತನ್ಯಪಾನ ಸಪ್ತಾಹ ಜಾಗೃತಿ ಕಾರ್ಯಕ್ರಮ

ಕೊಪ್ಪಳ ಆ.05-

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕಾ ಆರೋಗ್ಯಾಧಿಕಾರಿಗಳ ಕಛೇರಿ, ಕೊಪ್ಪಳ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಕಿನ್ನಾಳ ಇವರ ಸಂಯುಕ್ತಾಶ್ರಯದಲ್ಲಿ ಮಂಗಳವಾರದದು ವಿಶ್ವ ಸ್ತನ್ಯಪಾನ ಸಪ್ತಾಹ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.



ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ. ಪ್ರಕಾಶ್ ವಿ., ಪ್ರತಿ ವರ್ಷ ಆಗಸ್ಟ್ ಮೊದಲನೇ ವಾರ (1-7ನೇ ದಿನ)ದಲ್ಲಿ ''ವಿಶ್ವ ಸ್ತನ್ಯಪಾನ ಸಪ್ತಾಹ'' ಜಾಗೃತಿ ಕಾರ್ಯಕ್ರಮ ಆಚರಿಸಲಾಗುತ್ತದೆ. ಇದರ ಉದ್ದೇಶ ತಾಯಿಯ ಎದೆಹಾಲು ಶಿಶುವಿಗೆ ನೀಡುವ ವಿಧಾನಗಳ ಬಗ್ಗೆ ಗರ್ಭಿಣಿ, ಬಾಣಂತಿಯರಿಗೆ ಹಾಗೂ ಸಾರ್ವಜನಿಕರಿಗೆ ಅರಿವು ಮೂಡಿಸುವುದಾಗಿದೆ. ''ತಾಯಿಯ ಹಾಲು ಮಗುವಿನ ಮೊದಲ ಹಕ್ಕು-ಆರೋಗ್ಯಕರ ಬದುಕಿನ ಭದ್ರ ಅಡಿಪಾಯ'' ಎಂಬ ಈ ವರ್ಷದ ಘೋಷವಾಕ್ಯದೊಂದಿಗೆ ಕಾರ್ಯಕ್ರಮವನ್ನು ಆಚರಿಸಲಾಗುತ್ತದೆ. ಹೆರಿಗೆಯಾದ ಅರ್ಧ ಗಂಟೆಯಲ್ಲಿ ತಾಯಿಯ ಎದೆಹಾಲು ನೀಡಬೇಕು, ಹೆರಿಗೆಯಾದ ಮೂರು ದಿನದಲ್ಲಿ ಬರುವ ಹಳದಿ ಹಾಲಿನಲ್ಲಿ ''ಕೊಲಸ್ಟಾಂ'' ಎಂಬ ರೋಗನಿರೋಧಕ ಶಕ್ತಿ ಹೆಚ್ಚಿರುತ್ತದೆ. ಆರು ತಿಂಗಳವರೆಗೆ ಕೇವಲ ತಾಯಿಯ ಎದೆಹಾಲನ್ನು ಮಾತ್ರ ನೀಡಬೇಕು ಬೇರೇನೂ ನೀಡಬಾರದು. ''ಎದೆಹಾಲು ನೀಡುವುದರಿಂದ ಮಗುವಿನ ಸರ್ವತೋಮುಖ ಬೆಳವಣಿಗೆ ಹೊಂದಲು ಸಾಧ್ಯವಾಗುತ್ತದೆ'' ಮಗುವಿಗೆ ನೀಡುವ ಮೊದಲ ಲಸಿಕೆ ತಾಯಿಯ ಎದೆಹಾಲು. ಎದೆಹಾಲು ಕುಡಿಸುವುದರಿಂದ ತಾಯಿ ಮತ್ತು ಮಗುವಿಗೆ ಬಹಳಷ್ಟು ಉಪಯುಕ್ತವಾಗುತ್ತದೆ. ತಾಯಿ ಮತ್ತು ಮಗುವಿನ ಬಾಂಧವ್ಯ ಹೆಚ್ಚಾಗುತ್ತದೆ. ತಾಯಿಯ ಎದೆಹಾಲು ನೀಡುವುದರಿಂದ ಸ್ತನ ಕ್ಯಾನ್ಸರ್ ಬರುವುದಿಲ್ಲ. ಗರ್ಭಧಾರಣೆ ಮುಂದೂಡುತ್ತದೆ. ಮಗುವಿಗೆ ಸರಳವಾಗಿ ಜೀರ್ಣವಾಗುತ್ತದೆ.

ಎದೆಹಾಲು ಕಾಯಿಸುವ ಅಗತ್ಯವಿಲ್ಲ, ಮಗುವಿಗೆ ಯಾವುದೇ ಕಾರಣಕ್ಕೂ ಬಾಟಲಿ ಹಾಲನ್ನು ನೀಡಬಾರದು, ಒಂದು ವೇಳೆ ಬಾಟಲಿ ಹಾಲನ್ನು ನೀಡಿದರೆ ಮಗುವಿಗೆ ಅತಿಸಾರ ಭೇದಿ ಉಂಟಾಗುವ ಸಾಧ್ಯತೆ ಇರುತ್ತದೆ. ಪ್ರತಿ ತಾಯಿಯು ತನ್ನ ಮಗುವಿಗೆ ದಿನಕ್ಕೆ 10-12 ಬಾರಿ ಎದೆಹಾಲು ನೀಡಬೇಕು. ತಾಯಿಯ ಎದೆಹಾಲು ನೀಡುವುದರಿಂದ ಯಾವುದೇ ರೀತಿಯ ಅಪೌಷ್ಠಿಕತೆ, ನಿಮೋನಿಯಾ ಹಾಗೂ ಇತರೆ ಖಾಯಿಲೆಗಳು ಹರಡದಂತೆ ರಕ್ಷಣೆ ನೀಡುತ್ತದೆ. ಮಗುವಿನ ತೂಕವೂ ಹೆಚ್ಚಾಗುತ್ತದೆ. ಇದರಿಂದ ಅಪೌಷ್ಠಿಕ ಮುಕ್ತ ಸಮಾಜ ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕೊಪ್ಪಳ ತಾಲೂಕಾ ಆರೋಗ್ಯಾಧಿಕಾರಿ ಡಾ. ವೆಂಕಟೇಶ ಅವರು ಮಾತನಾಡಿ, ತಾಯಿಯ ಹಾಲು ಮಗುವಿನ ಉತ್ತಮ ಬೆಳವಣಿಗೆಗೆ ಸಹಕಾರಿ, ತಾಯಿಯ ಆರೋಗ್ಯಕ್ಕೆ ರಕ್ಷಣೆ ಕುರಿತು ವಿವರವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕುಷ್ಠರೋಗ ನಿಯಂತ್ರಣ ಅಧಿಕಾರಿಗಳು ಹಾಗೂ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿಗಳು, ಆಡಳಿತ ವೈದ್ಯಾಧಿಕಾರಿಗಳು ಹಾಗೂ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು, ಆಶಾ ಮೇಲ್ವಿಚಾರಕರು, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳು, ಪ್ರಾ.ಆ.ಸುರಕ್ಷಾಧಿಕಾರಿಗಳು, ಸಿಬ್ಬಂದಿಗಳು, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು ಹಾಗೂ ತಾಯಂದಿರು ಭಾಗವಹಿಸಿ ಯಶಸ್ವಿಗೊಳಿಸಿದರು.

ನಿಮ್ಮೂರು ಸುದ್ದಿ

ಸಂಪಾದಕೀಯ



ಋತುತಾರೆ ಸ್ವಾಗತಾರ್ಹ; ಮಹಿಳಾ ಆರೋಗ್ಯಕ್ಕೆ ಹೊಸ ದಿಕ್ಸೂಚಿ

ಋತುಸ್ರಾವಕ್ಕೆ ಸಂಬಂಧಿಸಿದ ಆರೋಗ್ಯವನ್ನು ಸಮಗ್ರ ಸಾರ್ವಜನಿಕ ಆರೋಗ್ಯ ನೀತಿಯ ಭಾಗವಾಗಿಸುವ ಪ್ರಯತ್ನಗಳು ತೀರಾ ವಿರಳ. ಮುಟ್ಟನ್ನು ಇನ್ನೂ ನಿಷೇಧಿತ ವಿಷಯದಂತೆಯೇ ನೋಡುತ್ತಿರುವ ಇಂತಹ ಸಂದರ್ಭದಲ್ಲಿ ರಾಜ್ಯ ಸರ್ಕಾರ ಘೋಷಿಸಿರುವ 'ಋತುತಾರೆ' ಯೋಜನೆ ಸ್ವಾಗತಾರ್ಹ. ದೇಶದಲ್ಲೇ ಮಹಿಳೆಯರ ಋತುಸಂಬಂಧಿ ಆರೋಗ್ಯಕ್ಕೆ ಪ್ರತ್ಯೇಕ ನೀತಿ ರೂಪಿಸುತ್ತಿರುವ ಮೊದಲ ರಾಜ್ಯ ಎಂಬ ಹೆಗ್ಗಳಿಕೆಗೆ ಕರ್ನಾಟಕ ಪಾತ್ರವಾಗುತ್ತಿರುವುದು ಇನ್ನಷ್ಟು ಮಹತ್ವದ ಸಂಗತಿ.

ಮೊದಲಿನಿಂದಲೂ ಮಹಿಳೆಯರ ಆರೋಗ್ಯ ಬರೀ ಋತುಚಕ್ರ ಶುರುವಾಗುವುದು, ಪ್ರೌಢಾವಸ್ಥೆ, ಗರ್ಭಧಾರಣೆ, ಹೆರಿಗೆ, ಋತುಬಂಧ ಇವುಗಳ ಸುತ್ತಲೇ ಸುತ್ತುತ್ತಿದೆ. ಆದರೆ ಪುರುಷರಿಗೆ ಹೋಲಿಸಿಕೊಂಡರೆ ಅದರ ವ್ಯಾಪ್ತಿ ಇನ್ನೂ ದೊಡ್ಡದು. ಕಿಶೋರಾವಸ್ಥೆಯಿಂದ ಮೆನೋಪಾಸ್ (ಮುಟ್ಟುನಿಲ್ಲುವ) ವರೆಗಿನ ಪ್ರತಿಯೊಂದು ಹಂತದಲ್ಲೂ ಮಹಿಳೆಯರ ಆರೋಗ್ಯದ ಅಗತ್ಯಗಳು ವಿಭಿನ್ನವಾಗಿರುತ್ತವೆ. ಅದರಲ್ಲೂ ಋತುಸ್ರಾವ ಸಹಜ ಜೈವಿಕ ಪ್ರಕ್ರಿಯೆಯಾಗಿದ್ದರೂ, ಅದರ ಬಗ್ಗೆ ವೈಜ್ಞಾನಿಕ ಅರಿವಿಗಿಂತ ಮೂಢನಂಬಿಕೆ ಮತ್ತು ಸಂಕೋಚವೇ ಹೆಚ್ಚಾಗಿದ್ದು, ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆ. ಶಾಲೆ ಬಿಡುವ ಕಿಶೋರಿಯರಿಂದ ಹಿಡಿದು ಕೆಲಸದ ಸ್ಥಳಗಳಲ್ಲಿ ಸೂಕ್ತ ಸೌಲಭ್ಯಗಳ ಕೊರತೆ ಎದುರಿಸುವ ಪ್ರತಿ ಮಹಿಳೆಯರವರೆಗೆ ಈ ಸಮಸ್ಯೆ ವ್ಯಾಪಿಸಿದೆ. ಈ ಹಿನ್ನೆಲೆ ಆರೋಗ್ಯ, ಸ್ವಚ್ಛತೆ, ಪೌಷ್ಟಿಕತೆ ಮತ್ತು ಜಾಗೃತಿಯನ್ನು ಒಂದೇ ನೀತಿಯಡಿ ತರಲು ಸರ್ಕಾರ ಮುಂದಾಗಿರುವುದು ಪ್ರಶಂಸನೀಯ.

ಮುಖ್ಯವಾಗಿ ಈ ಯೋಜನೆಯ ಮೊದಲ ಹಂತವಾಗಿ ಮುಂದಿನ 6 ತಿಂಗಳ ಅವಧಿಯಲ್ಲಿ ಆಶಾ ಕಾರ್ಯಕರ್ತೆಯರು ಪ್ರತಿ ಮನೆಗೆ ಭೇಟಿ ನೀಡಲಿದ್ದು, ಋತುಬಂಧದ ಹಂತದಲ್ಲಿರುವ (ಪ್ರೀ-ಮೆನೋಪಾಸ್ ಮತ್ತು ಪೋಸ್ಟ್-ಮೆನೋಪಾಸ್) ಮಹಿಳೆಯರ ಆರೋಗ್ಯದ ಸ್ಥಿತಿಗತಿ ಮತ್ತು ದತ್ತಾಂಶವನ್ನು () ಸಂಗ್ರಹಿಸಲಾಗುತ್ತದೆ. ಈ ಸಮಯದಲ್ಲಿ ಕಾಡುವ ತೀವ್ರ ಮಾನಸಿಕ ಒತ್ತಡ, ಹಾರ್ಮೋನ್ ಬದಲಾವಣೆ ಹಾಗೂ ಖಿನ್ನತೆಯನ್ನು ನಿವಾರಿಸಲು ಆಪ್ತಸಮಾಲೋಚನೆ ನೀಡಲಾಗುತ್ತದೆ. ದೈಹಿಕ ತೊಂದರೆಗಳು, ಸುಸ್ತು ಮತ್ತು ಇತರೆ ಲಕ್ಷಣಗಳನ್ನು ಎದುರಿಸಲು ಮಹಿಳೆಯರಿಗೆ ಮುಕ್ತವಾಗಿ ಮಾತನಾಡಲು ವೇದಿಕೆ ಕಲ್ಪಿಸಲಾಗುತ್ತದೆ. ಯೋಜನೆಯ ಉಸ್ತುವಾರಿಗೆ ತಜ್ಞ ವೈದ್ಯರ ಸಮಿತಿಯೊಂದನ್ನು ರಚಿಸಲಾಗಿದ್ದು, ಮಹಿಳೆಯರಿಗೆ ಅಗತ್ಯವಿದ್ದಲ್ಲಿ ತಜ್ಞರಿಂದ ವೈದ್ಯಕೀಯ ಚಿಕಿತ್ಸೆ ಮತ್ತು ಮಾರ್ಗದರ್ಶನ ಕೂಡ ಸಿಗಲಿದೆ. ಮೆನೋಪಾಸ್ ಸಮಯದಲ್ಲಿ ಪಾಲಿಸಬೇಕಾದ ಪೌಷ್ಟಿಕ ಆಹಾರ ಪದ್ಧತಿ ಮತ್ತು ನಿಯಮಿತ ವ್ಯಾಯಾಮಗಳ ಬಗ್ಗೆ ತಿಳಿಸಿಕೊಡಲಾಗುತ್ತದೆ. ಮೆನೋಪಾಸ್ ಸಮಯದಲ್ಲಿ ಪಾಲಿಸಬೇಕಾದ ಪೌಷ್ಟಿಕ ಆಹಾರ ಪದ್ಧತಿ ಮತ್ತು ನಿಯಮಿತ ವ್ಯಾಯಾಮಗಳ ಬಗ್ಗೆ ತಿಳಿಸಿಕೊಡಲಾಗುತ್ತದೆ. ಕರ್ನಾಟಕದಲ್ಲಿ ಹಂತಹಂತವಾಗಿ ಈ ಯೋಜನೆಯನ್ನು ಯಶಸ್ವಿಯಾಗಿ ಜಾರಿಗೊಳಿಸಿದ ನಂತರ, ಇದನ್ನು ದೇಶಾದ್ಯಂತ ಜಾರಿಗೆ ತರುವಂತೆ ಕೇಂದ್ರ ಆರೋಗ್ಯ ಸಚಿವರಿಗೆ ಮನವಿ ಸಲ್ಲಿಸುವ ಯೋಜನೆಯನ್ನೂ ಸರ್ಕಾರ ಹೊಂದಿದೆ.

ಈ ಯೋಜನೆಗೆ ಕನ್ನಡದ ಖ್ಯಾತ ನಟಿ ರಮ್ಯಾ ಅವರನ್ನು ಬ್ಯಾಂಡ್ ಅಂಬಾಸಿಡರ್ ಆಗಿ ನೇಮಿಸಿರುವುದು ಸಹ ಗಮನಾರ್ಹ ನಿರ್ಧಾರ. ಸಮಾಜದಲ್ಲಿ ವ್ಯಾಪಕ ಪ್ರಭಾವ ಬೀರಬಹುದಾದಂತಹ ಸಾರ್ವಜನಿಕ ವ್ಯಕ್ತಿಗಳ ಪಾಲ್ಗೊಳ್ಳುವಿಕೆ, ಋತುಸ್ರಾವದ ಬಗ್ಗೆ ಇರುವ ಮುಜುಗರವನ್ನು ಕಡಿಮೆ ಮಾಡಿ ಮುಕ್ತ ಸಂವಾದಕ್ಕೆ ಅವಕಾಶ ಕಲ್ಪಿಸಬಲ್ಲದು. ಮಹಿಳೆಯರ ಆರೋಗ್ಯದಂತಹ ವಿಷಯಗಳಲ್ಲಿ ಜನಜಾಗೃತಿ ಮೂಡಿಸಲು ಇಂತಹ ಮುಖಗಳು ಪರಿಣಾಮಕಾರಿ ಮಾಧ್ಯಮವಾಗುತ್ತವೆ ಎಂಬುದರಲ್ಲಿ ಸಂಶಯವಿಲ್ಲ. ಆದರೆ, ಒಂದು ಯೋಜನೆಯ ಯಶಸ್ಸನ್ನು ತಲುಪಬೇಕಾದವರನ್ನು ತಲುಪಿದೆಯೇ, ಜನರ ಬದುಕಿನಲ್ಲಿ ಬದಲಾವಣೆ ತರುತ್ತಿದೆಯೇ ಎಂಬುದರಿಂದ ಅಳೆಯಬೇಕಿದೆ.

ಸಮಾಜದಲ್ಲಿ ಬದಲಾವಣೆ ತರಬಹುದಾದ ಒಂದೊಳ್ಳೆ ಯೋಜನೆಯನ್ನೇನೋ ಸರ್ಕಾರ ಜಾರಿ ಮಾಡಲು ಮುಂದಾಗಿದೆ. ಆದರೆ, ಅದರ ಅನುಷ್ಠಾನವೂ ಮುಖ್ಯ. ನಗರ ಪ್ರದೇಶಗಳಿಗೆ ಸೀಮಿತವಾಗದೆ ಗ್ರಾಮೀಣ ಮತ್ತು ಹಿಂದುಳಿದ ಪ್ರದೇಶಗಳಿಗೂ ಋತುತಾರೆ ತಲುಪಬೇಕು. ಸಮಾಜದಲ್ಲಿ ಅಲೆಮಾರಿ ಸಮುದಾಯಗಳ ಮಹಿಳೆಯರು, ಕಟ್ಟಡ ನಿರ್ಮಾಣ, ಗಾರ್ಮೆಂಟ್ಸ್ , ಕೃಷಿ ಹಾಗೂ ಇತರ ಅಸಂಘಟಿತ ವಲಯಗಳಲ್ಲಿ ದುಡಿಯುವ ಮಹಿಳಾ ಕಾರ್ಮಿಕರು, ಅಕ್ಷರಜ್ಞಾನವಿಲ್ಲದವರು ಮತ್ತು ಆರೋಗ್ಯ ಸೇವೆಗಳು ಸುಲಭವಾಗಿ ತಲುಪದ ಕುಗ್ರಾಮಗಳ ಮಹಿಳೆಯರಿಗೂ ಈ ಯೋಜನೆ ಸಮಾನವಾಗಿ ತಲುಪಬೇಕು. ಸರ್ಕಾರಿ ಶಾಲೆ, ಕಾಲೇಜು, ಕೈಗಾರಿಕೆ, ಅಂಗನವಾಡಿಗಳು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮೂಲಕ ಜಾಗೃತಿ ಹಾಗೂ ಆರೋಗ್ಯ ಸೇವೆಗಳು ಪರಿಣಾಮಕಾರಿಯಾಗಿ ಒದಗಬೇಕು. ಆಶಾ ಕಾರ್ಯಕರ್ತೆಯರು, ಆರೋಗ್ಯ ಸಿಬ್ಬಂದಿ ಮತ್ತು ಶಿಕ್ಷಕರಿಗೆ ಸೂಕ್ತ ತರಬೇತಿ ನೀಡಬೇಕು. ಸುರಕ್ಷಿತ ಸ್ಯಾನಿಟರಿ ಉತ್ಪನ್ನಗಳ ಲಭ್ಯತೆ, ಅವುಗಳ ಸಮರ್ಪಕ ವಿಲೇವಾರಿ ವ್ಯವಸ್ಥೆ, ಸ್ವಚ್ಛ ಶೌಚಾಲಯಗಳು, ಸಮರ್ಪಕ ನೀರಿನ ವ್ಯವಸ್ಥೆ ಮತ್ತು ಆರೋಗ್ಯ ಸಲಹೆ ಎಲ್ಲರಿಗೂ ಸುಲಭವಾಗಿ ದೊರೆಯುವಂತಾಗಬೇಕು.

ಋತುಸ್ರಾವದ ಹಂತದ ಬಳಿಕ ಜೀವನದ ಮತ್ತೊಂದು ಮಹತ್ವದ ಘಟ್ಟವಾದ ಮೆನೋಪಾಸ್ ಸಮಯದಲ್ಲಿಯೂ ಮಹಿಳೆಯರು ಅನೇಕ ದೈಹಿಕ ಹಾಗೂ ಮಾನಸಿಕ ಬದಲಾವಣೆಗಳನ್ನು ಎದುರಿಸುತ್ತಾರೆ. ನಿದ್ರಾಹೀನತೆ, ಆತಂಕ, ಮನೋಸ್ಥಿತಿಯ ಏರಿಳಿತ, ಮೂಳೆಗಳ ದುರ್ಬಲತೆ, ಹಾರ್ಮೋನ್‌ಗಳಲ್ಲಿನ ಬದಲಾವಣೆ ಸೇರಿದಂತೆ ಹಲವು ಸಮಸ್ಯೆಗಳು ಅವರ ಆರೋಗ್ಯ ಮತ್ತು ಜೀವನದ ಗುಣಮಟ್ಟದ ಮೇಲೆ ಪರಿಣಾಮ ಬೀರುತ್ತವೆ. ಆದರೆ ಈ ಹಂತದ ಬಗ್ಗೆ ಸಮಾಜದಲ್ಲಿ ಸಾಕಷ್ಟು ಅರಿವಿಲ್ಲ. ಅನೇಕ ಮಹಿಳೆಯರು ತಾವು ಅನುಭವಿಸುವ ಬದಲಾವಣೆಗಳನ್ನು ಸಹಜವೆಂದು ಭಾವಿಸಿ ಸಹಿಸಿಕೊಳ್ಳುತ್ತಾರೆ. ಕುಟುಂಬದ ಸದಸ್ಯರು, ಉದ್ಯೋಗದಾತರು ಮತ್ತು ಆರೋಗ್ಯ ವ್ಯವಸ್ಥೆ ಈ ಹಂತದಲ್ಲಿ ಮಹಿಳೆಯರಿಗೆ ಅಗತ್ಯವಾದ ಮಾಹಿತಿ, ವೈದ್ಯಕೀಯ ಸಲಹೆ ಮತ್ತು ಭಾವನಾತ್ಮಕ ಬೆಂಬಲ ನೀಡುವ ಸಂಸ್ಕೃತಿ ಬೆಳೆಸಿಕೊಳ್ಳಬೇಕು. ಮಹಿಳೆಯರ ಆರೋಗ್ಯದ ಬಗ್ಗೆ ಸಮಗ್ರ ನೀತಿ ಎಂದರೆ ಜೀವನದ ಎಲ್ಲ ಹಂತಗಳ ಅಗತ್ಯಗಳನ್ನು ಒಳಗೊಳ್ಳುವ ನೀತಿಯೇ ಆಗಬೇಕು.

ಇದೇ ವೇಳೆ ಪಿಸಿಓಎಸ್, ಎಂಡೊಮೆಟ್ರಿಯೊಸಿಸ್ (ಗರ್ಭಾಶಯದ ಒಳಭಾಗದಲ್ಲಿರುವ ಎಂಡೊಮೆಟ್ರಿಯಮ್ () ಎಂಬ ಅಂಗಾಂಶದಂತೆಯೇ ಇರುವ ಅಂಗಾಂಶವು ಗರ್ಭಾಶಯದ ಹೊರಭಾಗದಲ್ಲಿ ಬೆಳೆಯುವ ಕಾಯಿಲೆ), ರಕ್ತಹೀನತೆ, ಸಂತಾನೋತ್ಪತ್ತಿ ಪ್ರಕ್ರಿಯೆಯಲ್ಲಿ ಅನಾರೋಗ್ಯ, ಮಾನಸಿಕ ಒತ್ತಡ ಸೇರಿದಂತೆ ಮಹಿಳೆಯರನ್ನು ಬಾಧಿಸುವ ಎಲ್ಲಾ ರೀತಿಯ ವಿಷಯಗಳಿಗೂ ಸರ್ಕಾರ ಹೆಚ್ಚಿನ ಆದ್ಯತೆ ನೀಡಬೇಕಿದೆ. ಮಹಿಳೆಯರ ಆರೋಗ್ಯವನ್ನು ಸಾರ್ವಜನಿಕ ಆರೋಗ್ಯ ಮತ್ತು ಸಾಮಾಜಿಕ ನ್ಯಾಯದ ಪ್ರಮುಖ ಅಂಶವೆಂದೇ ಪರಿಗಣಿಸುವ ಸಮಯ ಬಂದಿದೆ. ಆರೋಗ್ಯವಂತ ಮಹಿಳೆ ಎಂದರೆ ಆರೋಗ್ಯವಂತ ಕುಟುಂಬ, ಆರೋಗ್ಯವಂತ ಕುಟುಂಬಗಳೇ ಆರೋಗ್ಯವಂತ ಸಮಾಜದ ಅಡಿಪಾಯ.

ಈ ಯೋಜನೆಗೆ ಅಗತ್ಯವಾದ ಅನುದಾನ, ಪರಿಣಾಮಕಾರಿ ಅನುಷ್ಠಾನ, ನಿರಂತರ ಮೇಲ್ವಿಚಾರಣೆ ಮತ್ತು ವೈಜ್ಞಾನಿಕ ಜಾಗೃತಿ ಅಭಿಯಾನಗಳನ್ನು ಸರ್ಕಾರ ಖಚಿತಪಡಿಸಬೇಕು. ಮಹಿಳೆಯರ ಆರೋಗ್ಯವನ್ನ ಸಾಮಾಜಿಕ ನ್ಯಾಯ, ಆರ್ಥಿಕ ಅಭಿವೃದ್ಧಿ ಮತ್ತು ಮಾನವ ಸಂಪನ್ಮೂಲದ ಹೂಡಿಕೆಯ ದೃಷ್ಟಿಯಿಂದಲೂ ಪರಿಗಣಿಸಬೇಕು. ಆರೋಗ್ಯವಂತ ಮಹಿಳೆ ಶಿಕ್ಷಣದಲ್ಲಿ, ಉದ್ಯೋಗದಲ್ಲಿ, ಕುಟುಂಬದ ನಿರ್ಧಾರಗಳಲ್ಲಿ ಮತ್ತು ಸಮಾಜದ ಎಲ್ಲ ಕ್ಷೇತ್ರಗಳಲ್ಲಿ ಹೆಚ್ಚು ಸಕ್ರಿಯವಾಗಿ ಭಾಗವಹಿಸಬಲ್ಲಳು. ಇದರಿಂದ ಕುಟುಂಬದ ಆರೋಗ್ಯ ಸುಧಾರಿಸುವುದರ ಜೊತೆಗೆ ಸಮಾಜದ ಉತ್ಪಾದಕತೆ ಮತ್ತು ದೇಶದ ಅಭಿವೃದ್ಧಿಗೂ ನೇರ ಕೊಡುಗೆ ದೊರೆಯುತ್ತದೆ. ಮಹಿಳೆಯರ ಆರೋಗ್ಯದ ಬಗ್ಗೆ ಇರುವ ಮುಜುಗರ, ತಾರತಮ್ಯ ಮತ್ತು ನಿರ್ಲಕ್ಷ್ಯಕ್ಕೆ ತೆರೆ ಎಳೆದು, ಅವರ ಆರೋಗ್ಯದ ಅಗತ್ಯಗಳನ್ನು ಪೂರೈಸುವ ನಿಟ್ಟಿನಲ್ಲಿ ನೀತಿ ನಿರೂಪಣೆ ರೂಪಿಸಬೇಕು. ಕರ್ನಾಟಕ ಸರ್ಕಾರದ ಈ ಮಾನವೀಯ, ಮಹಿಳಾಪರ ಋತುತಾರೆ ಆ ದಿಕ್ಕಿನ ಆಶಾದಾಯಕ ಆರಂಭವಾಗಲಿ. ಅದು ಇತರ ರಾಜ್ಯಗಳಿಗೂ ಮಾದರಿಯಾಗಿ ದೇಶವ್ಯಾಪಿ ಮಹಿಳಾ ಆರೋಗ್ಯ ನೀತಿಗಳಿಗೆ ಪ್ರೇರಣೆಯಾಗಲಿ.

ಕಲಬುರಗಿಯಲ್ಲಿ ನೀರಿನ ಹಾಹಾಕಾರ: ಉಜನಿ ಡ್ಯಾಮ್‌ನಿಂದ ರಾಜ್ಯದ ಪಾಲಿನ 15 ಟಿಎಂಸಿ ನೀರು ಬಿಡುಗಡೆಗೆ ರೈತರ ಒತ್ತಾಯ

ಈ ವರ್ಷ 2026ರ ಜೂನ್, ಜುಲೈ ತಿಂಗಳಲ್ಲಿ ಮಳೆ ಕೈ ಕೊಟ್ಟಿರುವುದರಿಂದ ರೈತರ ಜಿವನಾಡಿಯಾಗಿರುವ ಬೆಳೆಗಳಾದ ಕಬ್ಬು, ಹತ್ತಿ ಮೆಣಸಿನಕಾಯಿ ಸೇರಿದಂತೆ ಇತರೆ ನೀರಾವರಿ ಬೆಳೆಗಳು ಒಣಗುತ್ತಿವೆ ದನಕರುಗಳಿಗೆ, ಪ್ರಾಣಿ ಪಕ್ಷಿಗಳಿಗೆ ಮತ್ತು ಸಾರ್ವಜನಿಕ ಕುಡಿಯುವ ನೀರಿಗಾಗಿ ಪರದಾಡುವಂತಾಗಿದೆ. ಕಲಬುರಗಿ ಜಿಲ್ಲೆಯ ಸುಮಾರು ಹಳ್ಳಿಗಳಿಗೆ ಉಜನಿ ಡ್ಯಾಮ್ ಮೂಲಕ ನೀರು ಸರಬರಾಜಾಗುತ್ತದೆ. ಈಗ ಸಾರ್ವಜನಿಕರು, ಪ್ರಾಣಿ ಪಕ್ಷಿಗಳು, ದನಕರುಗಳ ಹಿತದೃಷ್ಟಿಯಿಂದ ಹಾಗೂ ರೈತರ ಉಳಿವಿಗಾಗಿ ನಮ್ಮ ಪಾಲಿನ ನೀರನ್ನು ಹರಿಸಬೇಕು ಎಂಬುದು ರೈತರ ಆಗ್ರಹವಾಗಿದೆ.

ಕಲಬುರಗಿ ಜಿಲ್ಲೆಯಲ್ಲಿ ಮಳೆ ಕೊರತೆಯಾಗಿರುವುದರಿಂದ ಹೆಸರು, ಉದ್ದು, ತೊಗರಿ ಸೇರಿದಂತೆ ಮುಂಗಾರು ಬಿತ್ತನೆ ಕುಂಠಿತವಾಗಿದೆ. ಹಾಗಾಗಿ ಬರಗಾಲವೆಂದು ಘೋಷಿಸಬೇಕು. ಆಲಮಟ್ಟಿ ಡ್ಯಾಮ್‌ನಿಂದ ಕೃಷ್ಣಾ ಮೇಲ್ದಂಡೆ ಯೋಜನೆಯ ಭೀಮಾ ನದಿ ನೀರನ್ನು ನಂಬಿದ ರೈತರು ಕಬ್ಬುಬೆಳೆ ಬಿತ್ತನೆ ಮಾಡಿದ್ದಾರೆ. ಹಾಗಾಗಿ ಈ ರೈತರಿಗೆ ಮತ್ತು ಕಲಬುರಗಿ ಜಿಲ್ಲೆಯ ದನಕರುಗಳಿಗೆ, ಪ್ರಾಣಿಪಕ್ಷಿಗಳಿಗೆ ಅನುಕೂಲವಾಗುವಂತೆ ಸೊನ್ ಬ್ಯಾರೆಜ್(ಇಂದ್ರಪುರಿ ಬ್ಯಾರೆಜ್)ನಿಂದ ಗಾಣಗಾಪುರದವರೆಗೆ ಆಲಮಟ್ಟಿ ಡ್ಯಾಮ್‌ನಿಂದ 2ಟಿಎಂಸಿ ನೀರು ಹರಿಸಬೇಕು. ಮಹಾರಾಷ್ಟ್ರ ಉಜನಿ ಡ್ಯಾಮ್‌ನಿಂದ ಹರಿಸಬೇಕಾಗಿರುವ ನಮ್ಮ ಪಾಲಿನ 15 ನೀರನ್ನು ಬಿಡುಗಡೆ ಮಾಡಬೇಕು. ಗಾಣಗಾಪುರ ದತ್ ಕ್ಷೇತ್ರದ ಭಕ್ತಾದಿಗಳಿಗೆ ಶುದ್ದೀಕರಣಕ್ಕೆ, ಕುಡಿಯುವ ನೀರಿಗೆ, ದನಕರುಗಳಿಗೆ ನೀರೊದಗಿಸಬೇಕು. ಅಲ್ಲದೆ ಕಣಿಕಿ ಗೋ ಶಾಲೆ ತೆರೆಯಬೇಕು.

ಎಲ್ ನಿನೋ ಪರಿಣಾಮ ರಾಜ್ಯಾದ್ಯಂತ ಬರಗಾಲದ ಛಾಯೆ ಆವರಿಸಿದೆ. ಕಲಬುರಗಿ ಜಿಲ್ಲಾದ್ಯಂತ ಜೂನ್, ಜುಲೈ ತಿಂಗಳಲ್ಲಿ ವಾಡಿಕೆಯಷ್ಟು ಮಳೆಯಾಗದೆ ರೈತರು ಚಿಂತಾಜನಕರಾಗಿದ್ದಾರೆ. ಮುಂಗಾರು ಬಿತ್ತನೆಗೆ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಸಾಲ ಸೂಲ ಮಾಡಿ ಬಿತ್ತನೆ ಬೀಜ, ರಸಗೊಬ್ಬರ ಖರಿದಿಸಿದ್ದಾರೆ. ಕಲಬುರಗಿ ಜಿಲ್ಲೆಯ ಕೆಲವು ತಾಲೂಕುಗಳಲ್ಲಿ ಅಲ್ಪಸ್ವಲ್ಪ ಬಿತ್ತನೆಯನ್ನೂ ಮಾಡಿದ್ದಾರೆ. ಮೊಳಕೆ ಒಡೆದ ಬೆಳೆಗಳಾದ ಹೆಸರು, ಉದ್ದು, ತೊಗರಿ, ಸೋಯಾ ಬೆಳೆಗಳಿಗೆ ತೇಂವಾಂಶದ ಕೊರತೆಯಾಗಿದ್ದು, ಬಿಸಲಿನ ತಾಪಮಾನಕ್ಕೆ ಒಣಗುತ್ತಿವೆ. ರೈತರ ರೊಕ್ಕದ ಮಾಲು ಹೆಸರು, ಉದ್ದು ಸಂಪೂರ್ಣವಾಗಿ ಕೈ ಕೊಟ್ಟಂತಾಗಿದೆ.

ಮಳೆ ಹೋಗಿ ಅಟ್ಟ ಸೇರಿದ್ದರಿಂದ ಮುಂಗಾರು ಬಿತ್ತನೆ ಕುಂಠಿತವಾಗಿದೆ. ಮುಂಗಾರು ಬೆಳೆಗಳು ರೈತರಿಗೆ ಲಾಗೋಡಿಗಾಗಿ ಆಸರೆಯಾಗುತ್ತಿದ್ದವು. ಪಾವು(ಸೇರು) ದಾಣಿ(ಧಾನ್ಯ) ಮಾಲು ಇಲ್ಲದೆ ರೈತರ ಬದುಕು ಅಧೋಗತಿಯಾಗಿದೆ. ಮುಂದೆ ಕುಟುಂಬದ ಬದುಕು ನಡೆಸುವುದು ಹೇಗೆ? ದನಕರುಗಳಿಗೆ ಕಣಿಕಿ(ಮೇವು) ಹೇಗೆ ಹೊಂದಿಸುವುದು ಎಂಬ ಚಿಂತೆ ಬಹಳ ಗಂಭಿರವಾಗಿದ್ದು, ರೈತರು ಚಿಂತಾಜನಕರಾಗಿದ್ದಾರೆ.

ಅಂತರ್ಜಲ ಬತ್ತುತ್ತಿದ್ದು, ಬೋರ್‌ವೆಲ್‌ಗಳಲ್ಲಿ ನೀರಿನ ಪ್ರಮಾಣ ಕಡಿಮೆಯಾತ್ತಿದೆ. ತೊಗರಿ ನಾಡು ಬರಡಾಗಿದೆ. ಮಳೆ ಇಲ್ಲದೆ ಕಬ್ಬು ಒಣಗುತ್ತಿದೆ. ಮಹಾರಾಷ್ಟ್ರ ಪುಣೆ ಉಜನಿ ಡ್ಯಾಮ್‌ನಿಂದ ಕರ್ನಾಟಕ ನಮ್ಮ ನೀರಿನ ಪಾಲು 15 ನೀರು ಬಿಡಲು ಸರ್ಕಾರ ಮುಂದಾಗಿ ರೈತರ ನೆರವಿಗೆ ನಿಲ್ಲಬೇಕು ಎಂಬುದು ರೈತ ಸಂಘದ ಒತ್ತಾಯವಾಗಿದೆ

ಕೃಷ್ಣಾ ನದಿಯ ಉಪನದಿಯಾದ ಭೀಮಾ ನದಿಯ ಮೇಲೆ ನಿರ್ಮಿಸಲಾದ ಉಜನಿ ಅಣೆಕಟ್ಟು , ಭೀಮಾ ಅಣೆಕಟ್ಟು ಅಥವಾ ಭೀಮಾ ನೀರಾವರಿ ಯೋಜನೆ ಎಂದೂ ಕರೆಯಲ್ಪಡುತ್ತದೆ. ಇದು ಭಾರತದ ಮಹಾರಾಷ್ಟ್ರ ರಾಜ್ಯದ ಸೋಲಾಪುರ ಜಿಲ್ಲೆಯ ಮಾಢಾ ತಾಲೂಕಿನ ಉಜನಿ ಗ್ರಾಮದ ಬಳಿ ಇರುವ ಮಣ್ಣು ತುಂಬುವ ಮತ್ತು ಕಲ್ಲಿನ



ಗುರುತ್ವಾಕರ್ಷಣೆಯ ಅಣೆಕಟ್ಟು .

ಕರ್ನಾಟಕದಲ್ಲಿ ನೀರಿನ ಹಾಹಾಕಾರ ತುಂಬಾ ಗಂಭೀರವಾಗಿದೆ. ಭೀಮಾ ನದಿಯ ಮೇಲೆ ನೆಲೆಗೊಂಡಿರುವ 117 ಟಿಎಂಸಿ ನೀರಿನ ಸಾಮರ್ಥ್ಯವಿರುವ ಅಣೆಕಟ್ಟು ಪ್ರಾಥವಿ ಂಕವಾಗಿ ಪುಣೆಯ ಮೇಲಿನ ಜಲಾನಯನ ಪ್ರದೇಶದಿಂ ದ(ಉದಾ. ಖಡಕ್ವಾಸ್ಲಾ ವೃತ್ತ) ಒಳಹರಿವು ಮತ್ತು ಹೊರಹರಿ ವನ್ನು ಹೊಂದಿದೆ. ಮಹಾರಾಷ್ಟ್ರದಲ್ಲಿರುವ ಉಜನಿ ಅಣೆಕಟ್ಟು(ಭೀಮಾ ಅಣೆಕಟ್ಟು) ಮಹಾರಾಷ್ಟ್ರ ಮತ್ತು ಕರ್ನಾಟಕ ನಡುವಿನ ನೀರಿನ ಚಲನಶೀಲತೆ ಹರಿವಿನ ದಿಕ್ಕು: ಭೀಮಾ ನದಿ ಮಹಾರಾಷ್ಟ್ರದಿಂದ ಕರ್ನಾಟಕಕ್ಕೆ ಹರಿಯುತ್ತದೆ. ಆದ್ದರಿಂದ, ನೀರು ಮಹಾರಾಷ್ಟ್ರದಿಂದ ಕೆಳಮುಖವಾಗಿ ಕರ್ನಾಟಕದ ಸೀಮೆಯಾದ ಕಲಬುರಗಿಗೂ ಹರಿಯುತ್ತದೆ. ಸಾಂದರ್ಭಿಕವಾಗಿ, ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ಕುಡಿಯುವ ನೀರಿನ ಬಿಕ್ಕಟ್ಟನ್ನು ನಿವಾರಿಸಲು ಉಜನಿ ಮತ್ತು ಕೊಯ್ನಾ ಜಲಾಶಯಗಳಿಂದ ಭೀಮಾ ಮತ್ತು ಕೃಷ್ಣಾ ನದಿಗಳಿಗೆ ನೀರನ್ನು ಬಿಡುಗಡೆ ಮಾಡುವಂತೆ ಮಹಾರಾಷ್ಟ್ರವನ್ನು ಆಗ್ರಹಿಸುವುದು ವಾಸ್ತವವಾಗಿ ಕರ್ನಾಟಕವೇ ಆಗಿದೆ. ಕರ್ನಾಟಕದ ನೀರಿನ ಪಾಲನ್ನು ಉಜನಿ ಡ್ಯಾಮ್‌ನಿಂದ ಬಿಡಬೇಕು.

ಅನ್ನದಾತರು ಸಾಲ ಭಾದೆ ತಾಳಲಾರದೆ ರೈತರ ಸರಣಿ ಆತ್ಮಹತ್ಯೆ ಪ್ರಕರಣಗಳು ದಿನೇ ದಿನೆ ಹೆಚ್ಚಾಗುತ್ತಿವೆ. ರೈತರ ಒಕ್ಕಲುತನ ಬೀದಿಪಾಲಾಗುತ್ತಿದೆ. ಕೋಟಿ ವಿದ್ಯೆಗಿಂತ ಮೇಟಿ ವಿದ್ಯೆ ಮೇಲು ಎಂಬ ಗಾದೆ ಮಾತು ಹುಸಿಯಾಗುತ್ತಿದೆ. ಮಾರುಕಟ್ಟೆಯಲ್ಲಿ ಬೆಂಬಲ ಬೆಲೆ ಸಂಪೂರ್ಣವಾಗಿ ನೆಲಕಚ್ಚಿದ್ದು, ಬೆಂಬಲ ಬೆಲೆ ಇಲ್ಲದೆ ಅನ್ನದಾತರು ನೇಣಿಗೆ ಶರಣಾಗುತ್ತಿದ್ದಾರೆ. ನಮ್ಮನ್ನು ಆಳುವ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಬೆಂಬಲ ಬೆಲೆ ಬಗ್ಗೆ ತಿರುಗಿ ನೊಡುತ್ತಿಲ್ಲ; ಕಿಂಚಿತ್ತೂ ಕಾಳಜಿ ಇಲ್ಲದಂತಾಗಿದೆ. ಕೇವಲ ಮೊಸಳೆ ಕಣ್ಣೀರು ಸುರಿಸುತ್ತಿರುವ ರೈತ ವಿರೋಧಿ ನೀತಿ ಕೈ ಬಿಟ್ಟು ರೈತರ ನೆರವಿಗೆ ಧಾವಿಸಬೇಕು. ಅಲ್ಪ ಸ್ವಲ್ಪ ಬೇಸಿಗೆ ನೀರಾವರಿ ಬೆಳೆಗಳಿಗಾದರೂ ಆಲಮಟ್ಟಿ ಡ್ಯಾಮ್‌ನಿಂದ ಕೃಷ್ಣಾ ಮೇಲ್ದಂಡೆ ಮೂಲಕ ಭೀಮಾ ನದಿಗೆ 2 ಟಿಎಂಸಿ ನೀರು ಹರಿಸಿ ಅಫಜಲಪುರ ಸೊನ್ ಬ್ಯಾರೇಜ್‌ನಿಂದ ಗಾಣಗಾಪುರ ಘತ್ತರ್ಗಿವರೆಗೆ ನೀರು ಹರಿಸಿ, ದನಕರುಗಳಿಗೆ, ಪ್ರಾಣಿ-ಪಕ್ಷಿಗಳಿಗೆ ಹಾಗೂ ಸಾರ್ವಜನಿಕರಿಗೆ ಕುಡಿಯುವ ನೀರು ಬಿಡಬೇಕು.

ಗಾಣಗಾಪುರ ದತ್ತ ಕ್ಷೇತ್ರಕ್ಕೆ ಬರುವಂತಹ ಯಾತ್ರಿಕರಿಗೆ ಸಾರ್ವಜನಿಕ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು. ಶುದ್ದ ನೀರಿಲ್ಲದೆ ಅನಿವಾರ್ಯವಾಗಿ ಗಬ್ಬು ನಾರುತ್ತಿರುವ ನೀರನ್ನೇ ಕುಡಿಯುವ ದುಃಸ್ಥಿತಿ ನಿರ್ಮಾಣವಾಗಿದೆ. ಈ ಗಲೀಜು ನೀರಿನಿಂದ ರೋಗ ರುಜುಣಿ ಕಾಲರ ಹರಡುವ ಸಂಭವವಿದೆ ತಕ್ಷಣವೇ ಸಾರ್ವಜನಿಕ ಶುದ್ದಿಕರಣ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು

ನಮ್ಮ ಭಾಗದಲ್ಲಿ ಹೆಸರಾಂತವಾದ ಭಿಮಾ ನದಿ ನೀರಿನ ಮೇಲೆ ನಂಬಿ ಕುಳಿತ ಜನರಿಗೆ ನಿರಡಿಕೆಯಾದ ಸಮಯದಲ್ಲಿ ಮಹಾರಾಷ್ಟ್ರ ರಾಜ್ಯದ ಪುಣೆ ಉಜನಿ ಡ್ಯಾವ್ ನಿಂದ ನಿರು ಬಿಡಲಾರದೆ ನೆನೆಗುದಿಗೆ ಹಾಕಿ ಕರ್ನಾಟಕದ ಕಲಬುರಗಿ ಜಿಲ್ಲೆಯ ಅನ್ನದಾತರಿಗೆ ಅನ್ಯಾಯ ಮಾಡಿದಂತಾಗಿದೆ ರೈತ ಸಮುದಾಯದ ಜನರು ಹನಿ ಕುಡಿಯುವ ನೀರಿಗಾಗಿ ಜನರು ಪರದಾಡುವಂತಾಗಿದೆ ಕರ್ನಾಟಕ ರಾಜ್ಯ ಸರ್ಕಾರ ಮಾನ್ಯ ಮುಖ್ಯಮಂತ್ರಿಗಳು ಮತ್ತು ಕರ್ನಾಟಕ ರಾಜ್ಯದ ನಿರಾವಾರಿ ಮಂತ್ರಿಗಳು ತಕ್ಷಣವೇ ಉಜನಿ ಡ್ಯಾಮ್ ನಿಂದ ನೀರು ನಮ್ಮ ಕರ್ನಾಟಕದ ಪಾಲಿನ 15 ನೀರು ಬಿಡಿಸಲು ಕರ್ನಾಟಕ ರಾಜ್ಯ ಸರ್ಕಾರ ಮತ್ತು ಮಹಾರಾಷ್ಟ್ರ ರಾಜ್ಯ ಸರ್ಕಾರ ಜಂಟಿ ಸಭೆ ಕರೆದು ಉಜನಿ ಡ್ಯಾಮ್ ನಿಂದ ಕರ್ನಾಟಕ ರಾಜ್ಯದ ಕಲಬುರಗಿ ಜಿಲ್ಲೆಯ ಅಫಜಲಪುರ ಭೀಮಾ ನದಿಗೆ ನಮ್ಮ ನೀರಿನ ಪಾಲು 15 ಬಿಡಿಸಲು ರೈತ ಸಂಘ ಒತ್ತಾಯಿಸುತ್ತದೆ.

ಕೃಷ್ಣಾ ಜಲ ವಿವಾದದ ನ್ಯಾಯಮಂಡಳಿ-2 ಕೃಷ್ಣಾ ನೀರು ಹಂಚಿಕೆ ವಿಧಾನವನ್ನು 2010 ಡಿಸೆಂಬರ್ 30ರಂದು ಆದೇಶ ಪ್ರಕಟಿಸಿತ್ತು. ಹೆಚ್ಚುವರಿ ಹರಿವುಗಳಿಗಾಗಿ ನದಿತೀರದ ರಾಜ್ಯಗಳಾದ ಮಹಾರಾಷ್ಟ್ರ, ಕರ್ನಾಟಕ ಮತ್ತು ಆಂಧ್ರ ಪ್ರದೇಶಕ್ಕೆ ಕೃಷ್ಣಾ ಜಲ ವಿವಾದದ ನ್ಯಾಯಮಂಡಳಿ-2 ಮಾಡಿದ ನೀರಿನ ಶೇ.65ರಷ್ಟು ಹಂಚಿಕೆಯು ಈ ಕೆಳಗಿನಂತಿದೆ:

ಕರ್ನಾಟಕಕ್ಕೆ ಕೊಟ್ಟಿರುವ 177 ಟಿಎಂಸಿ ನೀರಿನ, 130.90 ಟಿಎಂಸಿ ನೀರನ್ನು ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರ ಹಂಚಿಕೆ ಮಾಡಿಲಾಗಿದೆ ಎಂದು ನ್ಯಾಯ ಮಂಡಳಿ ಹೇಳುತ್ತದೆ. ಡ್ಯಾಮ್

ಆಲಮಟ್ಟಿ ಅಣೆಕಟ್ಟೆಯಿಂದ ಬಿಡುಗಡೆಯಾಗುವ ನೀರನ್ನು ನಾರಾಯಣಪುರ ಎಡದಂಡೆ ಕಾಲುವೆ( ) ಡಿಸ್ಟ್ರಿಬ್ಯೂಟರ್-84ದ ಹಳ್ಳದಿಂದ ಅಫಜಲಪುರ ತಾಲೂಕಿನ ಸೊನ್ನ ಬ್ಯಾರೇಜ್ ( )ಗೆ ನೀರನ್ನು ತಲುಪಿಸಲಾಗುತ್ತದೆ. ಅಲ್ಲಿ ಈಗಾಗಲೇ ಸೊನ್ನ ಬ್ಯಾರೇಜ್‌ನಲ್ಲಿ ಸುಮಾರು 1.5 ಟಿಎಂಸಿ ನೀರು ಸಂಗ್ರಹವಾಗಿದೆ. ಈ ಹಿನ್ನೆಲೆಯಲ್ಲಿ ರೈತರು ಹಾಗೂ ಗಾಣಗಾಪುರ ಯಾತ್ರಿಕರು ಘತ್ತರ್ಗಿಯಿಂದ ಗಾಣಗಾಪುರದವರೆಗೆ ಭೀಮಾ ನದಿಯಲ್ಲಿ ನೀರನ್ನು ಹರಿಸಬೇಕು ಎಂದು ಒತ್ತಾಯಿಸಿದ್ದಾರೆ.

ಈ ವರ್ಷ 2026ರ ಜೂನ್, ಜುಲೈ ತಿಂಗಳಲ್ಲಿ ಮಳೆ ಕೈ ಕೊಟ್ಟಿರುವುದರಿಂದ ರೈತರ ಜಿವನಾಡಿಯಾಗಿರುವ ಬೆಳೆಗಳಾದ ಕಬ್ಬು, ಹತ್ತಿ ಮೆಣಸಿನಕಾಯಿ ಸೇರಿದಂತೆ ಇತರೆ ನೀರಾವರಿ ಬೆಳೆಗಳು ಒಣಗುತ್ತಿವೆ ದನಕರುಗಳಿಗೆ, ಪ್ರಾಣಿ ಪಕ್ಷಿಗಳಿಗೆ ಮತ್ತು ಸಾರ್ವಜನಿಕ ಕುಡಿಯುವ ನೀರಿಗಾಗಿ ಪರದಾಡುವಂತಾಗಿದೆ. ಕಲಬುರಗಿ ಜಿಲ್ಲೆಯ ಸುಮಾರು ಹಳ್ಳಿಗಳಿಗೆ ಉಜನಿ ಡ್ಯಾಮ್ ಮೂಲಕ ನೀರು ಸರಬರಾಜಾಗುತ್ತದೆ. ಈಗ ಸಾರ್ವಜನಿಕರು, ಪ್ರಾಣಿ ಪಕ್ಷಿಗಳು, ದನಕರುಗಳ ಹಿತದೃಷ್ಟಿಯಿಂದ ಹಾಗೂ ರೈತರ ಉಳಿವಿಗಾಗಿ ನಮ್ಮ ಪಾಲಿನ ನೀರನ್ನು ಹರಿಸಬೇಕು ಎಂಬುದು ರೈತರ ಆಗ್ರಹವಾಗಿದೆ.

ನಮಗೆ ಸಾವಿನ ದಾರಿಯನ್ನಾದರೂ ತೋರಿ- ಕೆ ಆರ್ ಮಾರುಕಟ್ಟೆ ಬೀದಿ ವ್ಯಾಪಾರಿಗಳ ಆಕ್ರಂದನ


ಬೆಂಗಳೂರಿನ ಬೀದಿಬದಿ ವ್ಯಾಪಾರಿಗಳಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸುವ ಭರವಸೆ ನೀಡಿದ್ದ ರಾಜ್ಯ ಸರ್ಕಾರ, ಆ ಭರವಸೆಯನ್ನು ಜಾರಿಗೊಳಿಸದೆ ಮತ್ತೆ ಫುಟ್‌ಪಾತ್ ತೆರವು ಕಾರ್ಯಾಚರಣೆಗೆ ಇಳಿದಿದೆ. ನಗರದ ಕೆ.ಆರ್. ಮಾರುಕಟ್ಟೆ ಸುತ್ತಮುತ್ತ ಬಿಬಿಎಂಪಿ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ಹಲವು ವರ್ಷಗಳಿಂದ ಜೀವನೋಪಾಯಕ್ಕಾಗಿ ವ್ಯಾಪಾರ ನಡೆಸುತ್ತಿದ್ದ ಬೀದಿಬದಿ ವ್ಯಾಪಾರಿಗಳ ಅಂಗಡಿಗಳನ್ನು ಧ್ವಂಸಗೊಳಿಸಿದ್ದಾರೆ. ನೂರಾರು ಕುಟುಂಬಗಳ ಬದುಕು ಬೀದಿಗೆ ಬಂದಿದೆ.

ಕೆಲವೇ ವಾರಗಳ ಹಿಂದೆ ಇದೇ ವಿಚಾರವಾಗಿ ಬೀದಿಬದಿ ವ್ಯಾಪಾರಿಗಳು ಬೃಹತ್ ಪ್ರತಿಭಟನೆ ನಡೆಸಿದ್ದರು. ಪ್ರತಿಭಟನೆಯ ಬಳಿಕ ಸರ್ಕಾರದ ಪ್ರತಿನಿಧಿಗಳು ಮತ್ತು ಅಧಿಕಾರಿಗಳು ಬೀದಿಬದಿ ವ್ಯಾಪಾರಿಗಳೊಂದಿಗೆ ಸಭೆ ನಡೆಸಿ, ಬೀದಿಬದಿ ವ್ಯಾಪಾರಿಗಳಿಗೆ ಪರ್ಯಾಯ ಸ್ಥಳ ಹಾಗೂ ಪುನರ್ವಸತಿ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಭರವಸೆ ನೀಡಲಾಗಿತ್ತು. ಆದರೆ, ಆ ಭರವಸೆ ಇನ್ನೂ ಕಾರ್ಯರೂಪಕ್ಕೆ ಬಂದಿಲ್ಲ. ಆದರೆ, ಮತ್ತೆ ಬುಲ್ಡೋಜರ್‌ಗಳು ಸದ್ದು ಮಾಡಲಾರಂಭಿಸಿವೆ. ಬೀದಿ ವ್ಯಾಪಾರಿಗಳ ಅಂಗಡಿಗಳ ಮೇಲೆ ದರ್ಪ ಮೆರೆಯುತ್ತಿವೆ.

ಯಾವುದೇ ಪರ್ಯಾಯ ವ್ಯವಸ್ಥೆ ಮಾಡದೇ ಕೆ.ಆರ್. ಮಾರುಕಟ್ಟೆ ಪ್ರದೇಶದಲ್ಲಿ ಮತ್ತೆ ತೆರವು ಕಾರ್ಯಾಚರಣೆ ಆರಂಭಿಸಿರುವುದರಿಂದ ವ್ಯಾಪಾರಿಗಳು ಕಂಗಾಲಾಗಿದ್ದಾರೆ. ಅಧಿಕಾರಿಗಳು ಅಂಗಡಿಗಳನ್ನು ತೆರವುಗೊಳಿಸಿದ್ದು, ತಮ್ಮ ಜೀವನೋಪಾಯವನ್ನೇ ಕಳೆದುಕೊಂಡಿದ್ದೇವೆ ಎಂದು ಈ ದಿನ.ಕಾಮ್ ತಂಡ ಗ್ರೌಂಡ್ ರಿಪೋರ್ಟ್ ಮಾಡಲು ಹೋದಾಗ ಹಲವು ವ್ಯಾಪಾರಿಗಳು ತಮ್ಮ ಅಳಲು ತೋಡಿಕೊಂಡಿದ್ದಾರೆ.

ವಿಕ್ಟೋರಿಯಾ ಆಸ್ಪತ್ರೆಯ ಕಾಂಪೌಂಡ್ ಪಕ್ಕದಲ್ಲಿ ವ್ಯಾಪಾರ ನಡೆಸುತ್ತಿದ್ದ ಸೀನು ಅವರು ಮಾತನಾಡಿ, ''ನಾವು 3035 ವರ್ಷಗಳಿಂದ ಇಲ್ಲಿಯೇ ಅಂಗಡಿ ನಡೆಸಿಕೊಂಡು ಬದುಕುತ್ತಿದ್ದೇವೆ. ಯಾವುದೇ ಪೂರ್ವ ನೋಟಿಸ್ ಅಥವಾ ಸರ್ಕಾರದ ಸ್ಪಷ್ಟ ಆದೇಶವನ್ನೂ ತೋರಿಸದೆ ಅಧಿಕಾರಿಗಳು ಏಕಾಏಕಿ ತೆರವುಗೊಳಿಸಲು ಬಂದಿದ್ದಾರೆ. ಬಿಬಿಎಂಪಿ ನೋಟಿಸ್ ಬಂದಿದೆ ಎಂದು ಹೇಳುವುದನ್ನು ಬಿಟ್ಟರೆ ನಮಗೆ ಯಾವುದೇ ದಾಖಲೆ ತೋರಿಸುತ್ತಿಲ್ಲ'' ಎಂದಿದ್ದಾರೆ.

''ನಾವು ಬಡವರು. ಈ ಅಂಗಡಿಗಳೇ ನಮ್ಮ ಜೀವನಾಧಾರ. ಸರ್ಕಾರಗಳು ಬದಲಾಗುತ್ತವೆ, ನಾಯಕರು ಬದಲಾಗುತ್ತಾರೆ. ಆದರೆ ಕಷ್ಟವಾಗುವುದು ಮಾತ್ರ ನಮ್ಮಂತಹ ಬಡವರಿಗೆ. ಕನಿಷ್ಠ ಒಂದು ತಿಂಗಳು ಅಥವಾ ಮೂರು ತಿಂಗಳಾದರೂ ಸಮಯ ಕೊಟ್ಟಿದ್ದರೆ, ಬೇರೆ ವ್ಯವಸ್ಥೆ ಮಾಡಿಕೊಳ್ಳಬಹುದಿತ್ತು. ಆದರೆ, ಎರಡು ದಿನಗಳಲ್ಲಿ ತೆರವುಗೊಳಿಸುತ್ತೇವೆ ಎಂದು ಹೇಳಿದರೆ ನಾವು ಎಲ್ಲಿ ಹೋಗಬೇಕು? ಬೇರೆ ಅಂಗಡಿ ಆರಂಭಿಸಲು ನಮ್ಮ ಬಳಿ ಹಣವಿಲ್ಲ. ಈ



ವಯಸ್ಸಿನಲ್ಲಿ ನಮಗೆ ಬೇರೆ ಕೆಲಸವೂ ಸಿಗುವುದಿಲ್ಲ. ನಮಗೆ ಸಣ್ಣ ಸಣ್ಣ ಮಕ್ಕಳು ಇದ್ದಾರೆ. ಕುಟುಂಬದ ಬದುಕು ಈ ಅಂಗಡಿಯ ಮೇಲೆಯೇ ನಿಂತಿದೆ. ಸರ್ಕಾರದ ವಿರುದ್ಧ ನ್ಯಾಯಾಲಯಕ್ಕೆ ಹೋಗುವಷ್ಟು ಆರ್ಥಿಕ ಸಾಮರ್ಥ್ಯವೂ ನಮ್ಮಲ್ಲಿಲ್ಲ. ಈಗ ರಸ್ತೆಗಿಳಿಯುವ ಪರಿಸ್ಥಿತಿ ಬಂದಿದೆ. ನಮ್ಮ ಭವಿಷ್ಯ ಏನಾಗುತ್ತದೆ ಎಂಬ ಭಯ ಕಾಡುತ್ತಿದೆ'' ಎಂದು ಅಳಲು ತೋಡಿಕೊಂಡಿದ್ದಾರೆ.

ಚಪ್ಪಲಿ ಹೊಲಿಯುವ ಕೆಲಸ ಮಾಡುವ ಡೇವಿಡ್, ''ನಮ್ಮ ಕುಟುಂಬ 40 ವರ್ಷಗಳಿಂದ ಇಲ್ಲಿಯೇ ದುಡಿದು ಜೀವನ ಸಾಗಿಸುತ್ತಿದೆ. ನಾನು ಇಲ್ಲಿಯೇ ಬೆಳೆದವನು. ಬಿಕಾಂ ಪದವಿ ಪಡೆದಿದ್ದರೂ ಯಾವುದೇ ಉದ್ಯೋಗ ಸಿಕ್ಕಿಲ್ಲ. ಬದುಕು ಸಾಗಿಸಲು ಚಪ್ಪಲಿ ಹೊಲೆಯುವುದು ಮತ್ತು ಶೂ ಪಾಲಿಶ್ ಮಾಡುವ ಕೆಲಸವನ್ನೇ ಅವಲಂಬಿಸಿದ್ದೇನೆ. ದಿನಕ್ಕೆ 200300 ರೂ. ಸಂಪಾದನೆಯಾದರೆ ಅದೇ ನಮ್ಮ ಕುಟುಂಬದ ಆಧಾರ. ಲಕ್ಷಾಂತರ ರೂಪಾಯಿ ಗಳಿಸುವವರಲ್ಲ ನಾವು. ನಮ್ಮಂಥಹ ಬಡವರ ಬದುಕಿನ ಬಗ್ಗೆ ಸರ್ಕಾರಕ್ಕೆ ಕನಿಷ್ಠ ಕರುಣೆಯೂ ಇಲ್ಲದಂತಾಗಿದೆ. ಯಾವುದೇ ಪರ್ಯಾಯ ವ್ಯವಸ್ಥೆ ಮಾಡದೆ ಏಕಾಏಕಿ ಅಂಗಡಿಗಳನ್ನು ತೆರವುಗೊಳಿಸಿರುವುದರಿಂದ ನಮ್ಮ ಜೀವನವೇ ಸಂಕಷ್ಟಕ್ಕೆ ಸಿಲುಕಿದೆ'' ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

''ನನ್ನ ಮಕ್ಕಳ ಶಿಕ್ಷಣದ ಹೊಣೆ ನನ್ನ ಮೇಲಿದೆ. ಸರ್ಕಾರಿ ಶಾಲೆಗಳನ್ನೂ ಸರ್ಕಾರ ಸರಿಯಾಗಿ ನಿರ್ವಹಿಸುತ್ತಿಲ್ಲ. ಪರಿಣಾಮ, ಖಾಸಗಿ ಶಾಲೆಯಲ್ಲಿ ಓದಿಸಬೇಕಾದ ಪರಿಸ್ಥಿತಿ ಇದೆ. ವರ್ಷಕ್ಕೆ ಸಾವಿರಾರು ರೂಪಾಯಿ ಶುಲ್ಕ ಕಟ್ಟಲು ಸಾಲ ಮಾಡಬೇಕಾಗುತ್ತದೆ. ಆ ಸಾಲ ತೀರಿಸಲು ವರ್ಷಪೂರ್ತಿ ದುಡಿಯಬೇಕು. ಈಗ ಅಂಗಡಿಯನ್ನೇ ಕಳೆದುಕೊಂಡರೆ ಕುಟುಂಬವನ್ನು ಹೇಗೆ ನಡೆಸಬೇಕು ಎಂಬ ಆತಂಕ ಕಾಡುತ್ತಿದೆ. ನಮ್ಮಂತಹ ಬಡವರ ಹೊಟ್ಟೆ ಮೇಲೆ ಹೊಡೆದ ಈ ಕ್ರಮಕ್ಕೆ ನ್ಯಾಯ ಸಿಗಬೇಕು. ನಮ್ಮ ನೋವು ಮತ್ತು ಸಂಕಷ್ಟವನ್ನು ಸರ್ಕಾರ ಅರ್ಥ ಮಾಡಿಕೊಳ್ಳಬೇಕು'' ಎಂದು ಒತ್ತಾಯಿಸಿದ್ದಾರೆ.

ತಮ್ಮ ಅಂಗಡಿಯನ್ನು ಅಧಿಕಾರಿಗಳು ಧ್ವಂಸಗೊಳಿಸುತ್ತಿದ್ದ ದೃಶ್ಯವನ್ನು ನೋಡುತ್ತಾ ಕಣ್ಣೀರು ಹಾಕುತ್ತಿದ್ದ ದೀಪಾ ಅವರು ''ನಮ್ಮ ಜೀವನಾಧಾರವನ್ನೇ ಕಸಿದುಕೊಂಡಿದ್ದಾರೆ. 20 ವರ್ಷಗಳಿಂದ ಇಲ್ಲಿಯೇ ಟೀ ಅಂಗಡಿ ನಡೆಸಿಕೊಂಡು ಬದುಕುತ್ತಿದ್ದೇವೆ. ಆದರೆ, ಕೇವಲ ಎರಡು ದಿನಗಳ ಮುಂಚೆ ತೆರವುಗೊಳಿಸುವ ಸೂಚನೆ ನೀಡಿದ್ದಾರೆ. ಇಷ್ಟು ಕಡಿಮೆ ಅವಧಿಯಲ್ಲಿ ನಾವು ಬೇರೆ ವ್ಯವಸ್ಥೆ ಹೇಗೆ ಮಾಡಿಕೊಳ್ಳಬೇಕು? ನಾಳೆಯಿಂದ ನಮ್ಮ ಕುಟುಂಬದ ಬದುಕು ಹೇಗೆ ಸಾಗಿಸಬೇಕು ಎಂಬುದೇ ಗೊತ್ತಾಗುತ್ತಿಲ್ಲ. ಎಲ್ಲಿ ಹೋಗಬೇಕು, ಏನು ಕೆಲಸ ಮಾಡಬೇಕು ಎಂಬ ದಿಕ್ಕೇ ಕಾಣುತ್ತಿಲ್ಲ. ಈಗಿನ ಪರಿಸ್ಥಿತಿಯಲ್ಲಿ ಭಿಕ್ಷೆ ಬೇಡುವುದನ್ನು ಬಿಟ್ಟರೆ ಬೇರೆ ದಾರಿಯೇ ಕಾಣುತ್ತಿಲ್ಲ'' ಎಂದು ಕಣ್ಣೀರು ಹಾಕಿದ್ದಾರೆ.

ಬೀದಿ ಬದಿಯಲ್ಲಿ ಹಣ್ಣಿನ ವ್ಯಾಪಾರ ಮಾಡುವ ಮುನಿರಾಜು ಮಾತನಾಡಿ, ''ನಾನು ಲಿವರ್ ಮತ್ತು ಹೃದಯ ಸಂಬಂಧಿತ ಕಾಯಿಲೆಯಿಂದ ಬಳಲುತ್ತಿದ್ದೇನೆ. ಕಳೆದ 46 ವರ್ಷಗಳಿಂದ ಹಣ್ಣು ಮಾರಾಟ ಮಾಡಿ ಕುಟುಂಬವನ್ನು ನಡೆಸುತ್ತಿದ್ದೇನೆ. ಇದೇ ನಮ್ಮ ಜೀವನಾಧಾರ. ಈಗ ಈ ಅಂಗಡಿಯನ್ನೂ ತೆರವುಗೊಳಿಸಿದರೆ ನನ್ನ ಹೆಂಡತಿ-ಮಕ್ಕಳನ್ನು ಹೇಗೆ ಸಾಕಬೇಕು ಎಂಬುದೇ ಗೊತ್ತಾಗುತ್ತಿಲ್ಲ. ನಮ್ಮಂತಹ ಬಡವರು ಎಲ್ಲಿ ಹೋಗಬೇಕು? ಶ್ರೀಮಂತರಿಗೆ ಮಾತ್ರ ಬದುಕುವ ಹಕ್ಕಿದೆಯೇ? ನಾವು ಕೂಡ ಮತ ಹಾಕಿ ಸರ್ಕಾರವನ್ನು ಆಯ್ಕೆ ಮಾಡಿದ್ದೇವೆ. ಆದರೆ, ನಮ್ಮ ಬದುಕಿನ ಬಗ್ಗೆ ಯಾರೂ ಯೋಚಿಸುತ್ತಿಲ್ಲ. ನಮಗೆ ಬದುಕಲು ದಾರಿ ತೋರಿಸಲಿ, ಇಲ್ಲವೇ ಸಾವಿನ ದಾರಿಯನ್ನಾದರೂ ತೋರಲಿ'' ಎಂದು ಅಳಲು-ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬೀದಿ ಬದಿ ವ್ಯಾಪಾರಿ ಪಚ್ಚಮ್ಮ, ''ಈಗ ನಾವು ಬೀದಿಗೆ ಬಂದಿದ್ದೇವೆ. ಹಲವು ವರ್ಷಗಳಿಂದ ಸಣ್ಣ ವ್ಯಾಪಾರ ಮಾಡಿಕೊಂಡು ಜೀವನ ಸಾಗಿಸುತ್ತಿದ್ದೇವೆ. ಇದೇ ನಮ್ಮ ಜೀವನಾಧಾರವಾಗಿತ್ತು. ಈಗ ಅದನ್ನೂ ತೆರವುಗೊಳಿಸಿರುವುದರಿಂದ ಮುಂದೇನು ಮಾಡಬೇಕು ಎಂಬ ದಿಕ್ಕೇ ಕಾಣುತ್ತಿಲ್ಲ. ಈ ವಯಸ್ಸಿನಲ್ಲಿ ನಮಗೆ ಬೇರೆ ಯಾರು ಕೆಲಸ ಕೊಡುತ್ತಾರೆ? ಮನೆಕೆಲಸಕ್ಕೂ ಯಾರೂ ಕರೆಯುವುದಿಲ್ಲ. ಈ ವ್ಯಾಪಾರದಿಂದಲೇ ಮಕ್ಕಳನ್ನು ಸಾಕಿಕೊಂಡು ಬದುಕುತ್ತಿದ್ದೆವು. ಈಗ ಅಂಗಡಿಯೇ ಇಲ್ಲದಿರುವುದರಿಂದ ನಮ್ಮ ಬದುಕು ಸಂಕಷ್ಟಕ್ಕೆ ಸಿಲುಕಿದೆ. ಸರ್ಕಾರವೇ ನಮ್ಮಂತಹ ಬಡವರಿಗೆ ಪರ್ಯಾಯ ದಾರಿ ತೋರಿಸಬೇಕು. ಇಲ್ಲದಿದ್ದರೆ ಹೇಗೆ ಬದುಕಬೇಕು ಎಂಬುದು ದೇವರಿಗೇ ಗೊತ್ತು'' ಎಂದು ಅವಲತ್ತುಕೊಂಡಿದ್ದಾರೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR